ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 44 ಸಂಚಿಕೆ- 44 | PAGE- 8 ಪುಟ-8 | ಶನಿವಾರ 22.03.2025 | RS.2/- ಬೆಲೆ 2/-

# ಕಲಾಪಕ್ಕೆ ಅಡ್ಡಿ:ವಿಪಕ್ಷಗಳ 18 ಸದಸ್ಯರು 6 ತಿಂಗಳು ಅಮಾನತ್ತು

ಬೆಂಗಳೂರು:ಮಾ.21: ವಿಧಾನಸಭೆ ಕಲಾಪಕ್ಕೆ ಅಡ್ಡಿಪಡಿಸಿದ್ದ ಪ್ರತಿಪಕ್ಷಗಳ 18 ಸದಸ್ಯರನ್ನು 6 ತಿಂಗಳ ಕಾಲ ಅಮಾನತ್ತುಗೊಳಿಸಿ ಸ್ಪೀಕರ್ ಯು.ಟಿ ಖಾದರ್ ರೂಲಿಂಗ್ ಹೊರಡಿಸಿದ್ದಾರೆ.

ವಿಧಾನಸಭೆ ನಡಾವಳಿಯ 348ನೇನಿಯಮದಡಿಶಾಸಕರಾದ ದೊಡ್ಡನಗೌಡ ಪಾಟೀಲ್, ಅಶ್ವಥನಾರಾಯಣ, ಎಸ್. ಆರ್ ವಿಶ್ವನಾಥ್, ಬೈರತಿ ಬಸವರಾಜು, ಎಂ.ಆರ್ ಪಟೇಲ್, ಚನ್ನಬಸಪ್ಪ, ಉಮಾನಾಥ್ ಕೋಟ್ಯನ್, ಸುರೇಶ್ ಗೌಡ, ಶೈಲೇಂದ್ರ ಬೆಲ್ದಾಳೆ, ಶರಣು ಸಲಗಾರ್, ಸಿಕೆರಾಮಮೂರ್ತಿ,ಯಶ್ಪಾಲ್ ಸುವರ್ಣ, ಹರಿಶ್ ಬಿ.ಪಿ, ಭರತ್ ಶೆಟ್ಟಿ, ಬಸವರಾಜ ಮತ್ತಿಮೂಡ್, ಧೀರಜ್ ಮುನಿರಾಜು, ಮುನಿರತ್ನ, ಚಂದ್ರು ಲಮಾಣಿ ಅವರನ್ನ ಅಮಾನತುಗೊಳಿಸಿ ಸ್ಪೀಕರ್ ಯು.ಟಿ ಖಾದರ್ ರೂಲಿಂಗ್ ಹೊರಡಿಸಿದರು. ಸ್ಪೀಕರ್ ರೂಲಿಂಗ್‌ಗೆ ವಿಪಕ್ಷ ಸದಸ್ಯರು ತೀವ್ರಖಂಡನೆ ವ್ಯಕ್ತಪಡಿಸಿದರು.

ಹನಿಟ್ರ್ಯಾಪ್ ಪ್ರಕರಣದ ತನಿಖೆಯನ್ನುಹಾಲಿಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕೆಂದು ಆಗ್ರಹಿಸಿ ವಿಪಕ್ಷಗಳ ಸದಸ್ಯರಿಂದು ವಿಧಾನಸಭೆಯ ಬಾವಿಗೆ ಇಳಿದು ಪ್ರತಿಭಟನೆ ನಡೆಸಿದರು.ಈ ವೇಳೆ ಸ್ಪೀಕರ್ ಖಾದರ್



ಮೇಲೆ ಪೇಪರ್ ಎಸೆದು ಸಿಟ್ಟು ಹೊರ ಹಾಕಿದರು. ಇದರಿಂದ ಅಸಮಾಧಾನಗೊಂಡ ಸ್ಪೀಕರ್ ಕಲಾಪವನ್ನುಮುಂದೂಡಿದ್ದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಸರ್ಕಾರ ಹನಿಟ್ರ್ಯಾಪ್ ಗೆ ಒಳಗಾದ ಸಚಿವರ ಮಾತು ಕೇಳದೆ ಕಣ್ಣು ಮುಚ್ಚಿ ಕುಳಿತಿದೆ. ಸರ್ಕಾರ ಸತ್ತು ಹೋಗಿದೆ. ಯಾರು ಸಚಿವ ಕೆ.ಎನ್. ರಾಜಣ್ಣ ಅವರ ಬೆಂಬಲಕ್ಕಿಲ್ಲ. ಸಹಾಯ ಮಾಡದಿದ್ದ ಮೇಲೆ ಹನಿಟ್ರ್ಯಾಪ್ ಕುರಿತು ಸಚಿವರು ಹೇಳಿಕೆ ನೀಡಲು ಸಭಾಧ್ಯಕ್ಷರು ಏಕೆ ಅನುಮತಿ ನೀಡಿದರು ಎಂದು ಪ್ರಶ್ನಿಸಿದರು.

ಸಭಾಧ್ಯಕ್ಷರು, ಈ ಪೀಠದಲ್ಲಿ ಕುಳಿತು ಮಾತನಾಡುವುದು ದೊಡ್ಡಗೌರವ. ಪ್ರತಿಯೊಬ್ಬರು ಪೀಠಕ್ಕೆ ಗೌರವ ನೀಡಬೇಕು. ಯಾರು ಪೀಠಕ್ಕಿಂತದೊಡ್ಡವರಲ್ಲ. ವೈಯಕ್ತಿಕ ಭಾವನೇ ಪೀಠಕ್ಕಿಂತ ಮುಖ್ಯವಲ್ಲ. ಸಂವಿಧಾನದ ಪಾವಿತ್ರ್ಯತೆ ಕಾಪಾಡಬೇಕು. ಸದನ ಅತ್ಯಂತ ಪಾವಿತ್ರ್ಯವಾದದ್ದು, ಸದನದಲ್ಲಿ ಅಗೌರವಯುತವಾಗಿ ನಡೆದುಕೊಂಡರೆ ಅದನ್ನು ಸಹಿಸಲು ಸಾಧ್ಯವಿಲ್ಲ. ಯು.ಟಿ.ಖಾದರ್ ಕ್ಷಮಿಸುತ್ತಾರೆ. ಆದರೆ ಪೀಠ ಸಹಿಸುವುದಿಲ್ಲ ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ

(2ನೇ ಪುಟ ನೋಡಿ)

**ಶಾಸಕರಿಗೆ ಷರತ್ತು ಅನ್ವಯ**

1. ಶಾಸಕರು ವಿಧಾನಸಭೆಯ ಸಭಾಂಗಣ, ಲಾಬಿ ಮತ್ತು ಗ್ಯಾಲರಿಗಳಿಗೆ ಪ್ರವೇಶಿಸುವಂತಿಲ್ಲ.
2. ಶಾಸಕರು ಸದಸ್ಯರಾಗಿರುವ ವಿಧಾನಮಂಡಲದ/ವಿಧಾನ ಸಭೆಯ ಸ್ಥಾಯಿ ಸಮಿತಿಗಳ ಸಭೆಗಳಲ್ಲಿಯೂ ಭಾಗವಹಿಸುವಂತಿಲ್ಲ.
3. ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯಲ್ಲಿ ಅವರುಗಳ ಹೆಸರಿನಲ್ಲಿ ಯಾವುದೇ ವಿಷಯವನ್ನು ನಮೂದು ಮಾಡತಕ್ಕದಲ್ಲ.
4. ಅಮಾನತ್ತಿನ ಅವಧಿಯಲ್ಲಿ ಅವರು ನೀಡುವ ಯಾವುದೇ ಸೂಚನೆಗಳನ್ನು ಸ್ವೀಕರಿಸಲಾಗುವುದಿಲ್ಲ.
5. ಅಮಾನತ್ತಿನ ಅವಧಿಯಲ್ಲಿ ನಡೆಯುವ ಸಮಿತಿಗಳ ಚುನಾವಣೆಯಲ್ಲಿ ಅವರು ಮತದಾನ ಮಾಡುವಂತಿಲ್ಲ.
6. ಅಮಾನತ್ತಿನ ಅವಧಿಯಲ್ಲಿ ಅವರುಗಳು ಯಾವುದೇ ದಿನಭತ್ಯೆಯನ್ನು ಪಡೆಯಲು ಅರ್ಹರಿರುವುದಿಲ್ಲ.

## ಬೀದರ್‌ನಲ್ಲಿ ಗುಡುಗು ಸಹಿತ ಮಳೆ: ವಾತಾವರಣ ಸಂಪೂರ್ಣ ತಂಪು




ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 21 : ನಗರ ಸೇರಿದಂತೆ ತಾಲ್ಲೂಕಿನ ಹಲವೆಡೆಗಳಲ್ಲಿ ಶುಕ್ರವಾರ ಗುಡುಗು ಸಹಿತ ಮಳೆಯಾಗಿದೆ.

ಮಧ್ಯಾಹ್ನ 3.30ರಿಂದ ಸಂಜೆ 4.30ರ ತನಕ ಗುಡುಗು ಸಹಿತ ಸಾಧಾರಣ ಮಳೆಯಾಗಿದ್ದು, ತಾಪಮಾನದಲ್ಲಿ ಭಾರಿ ಇಳಿಕೆಯಾಗಿದೆ. ವಾತಾವರಣ ಸಂಪೂರ್ಣ ತಂಪಾಗಿದೆ. ಬಿಸಿಲಿನಿಂದ ಕಂಗೆಟ್ಟಿದ್ದ ಜನ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

(2ನೇ ಪುಟ ನೋಡಿ)

## ಬೀದರ್ ನಲ್ಲಿ 91 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ




ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 21: ಇಂದಿನಿಂದ ರಾಜ್ಯಾದ್ಯಂತ ಎಸ್‌ಎಸ್‌ಎಲ್ಸಿ ಪರೀಕ್ಷೆಆರಂಭವಾಗಿದ್ದು, ಬೀದರ್ ಜಿಲ್ಲೆಯಲ್ಲಿ ಜಿಲ್ಲಾಡಳಿತದಿಂದ ಸಕಲ ಸಿದ್ಧತೆಗಳೊಂದಿಗೆ ಪರೀಕ್ಷೆ ನಡೆಯುತ್ತಿವೆ.

ಏಪ್ರಿಲ್ 4 ರವರಗೆ ಎಸ್‌ಎಸ್‌ಎಲ್ಸಿ ಪರೀಕ್ಷೆ ನಡೆಯಲಿದ್ದು, ಬೀದರ್ ಜಿಲ್ಲೆಯಾದ್ಯಂತ ಒಟ್ಟು 91 ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್ಸಿ ಪರೀಕ್ಷೆ ಜರುಗುತ್ತಿವೆ. ಈ ಬಾರಿ ಒಟ್ಟು 28602 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಪ್ರೆಶರ್ 25,409, ಖಾಸಗಿ 840, ರಿಪೀಟರ್ಸ್ 2,353 ವಿದ್ಯಾರ್ಥಿಗಳು ಪರೀಕ್ಷಾರ್ಥಿಗಳಾಗಿದ್ದಾರೆ.

(2ನೇ ಪುಟ ನೋಡಿ)

## ಹನಿಟ್ರ್ಯಾಪ್: ಯಾರನ್ನು ರಕ್ಷಿಸುವ ಪ್ರಶ್ನೆಯಿಲ್ಲ:ಮುಖ್ಯಮಂತ್ರಿ ಸಿದ್ಧಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.21:ಹನಿಟ್ರ್ಯಾಪ್‌ಗೆ ಸಂಬಂಧಪಟ್ಟಂತೆ ಯಾರನ್ನೂ ರಕ್ಷಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಈ ವಿಷಯದಲ್ಲಿ ಯಾರು ತಪ್ಪತಸ್ಥರುರಾಗಿರುವರೋ ಅವರನ್ನು ಕಾನೂನಿನ ರೀತ್ಯ ಶಿಕ್ಷೆಗೆ ಒಳಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.



ಇಂದು ವಿಧಾನಸಭೆಯ ಸದನದಲ್ಲಿ ಹನಿಟ್ರ್ಯಾಪ್ ವಿಷಯವನ್ನು ವಿರೋಧಪಕ್ಷದ ನಾಯಕರು ಹಾಗೂ ಇನ್ನಿತರ ಶಾಸಕರು ಪ್ರಸ್ತಾಪಿಸಿದರು. ಈ ಬಗ್ಗೆ ಮುಖ್ಯಮಂತ್ರಿಗಳು ಉತ್ತರಿಸಬೇಕು, ಯಾರೇ ಕಾರಣರಾದರೂ ಅವರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಬೇಕು. ಇದು ಸದನದಲ್ಲಿ ಪ್ರಸ್ತಾಪವಾದ ವಿಷಯವಾದ್ದರಿಂದ ಸದನದ ಮೌಲ್ಯವನ್ನು ಎತ್ತಿಹಿಡಿಯಬೇಕು ಎಂದು ಕೋರಿದರು.

ನಿನ್ನೆ ಸದನದಲ್ಲಿ ರಾಜಣ್ಣ ಅವರು ಪ್ರಸ್ತಾಪಿಸಿರುವ ವಿಷಯಕ್ಕೆ ಗೃಹ ಮಂತ್ರಿಗಳು ಅಂತಹವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಇದು ಒಂದು ಗಂಭೀರವಾದ ವಿಷಯವಾದ್ದರಿಂದ ದೂರು ನೀಡಿದಲ್ಲಿ ದೂರಿನಲ್ಲಿರುವ ಅಂಶಗಳ ಮೇಲೆ ಸೂಕ್ತ ಕ್ರಮ ವಹಿಸಬೇಕಾಗುತ್ತದೆ ಎಂದರು.

ಈ ಪ್ರಕರಣ ಕೇವಲ ಒಬ್ಬರಿಗೆ ಸೀಮಿತವಲ್ಲ, ಯಾವುದೇ ಪಕ್ಷದ ಶಾಸಕರಾಗಲಿ, ಸಚಿವರಾಗಲಿ ಈ ಪ್ರಕರಣದಲ್ಲಿ ಸಿಲುಕಿದ್ದರೆ ಅವರಿಗೆ ರಕ್ಷಣೆ ಕೊಡಬೇಕಾಗಿರುವುದು ಸರ್ಕಾರದ ಜವಾಬ್ದಾರಿ. ರಾಜಣ್ಣ ಅವರು ದೂರು ಕೊಟ್ಟರೆ ಉನ್ನತ ಮಟ್ಟದ ತನಿಖೆ ಮಾಡಿಸಲಾಗುತ್ತದೆ ಎಂದು ಗೃಹ ಸಚಿವರು ಉತ್ತರಿಸಿದ ಮೇಲೆ ಪುನ: ಪ್ರಸ್ತಾಪಿಸುವುದು ತರವಲ್ಲ. ಹನಿಟ್ರ್ಯಾಪ್ ಯಾರೇ ಮಾಡಿಸಿದ್ದರೂ ಅದು ತಪ್ಪೇ ಎಂದರು. ರಾಜಣ್ಣ ಅವರು ಯಾರ ಹೆಸರನ್ನೂ ಹೇಳಿಲ್ಲ, ಹೇಳಿದ್ದರೆ ಕ್ರಮ

(2ನೇ ಪುಟ ನೋಡಿ)

## ಧರ್ಮ ಕಾರ್ಯಕ್ಕೆ ಬೀದರ್ ಜಿಲ್ಲೆ ಸದಾ ಎತ್ತಿದ ಕೈ: ರಂಭಾಪುರಿ ಜಗದ್ಗುರುಗಳು

ಬೀದರ. ಮಾ. 21 : ಬೀದರ್ ಜಿಲ್ಲೆ ಯಾವತ್ತೂ ಧರ್ಮ ಕಾರ್ಯಗಳಲ್ಲಿ ಸದಾ ಎತ್ತಿದ ಕೈ ಎಂದು ಪರಮ ಪೂಜ್ಯ ರಂಭಾಪುರಿ ಜಗದ್ಗುರುಗಳು ತಿಳಿಸಿದರು.

ಶುಕ್ರವಾರ ನಗರದ ಕೆ.ಇ.ಬಿ ಹತ್ತಿರದಲ್ಲಿ ಉದ್ಯಮಿ ಪಂಚಯ್ಯ ಸ್ವಾಮಿ ಅವರ ನೂತನ ಉದ್ಯಮಕ್ಕೆ ಚಾಲನೆ ನೀಡಿ ನಂತರ ಧರ್ಮಸಭೆ ಉದ್ದೇಶಿಸಿ ಮಾತನಾಡಿದರು.

ಅಲ್ಲಿ ನೆರೆದ ಭಕ್ತಾದಿಗಳನ್ನು ಉದ್ದೇಶಿಸಿ ಜಗಮಹಾನಗರದಲ್ಲಿ ಭವ್ಯವಾಗಿ ಸುಂದರವಾಗಿ ನಿರ್ಮಾಣಗೊಂಡಿರುವ ಪಂಚಾಯ್ಯ ಸ್ವಾಮಿಯವರ ಸಂಕೀರ್ಣದ ಉದ್ಘಾಟನಾ ಸಮಾರಂಭದಲ್ಲಿ ಜಗದ್ಗುರು ಪಂಚಾಚಾರ್ಯರು ಪಾಲ್ಗೊಂಡಿರುವುದು ನಗರದ ಸಮಸ್ತ ಜನರಿಗೆ ಅಭಿಮಾನಿಗಳೇ ತಾಯಂದಿರ ಮುದ್ದು ಮಕ್ಕಳ ಬೀದರ್ ಮಹಾನಗರಕ್ಕೆ ರಂಭಾಪುರಿ ಜಗದ್ಗುರುಗಳು ಅಧಿಕೃತ ಕಾರ್ಯಕ್ರಮಕ್ಕಾಗಿ ದಯಮಾಡಿಸುವಂಥದ್ದು ತಮ್ಮೆಲ್ಲರಿಗೂ ಗೊತ್ತಿರುವಂಥ ಸಂಗತಿ.

ಬೀದರ್ ನಗರಕ್ಕೆ ಹತ್ತಿರವಾಗಿರುವಂತಹ ಕೋಳಾರ ಪರಿಸರದಲ್ಲಿ ಸುಂದರವಾಗಿ ಅಲ್ಲಿ ನಿರ್ಮಾಣಗೊಂಡಿರುವಂತಹ ತಾವೆಲ್ಲ ನೋಡಿರಬಹುದು ಜಗದ್ಗುರು ರೇಣುಕಾಚಾರ್ಯರ ಕ್ಷೇತ್ರದ ವೀರಭದ್ರ ಸ್ವಾಮಿ ಭದ್ರಕಾಳಿ ಈ ಮೂರು ದೇವತಾ ವಿಗ್ರಹಗಳನ್ನು ಪ್ರತಿಷ್ಠಾಪನೆಯನ್ನು ಮಾಡಿ ಎಷ್ಟೋ ದಿನ ಮಹಾಪೂಜೆ, ನೆರವೇರಿಸಿ ಆಶೀರ್ವಾದ ಮಾಡಲಾಗಿದೆ ಆ ಪರಿಸರದಲ್ಲಿ ಜಗದ್ಗುರುಗಳು ಬಂದಾಗ




ಅಲ್ಲಿ ವಾಸ್ತವ ಮಾಡಲಿಕ್ಕೆ ಅನುಕೂಲ ಆಗಬೇಕೆಂದು ಎಂಬ ಪರಿಶುಂಹಾಸನ ಈಶ್ವರ ಯಾತ್ರೆ ನಿವಾಸವನ್ನ ಸಂಚಾಲಕರಾದಂತಹ ಷಣ್ಮುಖ ಸ್ವಾಮಿಯವರು ಮತ್ತು ಅವರ ಪ್ರಶ್ನೆ ಎಲ್ಲ ಸದಸ್ಯರು ಸ್ವಾಭಿಮಾನದಿಂದ ನಿರ್ಮಾಣವನ್ನಮಾಡ್ತಾ ಇದ್ದಾರೆ.

ಆ ಕಟ್ಟಡ ಕೊನೆ ಹಂತದಲ್ಲಿ ಕೆಲಸ ನಡಿತಾ ಇದೆ ಹೀಗಾಗಿ ಈ ವರ್ಷ ಮಹಾಪೂಜೆ ಮಾಡಿದರೊಳಗಾಗಿ ಆ ಕಟ್ಟುತ್ತಿರುವ ಮಂದಿರಕ್ಕೆ ಹತ್ತಿರವಿಗಳ ಸಹಕಾರ ಹೆಚ್ಚು ದೊರಕಿ ಆದಷ್ಟು ಬೇಗನೆ ಉದ್ಘಾಟನೆ ಆಗಬೇಕೆಂಬ ಇಚ್ಛೆಯಿಂದ ಬೆಂದರೆ ಈ ನಗರದ ಅನೇಕ ಧರ್ಮ ಅಭಿಮಾನಿಗಳೆಲ್ಲರೂ ಜಗದ್ಗುರುಗಳ ಪಾದಪೂಜೆ ನೆರವೇರಿದೆ ಅದೇ ಪ್ರಕಾರವಾಗಿ ಗುಂಡಯ್ಯ ಸ್ವಾಮಿ ಮತ್ತು ಶಾಂತಯ್ಯ ಸ್ವಾಮಿಯವರ ಈ ಸಂಕೀರ್ಣ ಅವರ ಸಮಾದ ಕಾಕಾ ಈ ಕಟ್ಟಡ ಸಾಕ್ಷಿಯಾಗಿದೆ ಅಂತ ಹೇಳಿ ಆಶಿಸುತ್ತೇನೆ ಅಂಬಾಪುರಿಗಳ ಆಶೀರ್ವಾದದಿಂದ ಆ ಸಹೋದರರು ಪಂಚಾಚಾರ್ಯ ಪುಣ್ಯಶ್ರಮದಲ್ಲಿ ನಿರ್ಮಾಣಗೊಳ್ಳುತ್ತಿರುವಂಥ ನಿವಾಸಪೈಲ್ಲಳನ್ನ ಸಂಪೂರ್ಣವಾಗಿ ಒದಗಿಸಿಕೊಟ್ಟು ಆ ಕಾರ್ಯಕ್ಕೆ ನೆರವಾಗಿರುವಂಥದ್ದು ಬಹಳ ಸಂತೋಷವನ್ನು ಉಂಟು ಮಾಡಿದೆ ಯಾವ ಮನುಷ್ಯ ಜೀವನದಲ್ಲಿ ಕ್ರಿಯಾಶೀಲನಾಗಿ ಪ್ರಯತ್ನವನ್ನು ಮಾಡುತ್ತಾರೆ ಅವರ ಜೀವನದಲ್ಲಿ ಶ್ರೇಯಸ್ಸು ಯಾವಾಗಲೂ ಕಟ್ಟಿಟ್ಟ ಬುತ್ತಿ ಈ ದೇಹವನ್ನು ದುಡಿಮೆಗೆ ಮನಸ್ಸನ್ನು ಭಗವಂತನಿಗೆ ಅರ್ಪಿಸಿ ಆ ಕಾರ್ಯವನ್ನು ಮಾಡಿದ್ದಾರೆ. ನಿಶ್ಚಿತವಾದ ಫಲವನ್ನು ಪಡಿಲಿಕ್ಕೆ ಸಾಧ್ಯವಾಗುತ್ತದೆ

(2ನೇ ಪುಟ ನೋಡಿ)

## ಹೆತ್ತವ್ವನ ಅಗಲಿಕೆ ಮಧ್ಯೆಯೂ ಎಸ್. ಎಸ್.ಎಲ್. ಸಿ ಪರೀಕ್ಷೆ ಬರೆದ ವಿದ್ಯಾರ್ಥಿ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಮಾ.21: ಜಿಲ್ಲೆ ಗಂಗಾವತಿ ತಾಲೂಕಿನ ಕೇಸರಹಟ್ಟಿಯಲ್ಲಿ ನಡೆದ ಮನ ಕಲಕುವ ಧಾರುಣ ಘಟನೆ ನೆಡದಿದೆ.

ಹೊತ್ತು ಹೆತ್ತವ್ವನ ಪ್ರೀತಿ, ಮಮತೆಗೆ ಬೆಲೆ ಕಟ್ಟಲಾಗದು. ಮಕ್ಕಳ ವಿಚಾರಕ್ಕೆ ಬಂದರೆ ಎಂಥಹ ತ್ಯಾಗಕ್ಕಾದರೂ ತಾಯಿ ಸಿದ್ಧಳಿರುತ್ತಾಳೆ. ಅಂತಹ ತಾಯಿಯ ಅಗಲಿಕೆಯ ನೋವಿನ ಮಧ್ಯೆಯೂ ವಿದ್ಯಾರ್ಥಿಯೊಬ್ಬ ಪರೀಕ್ಷೆ ಬರೆದ ಘಟನೆ ಗಂಗಾವತಿ ತಾಲೂಕಿನ ಕೇಸರಹಟ್ಟಿಯಲ್ಲಿ ನಡೆದಿದೆ.

ಗ್ರಾಮದ ಸ್ವಾಮಿ ವಿವೇಕಾನಂದ ಇಂಗ್ಲಿಷ್? ಮೀಡಿಯಂ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಅಡಿವೆಯ್ಯ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ವಾತಾವರಣ ಸಂಪೂರ್ಣ ತಂಪು

ಬೆಳಿಗ್ಗೆಯಿಂದ ಮಧ್ಯಾಹ್ನದ ತನಕ ಸಾಧಾರಣ ಪ್ರಮಾಣದಲ್ಲಿ ಬಿಸಿಲು ಇತ್ತು. ಮಧ್ಯಾಹ್ನದ ನಂತರ ದಟ್ಟ ಕಾರ್ಮೋಡ ಕವಿದು ವರ್ಷಧಾರೆಯಾಗಿದೆ. ತಾಲ್ಲೂಕಿನ ಅಮಲಾಪೂರ, ಚಿಟ್ಟಾ, ಘೋಡಂಪಳ್ಳಿ, ಯಾಕತಪೂರ, ಯದಲಾಪೂರ, ಶಹಾಪೂರ, ಗುನ್ನಳ್ಳಿ ಸೇರಿದಂತೆ ಹಲವೆಡೆ ಮಳೆಯಾಗಿರುವುದು ವರದಿಯಾಗಿದೆ. ಜಿಲ್ಲೆಯ ಬಸವಕಲ್ಯಾಣ, ಚಿಟಗುಪ್ಪ, ಹುಮನಾಬಾದ್, ಹುಲಸೂರಿನಲ್ಲಿ ಗುರುವಾರ ತಡರಾತ್ರಿ ಸಾಧಾರಣ ಮಳೆಯಾಗಿದೆ. ಜಿಲ್ಲೆಯ ಬಹುತೇಕ ಕಡೆಗಳಲ್ಲಿ ವರ್ಷದ ಮೊದಲ ಮಳೆ ಪ್ರವೇಶಿಸಿದೆ. ಶನಿವಾರ (ಮಾ.22) ಕೂಡ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

## 91 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ

ಪರೀಕ್ಷಾ ಅಕ್ರಮ ತಡೆಯಲು, ಕೇಂದ್ರದ ಸುತ್ತ 144 ಸೆಕ್ಷನ್ ಜಾರಿ ಮಾಡಿ , ವೆಬ್ ಕಾಸ್ಟಿಂಗ್ ಮುಖಾಂತರ ಯಾವುದೇ ನಕಲು ನಡೆಯದಂತೆ ಎಲ್ಲ ಕ್ರಮಗಳನ್ನ ಕೈಗೊಳ್ಳಲಾಗಿದೆ. ಬೇಸಿಗೆ ಬಿಸಿಲು ಹೆಚ್ಚಿರುವ ಕಾರಣ ವಿದ್ಯಾರ್ಥಿಗಳಿಗೆ ಕುಡಿಯುವ ನೀರು ಹಾಗೂ ಓರ್‌ಎಸ್ ವ್ಯವಸ್ಥೆಯನ್ನು ಮಾಡಲಾಗಿದೆ.

## ಪ್ರಶ್ನೆಯಿಲ್ಲ:ಮುಖ್ಯಮಂತ್ರಿ ಸಿದ್ದಾಮಯ್ಯ

ತೆಗೆದುಕೊಳ್ಳಬಹುದಾಗಿತ್ತು. ಕಾನೂನಿನ ಪ್ರಕಾರ ತಪ್ಪಿತಸ್ಥರಿಗೆ ಶಿಕ್ಷೆಯಾಗಲೇಬೇಕು ದೂರು ದಾಖಲಾದಲ್ಲಿ ಇದರ ಬಗ್ಗೆ ಸೂಕ್ತ ಕ್ರಮ ವಹಿಸಲಾಗುವುದು. ಪ್ರಕರಣದಲ್ಲಿ ಯಾರನ್ನೂ ರಕ್ಷಿಸುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿಗಳು ವಿಧಾನಸಭೆಯಲ್ಲಿ ತಿಳಿಸಿದರು.

## ಸದಾ ಎತ್ತಿದ ಕೈ: ರಂಭಾಪುರಿ ಜಗದ್ಗುರುಗಳು

ಸಾಕ್ಷಿಯಾಗಿದೆ ಅಂತ ಮಕ್ಕಳನ್ನು ಪಡೆದಂತ ತಂದೆ ತಾಯಿಗಳು ಧನ್ಯರಾದಂತ ಹೇಳಿಕೆ ಹೆಮ್ಮೆ ಅನಿಸುತ್ತದೆ ಅಂತ ತಂದೆ ತಾಯಿಗಳು ಮಕ್ಕಳಿಗೆ ತಕ್ಕಂತ ಸಂಸ್ಕರಿಂದ ಜೀವನ ಕೊನೆಯವರೆಗೆ ಇವರನ್ನು ಕೊಡಲಿಕ್ಕೆ ಸಾಧ್ಯವಾಗುತ್ತದೆ ಬೀದರ್ ನಗರದಲ್ಲಿ ರಂಭಾಪುರಿ ಧರ್ಮಪೀಠದ ಅಭಿಮಾನಿಗಳು ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಅವರ ಪೀಠದ ಜಗದ್ಗುರುಗಳವರ ಕಾಲದಲ್ಲಿ ಏನು ಆಗ್ತಾ ಇದ್ದಿಲ್ಲ ಅದನ್ನು ಮನಗಂಡು ಷಣ್ಮುಖಯ್ಯ ಸ್ವಾಮಿಯವರು ಇದರ ಪ್ರಾಂತ್ಯದಲ್ಲಿ ಬಹು ದೊಡ್ಡ ಕಾರ್ಯವನ್ನು ಅವರು ಮಾಡಿದ್ದಾರೆ.

ಈ ಜಗದ್ಗುರು ಪಂಚಾಚಾರ್ಯ ಪುಣ್ಯಶ್ರಮವನ್ನು ರಂಭಾಪುರಿ ಜಗದ್ಗುರುಗಳವರ ನಡೆತನದಲ್ಲಿ ಆ ಭವ್ಯ ವಾಸಂತ ಕಟ್ಟಡ ಇನ್ನು ಸ್ವಲ್ಪ ದಿನದಲ್ಲಿ ಕಾರ್ಯಗಳನ್ನು ಉದ್ದೇಶಗಳನ್ನು ಹೊಂದಿದ್ದಾರೆ. ನಿಮ್ಮೆಲ್ಲರ ಸರಕಾರ ಸೇವಾ ಮನೋಭಾವ ಮತ್ತು ಎಂದರೆ ಅವರು ಹಮ್ಮಿಕೊಂಡಂತ ಎಲ್ಲಾ ಕೆಲಸ ಕಾರ್ಯಗಳು ಶೀಘ್ರದಲ್ಲಿ ನೀರಿನಲ್ಲಿ ಎತ್ತಿನಹರಿ ಸುಗಮವಾಗಿ ಎಲ್ಲ ಕೆಲಸಗಳು ನಡಿಲಿಕ್ಕೆ ಸಾಧ್ಯವಾಗುತ್ತದೆ ಎನ್ನುವುದನ್ನು ಹೇಳಿಕೆ ಮರೆಯೋದಿಲ್ಲ ತೆಗೆದುಕೊಳ್ಳುವ ವಾಸ್ತವಕ್ಕೆ ವರ್ಷದಲ್ಲಿ ಎಷ್ಟೇ ಒತ್ತಡ ಇದ್ದರೂ ಕೂಡ ವರ್ಷಕ್ಕೆ ಒಂದು ಸಲ ಆದರು ಬೀದರ್ ನಗರಕ್ಕೆ ಆಗಮಿಸಿ ಈ ಭಾಗದ ಭಕ್ತರಿಗೆ ಆಶೀರ್ವಾದ ಮಾಡುವಂಥ ಉದ್ದೇಶವನ್ನ ಹೊಂದಿದ್ದೇವೆ. ಇನ್ನೊಂದು ಸಂತೋಷದ ಸಂಗತಿ ಏನೆಂದರೆ ಇದೇ ಬೀದರ್ ಜಿಲ್ಲೆ ಬಸವಕಲ್ಯಾಣ ಐತಿಹಾಸಿಕ ನಗರದಲ್ಲಿ ಅಕ್ಟೋಬರ್ ತಿಂಗಳಲ್ಲಿ ನಡೆಯುತ್ತಿದೆ.

ಬಹುಶ ಈಗಾಗಲೇ ಸ್ವಾಗತ್ ಸಮಿತಿಯ ರಚನೆ ಮಾಡಿ ಕಾರ್ಯಕ್ರಮ ರೂಪದರ್ಶಿಗಳು ಸಿದ್ಧತೆ ಮಾಡುತ್ತಾರೆ ರಂಭಾಪುರಿ ಧರ್ಮಪೀಠದ ಈ ಹಿಂದಿನ ಎಲ್ಲಾ ದಸರಾ ಮಹೋತ್ಸವಗಳ ದಾಖಲೆಯನ್ನು ಮೀರಿ ಬಸವ ಕಲ್ಯಾಣದಲ್ಲಿ ನಡೆಯುವಂತೆ ಸುಗಮವಾಗಿ ಧರ್ಮ ಸಮ್ಮೇಳನವನ್ನು ದೊಡ್ಡ ಪ್ರಮಾಣದಲ್ಲಿ ಹೆಚ್ಚಿನ ಜನಸಂಖ್ಯೆಯ ಒಂದು ಸಮ್ಮುಖದಲ್ಲಿ ನಡೆಯುತ್ತಿದೆ. ಎನ್ನುವುದನ್ನು ಹೇಳಲಿಕ್ಕೆ ಮರೆಯುವುದಿಲ್ಲ ಈ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಂಡಂತಹ ಭಕ್ತಿಯನ್ನು ಧರ್ಮಪೀಠಗಳಲ್ಲಿ ಒಂದಾದ ಮುದ್ದಾಭಿಮಾನವನ್ನು ಬೇರೆ ಯಾವುದೇ ಭಾಗದಲ್ಲಿ ನಾವು ಕಾಣಲಿಕ್ಕೆ ಸಾಧ್ಯವಿಲ್ಲ ಇಂಥ ಶರಣರ ಪುಣ್ಯಭೂಮಿಯಲ್ಲಿ ಜಗದ್ಗುರು ರೇಣುಕಾಚಾರ್ಯವಾಗಲಿ ಜಗದ್ಗುರು ಸಿದ್ದೇಶ್ವರ ಆಗಲಿ ಮಾಡಿದಂತಹ ಧಾರ್ಮಿಕ ಸಾಮಾಜಿಕ ಕಾರ್ಯ 12ನೇ ಶತಮಾನದ ಶರಣರ ಕ್ರಾಂತಿಗೆ ಮೂಲ ಗಂಗೋತ್ರಿ ಮತ್ತು ಮೂಲ ಸರಿಯಾಗಿಲ್ಲ ಪೀಠಗಳ ಪರಿಚಯ ಭಾಗದಲ್ಲಿ ಕಾರಣ ಏನೆಂದರೆ ಈ ಭಾಗದಲ್ಲಿ ಕೀಟಗಳು ಯಾವಾಗಲೂ ಬಹಳ ಅಭಿಮಾನ ಶ್ರದ್ಧೆಯಿಂದ ಅವರು ದರ್ಶನವನ್ನು ಆಶೀರ್ವಾದವನ್ನು ಪಡೆಯುತ್ತಿದ್ದಾರೆ ಕರ್ನಾಟಕ ಸರ್ಕಾರ ಜಗದ್ಗುರು ರೇಣುಕಾಚಾರ್ಯ ಜಯಂತಿಯನ್ನು ಸರ್ಕಾರ ಆಚರಣೆ ಮಾಡಲಿಕ್ಕೆ ಕಳೆದ ಮೂರು ವರ್ಷಗಳಿಂದ ಆದೇಶ ಮಾಡಿದೆ ಮಾರ್ಚ್ 12ರಂದು ಕರ್ನಾಟಕದ ಮೊಕದ ಮನೆ ಆದಂತ ಎಲ್ಲಾ ಕೇಂದ್ರ ಹಿಡಿದು ಕೋಲಾರವರಿಗೆ ಜಯಂತಿ ಮಹೋತ್ಸವ ಸರ್ಕಾರದಿಂದ ಜಿಲ್ಲಾ ಮಟ್ಟದಲ್ಲಿ ತಾಲೂಕ ಮಟ್ಟದಲ್ಲಿ ನಡೆದುಕೊಂಡು ಬರುತ್ತಿದ್ದು ಗೊತ್ತಿದೆ ಬಹಳ ಸಂಭ್ರಮದಿಂದ ಪೀಠದಲ್ಲಿ ಕೂಡ ಯುಗಮಾನೋತ್ಸವ ಸಮಾರಂಭ ನಡೆದಿದೆ.

ಈ ವರ್ಷ ನಡೆದಂತ ಜಯಂತಿ ಮಹೋತ್ಸವ ಎಂದೆಂದೂ ನಡೆದಿರಲಿಲ್ಲ ವೀರಶೈವ ಲಿಂಗಾಯತ ಸಮಾಜ ಬಾಂಧವರು ಸರ್ಕಾರದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಬಹಳಷ್ಟು ಸೇವೆಯನ್ನು ಉಂಟು ಮಾಡಿದ್ದಾರೆ ಅದನ್ನು ಕಂಡು ಕೆಲವರಿಗೆ ಬಹಳ ಸರಳ ಆಗ್ತಾ ಇದೆ. ಪಂಚಪೀಠಗಳ ಕೆಲಸ ಮಾಡುವಂತಹ ಪಂಚಭೂತಗಳ ತಪ್ಪು ಕಲ್ಪನೆಗಳನ್ನು ಒಂದೇ ಹುಳವನ್ನು ತೆಗೆಯಲು ಬಿಟ್ಟಿದ್ದರು. ಆದರೆ ಈ ವರ್ಷದ ಆದೇಶದಿಂದ ಎಲ್ಲಾ ಭಾಗದಲ್ಲಿ ನಡೆಯುತ್ತಿರುವುದರಿಂದ ಜಗದ್ಗುರು ರೇಣುಕಾಚಾರ್ಯರ ಒಂದು ಅದ್ಭುತವಾದಂತಹ ಜಗದ್ಗುರು ರೇವಣಸಿದ್ದೇಶ್ವರರ ಸಾಮಾಜಿಕ ಚಿಂತನೆಗಳಾಗಲಿ ಎಲ್ಲರ ಮನೆಮನೆಗಳಲ್ಲಿ ಸದಾ ನೆಲೆಗೊಳ್ಳುತ್ತಿದೆ. ಆ ಕಾರಣದಿಂದ ಪಂಚಪೀಠಗಳ ವಿರೋಧಿಗಳ ಆಟ ಏನು ನಡೆ- ಯದಂತಾಗಿ ಮತ್ತೆ ಸಮಾಜವನ್ನು ಒಡೆಯುವಂತ ಒಳ್ಳೆದಾರಿಗೆ ಹೋಗುವಂತ ತಪ್ಪುಗಳನ್ನು ಮಾಡುತ ಬೆಳೆಸಿಕೊಳ್ಳದೆ ನಮ್ಮ ಕಣ್ಮುಂದೆ ಇರುವಂತಹ ಕೊಂಡು ಜೀವನದಲ್ಲಿ ಒಂದು ಶ್ರೇಷ್ಠ ಗುರುವಿನ ಮಾರ್ಗದರ್ಶನದಲ್ಲಿ ನಾವು ಸಂಸ್ಕೃತಿಯನ್ನು ಉಳಿಸಿ ಬೆಳೆಸಿಕೊಂಡು ಬರುವ ನಿಟ್ಟಿನಲ್ಲಿ ಎಲ್ಲರೂ ಕಾರ್ಯಪ್ರವೃತ್ತರಾಗಲಿ ಎಷ್ಟು ಸಾಧ್ಯ ಇದೆ ಜಗದ್ಗುರುಗಳ ವರ್ಷಕ್ಕೆ ಒಂದೆರಡು ದಿನವಾದರೂ ಈ ಭಾಗದಲ್ಲಿ ಬಂದು ನಿಮ್ಮೆಲ್ಲರಿಗೆ

ಆಶೀರ್ವಾದವನ್ನು ಮಾಡುತ್ತವೆ. ಎಂದು ಹೇಳುತ್ತಾ ಎರಡು ಮೂರು ಕಡೆ ಜಗದ್ಗುರುಗಳು ಕಾರಣ ಹೆಚ್ಚೋತ್ತಿರಲು ಸಾಧ್ಯವಿಲ್ಲ ಸಮಯದ ಅಭಾವವಿದೆ ಕಾರ್ಯ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ ಅವರ ಕೈಗೊಂಡಂತ ಉತ್ತರವಾಗಿ ಬೆಳೆದು ಹೆಚ್ಚಾಗಲಿ ಮೋಸದಲ್ಲಿ ಬರುವ ಸಂಸ್ಕೃತಿಯ ಸಂಯೋಜನೆಗಾಗಿ ಸೇವೆಯನ್ನು ಮಾಡುವಂತಹ ಸೌಭಾಗ್ಯ ಕೂಡ ಆ ಸಹೋದರರಿಗೆ ಪ್ರಾಪ್ತವಾಗಲಿ ಜಗದ್ಗುರು ಪಂಚಾಚಾರ್ಯ ಪುಣ್ಯಸ್ಮ ಸಂಚಾಲಕರಾದಂತ ಷಣ್ಮುಖಯ್ಯನವರು ಸಮಾರಂಭವಾಗಿದ್ದು ಪ್ರಕಟ ವಾದಂತಹ ಪ್ರಕಟವಾದ ಸಮಾರಂಭಕ್ಕೆ ಕಾರಣೀಭೂತರಾಗಿದ್ದಾರೆ ಅನ್ನುವಂತ ಮತ್ತೊಮ್ಮೆ ಹೆಸರಿನಿಂದ ವ್ಯಕ್ತಪಡಿಸುತ್ತಾ ನಿನ್ನನ್ನು ಸೇರಿರುತ್ತೆ ಎಲ್ಲರಿಗೂ ಕಾರ್ಯಕ್ರಮ ಸಂಘಟನೆಗೆ ಪರಮದ ಹೇಳು ಪಾರ್ವತಿ ಪರಮೇಶ್ವರರು ಜಗದಾದಿ ಜಗದ್ಗುರುಗಳು ರೇಣುಕಾದಿ ಪಂಚಾಚಾರ್ಯರು ಕ್ಷೇತ್ರ ನಾದ ವೀರಭದ್ರ ಸ್ವಾಮಿ ನಿಮ್ಮೆಲ್ಲರ ಕುಲದೈವ ನಿನಗೆ ಆಯುಷ್ಯ ಆರೋಗ್ಯ ಭಾಗ್ಯ ಸುಖ ಸಂಪತ್ತುಗಳನ್ನು ಕೊಡಲಿ ಎಂದು ಹಾರೈಸುತ್ತೆವೆ ಎಂದರು.

## ಎಸ್. ಎಸ್.ಎಲ್. ಸಿ ಪರೀಕ್ಷೆ ಬರೆದ ವಿದ್ಯಾರ್ಥಿ

ಸ್ವಾಮಿ ಎಂಬ ಹತ್ತನೇ ತರಗತಿಯ ವಿದ್ಯಾರ್ಥಿಯ ತಾಯಿ ವಿಜಯಲಕ್ಷ್ಮಿ ಸಿದ್ದಯ್ಯಸ್ವಾಮಿ (38) ಶುಕ್ರವಾರ ಬೆಳಗಿನ ಸಮಯದಲ್ಲಿ ಹುಬ್ಬಳ್ಳಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ತಾಯಿಯ ಅಗಲಿಕೆಯ ಸುದ್ದಿಯ ಮಧ್ಯೆಯೂ ಧೃತಿಗೆಡದ ವಿದ್ಯಾರ್ಥಿ ತನ್ನ ಕುಟುಂಬದವರ ಮನವೊಲಿಸಿ ಪರೀಕ್ಷೆ ಬರೆಯುವುದಾಗಿ ತಿಳಿಸಿದ್ದ.

ವಿದ್ಯಾರ್ಥಿ ಮನೆಗೆ ಬಂದ ಶಿಕ್ಷಕರು: ನೋವಿನಲ್ಲಿದ್ದ ವಿದ್ಯಾರ್ಥಿ ಅಡಿವೆಯ್ಯ ಸ್ವಾಮಿ ಮನೆಗೆ ಬಂದ ಶಿಕ್ಷಕರು ಸಾಂತ್ವಾನ ಹೇಳಿದರು. ಬಳಿಕ ಪರೀಕ್ಷಾ ಕೇಂದ್ರದವರೆಗೆ ಕರೆದೊಯ್ಯಲು ನೆರವಾದರು. ಪರೀಕ್ಷೆಯ ಬಳಿಕ ವಿದ್ಯಾರ್ಥಿ ತನ್ನ ತಾಯಿಯ ಅಂತಿಮ ಸಂಸ್ಕಾರದಲ್ಲಿ ಭಾಗಿಯಾದ.ವಿದ್ಯಾರ್ಥಿ ತಾಯಿ ವಿಜಯಲಕ್ಷ್ಮಿ ಕಳೆದ ಕೆಲ ದಿನಗಳ ಹಿಂದೆ ಸ್ನಾನದ ಕೋಣೆಯಲ್ಲಿ ಬಿದ್ದು ತಲೆಗೆ ಗಾಯ ಮಾಡಿಕೊಂಡಿದ್ದರು. ಪರಿಣಾಮ ತಲೆಯಲ್ಲಿ ರಕ್ತ ಹೆಪ್ಪುಗಟ್ಟಿತ್ತು. ಹೀಗಾಗಿ, ಚಿಕಿತ್ಸೆಗಾಗಿ ಹುಬ್ಬಳ್ಳಿಯ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಗುರುವಾರ ರಾತ್ರಿ ಶಸ್ತ್ರಚಿಕಿತ್ಸೆ ಮಾಡಲಾಗಿತ್ತು. ಆದರೆ, ಶುಕ್ರವಾರ ಬೆಳಗ್ಗೆ ವಿಜಯಲಕ್ಷ್ಮಿ ಸಾವನ್ನಪ್ಪಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

## 6 ತಿಂಗಳ ಕಾಲ ಅಮಾನತ್ತುಗೊಳಿಸಿ ಸ್ಪೀಕರ್ ಯು.ಟಿ ಖಾದರ್ ರೂಲಿಂಗ್ ಹೊರಡಿಸಿದ್ದಾರೆ.

ಹೆಚ್.ಕೆ.ಪಾಟೀಲ್, ಪೀಠದ ಆದೇಶವನ್ನು ಧಿಕ್ಕರಿಸಿ, ಕಾಗದ ತೂರಿ, ಗೂಂಡಾಗಿರಿ ವರ್ತನೆಯನ್ನು ಸಹಿಸಲು ಸಾಧ್ಯವಿಲ್ಲ. ಸದನದಲ್ಲಿ ಪರಸ್ಪರ ಗೌರವ, ಪ್ರೀತಿ ಇರಬೇಕು. ಅದನ್ನು ಧಿಕ್ಕರಿಸಿ ಅನಾಗರೀಕ ವರ್ತನೆ ತೋರಿಸಿರುವ 18 ಜನರನ್ನು ಸಭಾಧ್ಯಕ್ಷರು ಹೆಸರಿಸಿದ್ದಾರೆ. ಇದನ್ನು ಬೆಂಬಲಿಸುತ್ತೇನೆ. ತಕ್ಷಣದಿಂದ ಜಾರಿಗೆ ಬರುವಂತೆ ಆರು ತಿಂಗಳವರೆಗೆ ಸದನಕ್ಕೆ ಬರದಂತೆ ತಡೆ ಹಿಡಿಯಬೇಕು ಎಂಬ ಸಲಹೆ ನೀಡಿದರು. ಸಚಿವರ ಪ್ರಸ್ತಾವನೆಯನ್ನು ಸಭಾಧ್ಯಕ್ಷರು ಮತಕ್ಕೆ ಹಾಕಿದಾಗ ಧ್ವನಿ ಮತದ ಮೂಲಕ ಪ್ರಸ್ತಾವನೆ ಅಂಗೀಕಾರಗೊಂಡಿದೆ ಎಂದು ಘೋಷಿಸಲಾಯಿತು.

ಪೀಠದ ಆದೇಶ ಉಲ್ಲಂಘಿಸಿ ಅಶಿಸ್ತಿನಿಂದ ನಡೆದುಕೊಂಡ 18 ಮಂದಿ ಶಾಸಕರನ್ನುಆರು ತಿಂಗಳ ವರೆಗೂ ಅಮಾನತು ಮಾಡಲಾಗಿದೆ. ಈ ಸದಸ್ಯರು ತಕ್ಷಣವೇ ಸದನದಿಂದ ಹೊರ ಹೋಗಬೇಕು ಎಂದು ಸಭಾಧ್ಯಕ್ಷರು ಆದೇಶಿಸಿದರು.

ಮಧ್ಯಾಹ್ನದ ಕಲಾಪ ಆರಂಭವಾಗುತ್ತಿದ್ದಂತೆ ಸ್ಪೀಕರ್ ಪೀಠಕ್ಕೆ ಅಪಮಾನ ಮಾಡಿದ 18 ಶಾಸಕರನ್ನು 6 ತಿಂಗಳ ಕಾಲ ಸಸ್ಪೆಂಡ್ ಮಾಡಿ ಸ್ಪೀಕರ್ ರೂಲಿಂಗ್ ಹೊರಡಿಸಿದರು.

## ನಾಳೆ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ




ಕಲಬುರಗಿ:ಮಾ.21:ತ್ರಿಶಾ ಎಜುಕೇಶನ್ ಚಾರಿ ಟೇಬಲ್,ವೆಲ್ವೇರ್ ಟ್ರಸ್ಟ್ ವತಿಯಿಂದ ಮಾರ್ಚ್ 22ರಂದು ಸಂಜೆ 4:30 ಗಂಟೆಗೆ ಕನ್ನಡ ಭವನದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ 10 ಜನ ಮಹಿಳೆಯರಿಗೆ ಮಹಿಳಾ ಕಣ್ಮಣಿ ಪ್ರಶಸ್ತಿ ನೀಡಿ ಗೌರವಿಸಲಾ ಗುವುದೆಂದು ಟ್ರಸ್ಟ್‌ನ ಅಧ್ಯಕ್ಷರಾದ ಅಶ್ವಿನಿ ಚೌವ್ಹಾಣ ತಿಳಿಸಿದರು. ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಕಾರ್ಯಕ್ರಮವನ್ನು ಮಹಾನಗರ ಪಾಲಿಕೆಯ ಮಹಾಪೌರರಾದ ಯಲ್ಲಪ್ಪ ನಾಯ್ಕೋಡಿ ಉದ್ಘಾಟಿಸಲಿದ್ದು,

ಸಹಾಯಕ ನಿರ್ದೇಶಕರಾದ ದತ್ತಪ್ಪ ಸಾಗನೂರ್. ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ನಿತಿನ್ ಗುತ್ತೇದಾರ್. ಕಾಂಗ್ರೆಸ್ ಮುಖಂಡರಾದ ನೀಲಕಂಠ ರಾವ್ ಮೂಲಗೆ ಆಗಮಿಸುವವರು ಎಂದು ಹೇಳಿದರು. ಡಾ. ಸುರೇಶ್ ಶರ್ಮಾ ಪ್ರಶಸ್ತಿ ಪ್ರಧಾನ ಮಾಡಲಿದ್ದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಸುರೇಶ್ ಬಡಿಗೇರ್ ಅವರು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಭೀಮಶೆಟ್ಟಿ ಯಂಪಳ್ಳಿ, ವಿಜಯಕುಮಾರ್ ಕಟ್ಟಿಮನಿ,

ಮಾಲಾಕಟ್ಟೆ, ಅಶ್ವಿನಿ ಕುಮಾರ್ ಸಿಂಗ್, ಶ್ರೀಮತಿ ಸುನಂದ ರಾಠೋಡ್.ಹಾಗೂ ಸದಸ್ಯರು ಭಾಗವಹಿಸಲಿದ್ದಾರೆ. ಶ್ರೀಮತಿ ಯಶೋಧ ಕಟಕೆ. ಶ್ರೀಮತಿ ಶೋಭಾ ಪಾಟೀಲ್, ಸಿಂಧೂಮತಿ ಭೋಸಲೆ. ಜ್ಯೋತಿ ಹಂಚಾಟೆ. ಜ್ಯೋತಿ ಅಕ್ಷಯ. ಸವಿತಾ ಬಿ ನಾಸಿ. ಸುನಿತಾ ಚೌಹಾಣ, ಶ್ರೀಮತಿ ರೇಖಾ ಪಾಟೀಲ್. ಮಲ್ಲಮ್ಮ ಭೀಮರೆಡ್ಡಿ. ಶ್ರೀಮತಿ ಜಯಶ್ರೀ ಸೈಬಣ್ಣ ಯಾದಗಿರಿ. ಇವರಿಗೆ ಮಹಿಳಾ ಕಣ್ಮಣಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಹೇಳಿದರು ಸುದ್ದಿಗೋಷ್ಠಿಯಲ್ಲಿ ಸುನಂದ ರಾಠೋಡ್. ಬ್ರಹ್ಮ ವೇಣಿ

ಮುಖ್ಯ ಅತಿಥಿಗಳಾಗಿ ಶಾಸಕ ಅಲ್ಲಮ ಪ್ರಭು ಪಾಟೀಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ

ಶಿವಶರಣಪ್ಪ ಸಾವಳಗಿ, ಕರಬಸಮ್ಮ ಪೂಜಾರಿ. ಲಕ್ಷ್ಮೀದೇವಿ ದತ್ತಾತ್ರೇಯ ಪಾಟೀಲ್ ರೇವೂರ್. ಕುಮಾರಿ

ಪೋತೆ, ಲಕ್ಷ್ಮಿ ಚೌಹಾಣ್, ಪಾವರ್ಗತಿ ಕೆಂಭಾವಿ. ದಿವ್ಯ ಕಂದನಕರ್ ಮುಂತಾದವರು ಇದ್ದರು.

## ಸಿಎಂ, ಸಚಿವರು, ಶಾಸಕರ ವೇತನ ಶೇ.100ರಷ್ಟು ಹೆಚ್ಚಳ: ಮಸೂದೆಗೆ ವಿಧಾನಸಭೆಯಲ್ಲಿ ಅಂಗೀಕಾರ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.21:ಮುಖ್ಯಮಂತ್ರಿ ಹಾಗೂ ಎಲ್ಲಾ ಶಾಸಕರಿಗೆ ವೇತನವನ್ನು ಶೇ.100 ರಷ್ಟು ಹೆಚ್ಚಳ ಮಾಡುವ ವಿಧೇಯಕ ಶುಕ್ರವಾರ ರಾಜ್ಯ ವಿಧಾನಸಭೆಯಲ್ಲಿ ಅಂಗೀಕಾರಗೊಂಡಿದೆ. ಇದರಿಂದ ಪ್ರತಿ ವರ್ಷ ಖಜಾನೆಗೆ ರೂ. 62 ಕೋಟಿ ಹೊರೆಯಾಗಲಿದೆ ಎನ್ನಲಾಗಿದೆ. ಚರ್ಚೆ ಇಲ್ಲದೆ ಮಸೂದೆ ಅಂಗೀಕಾರ: ಹನಿಟ್ರ್ಯಾಪ್ ಪ್ರಕರಣವನ್ನು ಸಿಬಿಐ ಅಥವಾ ಹಾಲಿ ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕೆಂದು ಆಗ್ರಹಿಸಿದ ಬಿಜೆಪಿ ಸದಸ್ಯರು ಇಂದು ವಿಧಾನಸಭೆಯಲ್ಲಿ ಸಭಾಧ್ಯಕ್ಷರ ಪೀಠದ ಎದುರು ಪ್ರತಿಭಟನೆ ನಡೆಸುತ್ತಿದ್ದಾಗ ಯಾವುದೇ ಚರ್ಚೆ ಇಲ್ಲದೆ 'ಕರ್ನಾಟಕ ಮಂತ್ರಿಗಳ ಸಂಬಳಗಳು ಮತ್ತು ಭತ್ಯೆಗಳ (ತಿದ್ದುಪಡಿ) ಮಸೂದೆ 2025' ಮತ್ತು 'ಕರ್ನಾಟಕ ವಿಧಾನಮಂಡಲದವರ ಸಂಬಳಗಳು, ಪಿಂಚಣಿಗಳು ಮತ್ತು ಭತ್ಯೆಗಳ (ತಿದ್ದುಪಡಿ) ಮಸೂದೆ 2025 ಅಂಗೀಕಾರಗೊಂಡವು.

ಜೀವನ ವೆಚ್ಚದಲ್ಲಿ ಹೆಚ್ಚಳದ ಸಮರ್ಥನೆ: ಜೀವನ ವೆಚ್ಚದಲ್ಲಿ ಗಣನೀಯ ಏರಿಕೆಯಾಗಿದೆ. ಸಿಎಂ, ಸಚಿವರು, ರಾಜ್ಯ ಸಚಿವರು ಮತ್ತು ಉಪ ಮಂತ್ರಿಗಳ ವೇತನ ಮತ್ತು ಭತ್ಯೆಗಳನ್ನು ದೀರ್ಘಕಾಲದಿಂದ ಪರಿಷ್ಕರಿಸಲಾಗಿಲ್ಲ. ಸಂಸದೀಯ ಪದಾಧಿಕಾರಿಗಳು ಮತ್ತು ಶಾಸಕರ ವೇತನ ಮತ್ತು ಭತ್ಯೆಯಲ್ಲಿನ ಹೆಚ್ಚಳವನ್ನು ಸಮರ್ಥಿಸಲು "ಜೀವನ ವೆಚ್ಚದಲ್ಲಿ ಗಣನೀಯ ಹೆಚ್ಚಳ" ಎಂದು ಮಸೂದೆಯಲ್ಲಿ ಉಲ್ಲೇಖಿಸಲಾಗಿದೆ.

ಪರಿಷ್ಕೃತ ವೇತನ, ಭತ್ಯೆ ಇಂತಿದೆ:

ಪ್ರಸ್ತುತ ಮುಖ್ಯಮಂತ್ರಿಗಳ ವೇತನ 75,000 ರೂಪಾಯಿ ಇದ್ದು, ವಿಧಾನಪರಿಷತ್ತಿನಲ್ಲೂ ಮಸೂದೆ ಅಂಗೀಕಾರವಾದಲ್ಲಿ ರೂ. 1.5 ಲಕ್ಷ ರೂಪಾಯಿ ಆಗಲಿದೆ. ಮುಖ್ಯಮಂತ್ರಿ ಅತಿಥಿ ಭತ್ಯೆ 4.5 ಲಕ್ಷ ರೂಪಾಯಿ ಇದ್ದು, ಅದು 5 ಲಕ್ಷ ರೂಪಾಯಿ ಆಗಲಿದೆ.

## ಪ್ರದೀಪ್ ಜ್ಯಾಂತೆಗೆ ಪಿಎಚ್‌ಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 21 : ಭಾಲ್ಕಿ ತಾಲ್ಲೂಕಿನ ಜೈನಾಪುರದ ಪ್ರದೀಪ್ ಗುಂಡಪ್ಪ ಜ್ಯಾಂತೆ ಅವರಿಗೆ ಪುಣೆಯ ವಿಶ್ವಕರ್ಮ ವಿಶ್ವವಿದ್ಯಾಲಯ ಪಿಎಚ್‌ಡಿ ನೀಡಿದೆ.

ಜಗದೀಶ್ ವಿ. ತಾವಡೆ ಅವರ ಮಾರ್ಗದರ್ಶನದಲ್ಲಿ ಆ್ಯನ್ ಅನಲೈಸಿಸ್ ಆಫ್ ನ್ಯಾನೊ ಲಿಕ್ವಿಡ್ ಥಿನ್ ಫಿಲ್ಮ್ ಫ್ಲೋ ಓವರ್ ಎ ಹಾರಿಝೊಂಟಲ್ ಮೂವಿಂಗ್ ಪ್ಲೇಟ್ ಬೈ ಅನಾಲೈಟಿಕಲ್ ಆಯಿಂಡ್ ನ್ಯೂಮೆರಿಕಲ್ ಮೆಥೋಡ್ಸ್' ಕುರಿತು ಅವರು ಮಂಡಿಸಿದ ಪ್ರೌಢ ಪ್ರಬಂಧವನ್ನು ವಿಶ್ವವಿದ್ಯಾಲಯ ಪಿಎಚ್‌ಡಿಗೆ ಮಾನ್ಯ ಮಾಡಿದೆ.

ಪ್ರದೀಪ್ ಜ್ಯಾಂತೆ ಬೀದರನ ಲಿಂಗಾಯತ ಮಹಾ ಮಠದ ಸಕ್ರಿಯ ಸೇವಾಧಾರಿಯಾಗಿದ್ದಾರೆ. ಅವರಿಗೆ ಪಿಎಚ್‌ಡಿ ಪದವಿ ದೊರೆತಿದ್ದಕ್ಕೆ ಲಿಂಗಾಯತ ಮಹಾ ಮಠದ ಕಾರ್ಯದರ್ಶಿ ಚನ್ನಬಸವ ಹಂಗರಗಿ ಸಂತಸ ವ್ಯಕ್ತಪಡಿಸಿದ್ದಾರೆ.

## ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ವಚನ ಸಂಗೀತ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 21 : ಬೀದರ ನಗರದ ಡಾ. ಚನ್ನಬಸವ ಪಟ್ಟದೇವರ ಪ್ರಸಾದ ನಿಲಯದ ಭವನದಲ್ಲಿ ಅಕ್ಕಮಹಾದೇವಿ ಮಹಿಳಾ ಸಾಂಸ್ಕೃತಿಕ ಸಂಘ ವಿದ್ಯಾನಗರ ಬೀದರ ವತಿಯಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ವಚನ ಸಂಗೀತ ಕಾರ್ಯಕ್ರಮವು ದಿನಾಂಕ: 20/03/2025 ರಂದು ಗುರುವಾರ ಸಂಜೆ 6:00 ಗಂಟೆ ಜರುಗಿತು.



ದಿವ್ಯ ಸಾನ್ನಿದ್ಯ ವಹಿಸಿರುವ ಹಿರೇಮಠ ಸಂಸ್ಥಾನ ಭಾಲ್ಕಿಯ ಪೂಜ್ಯ ಶ್ರೀ ಮಹಾಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡುತ್ತಾ, ಪ್ರಸ್ತುತ ಸಮಯದಲ್ಲಿ ಸಮಾಜದ ಅಭಿವೃದ್ಧಿಯಲ್ಲಿ ಮಹಿಳೆಯ ಪಾತ್ರ ಪ್ರಮುಖವಾದುದು. ತಾಯಿಯು ಮನೆಯಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕೃತಿ, ಸಂಸ್ಕಾರ, ಪ್ರೀತಿ-ವಾತ್ಸಲ್ಯ ಮಮತೆಯಿಂದ ಬೆಳೆಸಿದರೆ ಮುಂದೆ ಮಕ್ಕಳು ದೇಶದ ಉತ್ತಮ ಪ್ರಜೆ- ಯಾಗುತ್ತಾರೆ. ಆದರೆ ಇಂದು ಸಾಫ್ಟವೇರ್ ಇಂಜಿನೀಯರ ಮಕ್ಕಳು ಮನೆಯಲ್ಲಿ ಅಶಾಂತಿ ನಿರ್ಮಾಣ ಮಾಡುತ್ತಿದ್ದಾರೆ. ಅದೇ ರೀತಿಯಾಗಿ ಸಂಸ್ಕಾರಯುತ ಮನೆಗಳು ಕೂಡ ಸಾಫ್ಟವೇರ್ ಮಕ್ಕಳಿಂದ ಮನೆಯಲ್ಲಿ ಒಡಕು ತರುತ್ತಿದ್ದಾರೆ. ಮುಂದುವರೆದು ಮಾತನಾಡುತ್ತಾ, ಮಕ್ಕಳನ್ನು ಹಡೆದು ತಿಪ್ಪೆಯಲ್ಲಿ ಮತ್ತು ಕಸದ ಬುಟ್ಟಿಯಲ್ಲಿ ಬಿಸಾಡುತ್ತಿರುವವರು ಮಹಿಳೆಯರೆ ಅಲ್ಲವೇ?. ಮಹಿಳೆಯರಲ್ಲಿ ಮಾನವೀಯ ಪ್ರೇಮ ಅಂತಕರಣದಲ್ಲಿ ಬೆಳೆದು ಬರಬೇಕು. ಸ್ವಾತಂತ್ರ ??ತೆ ಸಮಾನತೆಯನ್ನು ಪ್ರಥಮವಾಗಿ ಸ್ತ್ರೀಗೆ ಕೊಟ್ಟಿದ್ದು ಬಸವಣ್ಣನವರು. ಮಹಿಳೆಯು ವಿಶಾಲ ಹೃದಯ ಮತ್ತು ಉದಾತ್ತ ಮನಸ್ಸಿನವರಾಗಿದ್ದರೆ ಮಹಿಳಾ ದಿನಾಚರಣೆ ಮಾಡಿದ್ದಕ್ಕೆ ಸಾರ್ಥಕವಾಗುತ್ತದೆ ಎಂದು ನುಡಿದರು.

ಹಿರಿಯ ಸಾಹಿತಿಗಳಾದ ಪ್ರೊ. ಭಾಗೀರಥಿ ಕೊಂಡರ ರವರು ಉದ್ಘಾಟಕರಾಗಿ ಆಗಮಿಸಿ, ಗುರುಬಸವ ಪೂಜೆ ನೆರವೇರಿಸಿ ದೀಪ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ, ಮಹಿಳೆಯರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಸ್ವಾತಂತ್ರತೆ, ಸಮಾನತೆ, ಸಹೋದರತೆ ತಂದು ಕೊಟ್ಟಿ ಅವರ ಬದುಕು ಕಟ್ಟಿಕೊಳ್ಳಲು ಬಸವಣ್ಣನವರು ಮಾಡಿರುವ ಬಹುದೊಡ್ಡ ಕಾರ್ಯವಾಗಿದೆ.

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಇಡೀ ಜಗತ್ತಿನಲ್ಲಿ ಆಚರಿಸಲು ಕಾರಣವೇನೆಂದರೆ, ಮಹಿಳೆಯನ್ನು ಸಬಲೆಯನ್ನಾಗಿ ಮಾಡುವುದಾಗಿದೆ, ಸಮಾಜದಲ್ಲಿಯ ಲಿಂಗ ತಾರತಮ್ಯ ಹೊಗಲಾಡಿಸಿ ಮತ್ತು ಮಹಿಳೆಯ ಸಮಸ್ಯೆಯನ್ನು ನ್ಯಾಯಯುತವಾಗಿ ಮಾಡುವುದಾಗಿದೆ. ಸುಸಂಸ್ಕೃತರನ್ನಾಗಿ, ರಾಷ್ಟ್ರ ಪ್ರೇಮ ಬೆಳೆಸುವುದಾಗಿದೆ. ಮಹಿಳಾ ದಿನಾಚರಣೆ ಜಗತ್ತಿನ 9 ರಾಷ್ಟ್ರಗಳಲ್ಲಿ 23 ಮಹಿಳಾ ಸಂಘಟನೆಗಳಿಂದ ಈ ಮಹಿಳಾ ದಿನಾಚರಣೆ ಮಾಡಲು ಪ್ರೇರಕ ಶಕ್ತಿಯಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾದ ಶಕುಂತಲಾ ಬೆಲ್ದಾಳೆ ಮಾತನಾಡುತ್ತಾ, ಮಹಿಳೆಯರಲ್ಲಿ ಆತ್ಮೀಯ ಪ್ರೇಮ, ಸಹಾನುಭೂತಿಗಳಂತ ಮನೋಭಾವನೆ ಬೆಳೆದು ಬರಬೇಕು ಎಂದರು.

ಡೈಯಟ್ ಕಾಲೇಜಿನ ಉಪನ್ಯಾಸಕರಾದ ಗೀತಾ ಗಡ್ಡಿ ರವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡುತ್ತಾ, ಹದಿಹರೆಯದ ಮಕ್ಕಳಲ್ಲಿ ಚಂಚಲತೆ, ತಳಮಳದ ಭಾವನೆ ಮೂಡಿ ಬರುತ್ತದೆ, ತಾಯಿ- ತಂದೆಯವರು ಬಾಲ್ಯಾವಸ್ಥೆಯಲ್ಲಿ ವಿವಾಹ ಮಾಡುತ್ತಿರುವುದು ಪ್ರಚಲಿತ ವೈಜ್ಞಾನಿಕ ಜಗತ್ತಿನಲ್ಲಿ ಇನ್ನು ಕಡಿಮೆಯಾಗಿಲ್ಲ. ಸ್ತ್ರೀ ಪುರಷರ ಮನಸ್ಥಿತಿಯು ಪರಿವರ್ತನೆಯಾಗಬೇಕು. ಬಾಲ್ಯ ವಿವಾಹ ತಡೆಗಟ್ಟುವುದು ಅವಶ್ಯಕತೆ ಇದೆ. ಸಮಾಜದಲ್ಲಿ ಆಡಂಬರದ ವಿವಾಹ, ವರದಕ್ಷಿಣೆ ಪಿಡುಗು ಸಮಾಜದಿಂದ ಬೇರು ಸಹಿತ ಕಿತ್ತುಹಾಕಬೇಕಾಗಿದೆ. ಪ್ರಸ್ತುತ ಸಮಾಜದಲ್ಲಿ ಮಹಿಳೆಯು ನೀತಿವಂತಳಾಗಿ ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಬೇಕೆಂದರು.

ಸಾಹಿತಿಗಳಾದ ಧನಲಕ್ಷ್ಮಿ ಪಾಟೀಲ್ ಹಲಸಿ ರವರು 'ಮಹಿಳೆ ಮತ್ತು ಸಮಾಜ' ವಿಷಯ ಕುರಿತು ವಿಶೇಷ ಉಪನ್ಯಾಸ ಮಂಡಿಸುತ್ತಾ, ಹೆಣ್ಣು ಮತ್ತು ಗಂಡು ಮಕ್ಕಳು ಈ ಭೂಮಿಯ ಮೇಲೆ ಸಮತೋಲನದಿಂದ ಬದುಕು ಸಾಗಿಸಿದಾಗ ಒಂದು ದೇಶ, ಸಮಾಜ ಅಭಿವೃದ್ಧಿಯಾಗುತ್ತದೆ. ವೇದ ಕಾಲದಲ್ಲಿ ಮೈತ್ರಿಯೆ, ಮೇನಕಾ ಮುಂತಾದವರು ಸ್ವಾತಂತ್ರರಾಗಿ ತಮ್ಮ ಪ್ರತಿಭೆಯನ್ನು ಸಮಾಜಕ್ಕೆ ನೀಡಿದ್ದರು. ಮುಂದೆ 12ನೇ ಶತಮಾನದಲ್ಲಿ ಬಸವಣ್ಣನವರ ನೇತೃತ್ವದಲ್ಲಿ ಮಹಿಳೆಗೆ ಸ್ವಾತಂತ್ರ ?? ಮತ್ತು ಸಮಾನತೆ ದೊರಕಿದೆ. 1857ನೇ ಸ್ವತಂತ್ರಯ ಸಂಗ್ರಾಮದಲ್ಲಿ ಮಹಿಳೆಯರಾದ ಝಾನ್ಸಿಬಾಯಿ, ಕಿತ್ತೂರ ರಾಣಿ ಚನ್ನಮ್ಮ ಇವರೆಲ್ಲರು ವೀರ-ಶೂರರಾಗಿ ಬ್ರಿಟಿಷರ ವಿರುದ್ಧ ಹೋರಾಡಿದ್ದಾರೆ. ಆದರೆ ಮುಂದೆ ಸ್ವತಂತ್ರಯ ದೊರಕಿದ ನಂತರ ಮಹಿಳೆಯ ಸ್ಥಿತಿ ಚಿಂತಾಜಕವಾಗಿತ್ತು. ಹೆಣ್ಣು ಮತ್ತು ಗಂಡು ಭೇದ-ಭಾವ ಮಾಡಲಾರದೇ ಮಹಿಳೆಗೆ ಗೌರವ ಸನ್ಮಾನ ಕೊಡುವುದು ಅವಶ್ಯಕತೆ ಇದೆ. ಅದಕ್ಕೆ ಸ್ವಾಮಿ ವಿವೇಕಾನಂದ ಹೇಳುವಂತೆ, 'ಎಲ್ಲಿ ಮಹಿಳೆಯರನ್ನು ಗೌರವಿಸ್ಪಡುತ್ತದೆಯೋ ಅಲ್ಲಿ ದೇವರು ವಾಸಿಸುತ್ತಾರೆ' ಎಂದಿದ್ದಾರೆ ಎಂದು ವಿಷಯ ಪ್ರತಿಪಾದಿಸಿದರು.

ವೇದಿಕೆಯ ಮೇಲೆ ಮುಖ್ಯ ಅತಿಥಿಗಳಾಗಿ ಶ್ರೀಕಾಂತ ಬಿರಾದಾರ, ಉಮಾಕಾಂತ ಮೀಸೆ, ಮಹಾದೇವಿ ಬಿರಾದಾರ, ಶ್ರೀಕಾಂತ ಸ್ವಾಮಿ ಉಪಸ್ಥಿತರಿದ್ದರು. ಅಕ್ಕಮಹಾದೇವಿ ಮಹಿಳಾ ಸಾಂಸ್ಕೃತಿಕ ಸಂಘದ ಅಧ್ಯಕ್ಷರಾದ ಮೀನಾಕ್ಷಿ ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ಮಾಲಾಶ್ರೀ ಗುರುನಾಥ ಸ್ವಾಗತ ಕೋರಿದ- ರೆ, ವಿಜಯಲಕ್ಷ್ಮಿ ಹುಗ್ಗೆಳ್ಳಿ ನಿರೂಪಿಸಿದರೆ, ಜಗದೇವಿ ನಾಗರಾಳೆ ವಂದಿಸಿದರು. ಕು. ಆದಿತಿ ಹುಗ್ಗೆಳ್ಳಿ ವಚನ ನೃತ್ಯ ಪ್ರದರ್ಶಿಸಿದರು. ಶಕುಂತಲಾ ಹಾಗೂ ಕಸ್ತೂರಿಬಾಯಿ ಬಿರಾದಾರ ರವರು ವಚನ ಸಂಗೀತ ನಡೆಸಿಕೊಟ್ಟರು. ಪ್ರಮುಖರಾದ ನಿರ್ಮಲಾ, ಮಹಾನಂದ ಸ್ವಾಮಿ, ಸವಿತಾ ಗಂದಿಗುಡೆ, ಮಂಜುಳಾ, ಅನಿತಾ, ಶಾಂತಮ್ಮ ಪಾಟೀಲ್, ಪ್ರೇಮಾ ಮುಚಳಂಬೆ, ಲಕ್ಷ್ಮೀಬಾಯಿ ಹಲಬರ್ಗೆ, ಲಕ್ಷ್ಮೀಬಾಯಿ , ಕೀರ್ತಮ್ಮ, ಧುಳಯ್ಯಾ ಸ್ವಾಮಿ, ಶಾಮರಾವ ಮ್ಯಾಕರೆ, ಡಾ. ವೈಜಿನಾಥ ಬಿರಾದಾರ, ರಾಮನಗೌಡ ಬಿರಾದಾರ ಮತ್ತು ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯದ ಮಕ್ಕಳು ಭಾಗವಹಿಸಿದ್ದರು.

## ಹೆತ್ತವ್ವನ ಅಗಲಿಕೆ ಮಧ್ಯೆಯೂ ಎಸ್.ಎಸ್.ಎಲ್. ಸಿ ಪರೀಕ್ಷೆ ಬರೆದ ವಿದ್ಯಾರ್ಥಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಗಂಗಾವತಿ ತಾಲೂಕಿನ ಕೇಸರಹಟ್ಟಿಯಲ್ಲಿ ನಡೆದ ಮನ ಕಲಕುವ ಧಾರುಣ ಘಟನೆ ನೆಡದಿದೆ. ಹೊತ್ತು ಹೆತ್ತವ್ವನ ಪ್ರೀತಿ, ಮಮತೆಗೆ ಬೆಲೆ ಕಟ್ಟಲಾಗದು. ಮಕ್ಕಳ ವಿಚಾರಕ್ಕೆ ಬಂದರೆ ಎಂಥಹ ತ್ಯಾಗಕ್ಕಾದರೂ ತಾಯಿ ಸಿದ್ಧಳಿರುತ್ತಾಳೆ. ಅಂತಹ ತಾಯಿಯ ಅಗಲಿಕೆಯ ನೋವಿನ ಮಧ್ಯೆಯೂ ವಿದ್ಯಾರ್ಥಿಯೊಬ್ಬ ಪರೀಕ್ಷೆ ಬರೆದ ಘಟನೆ ಗಂಗಾವತಿ ತಾಲೂಕಿನ ಕೇಸರಹಟ್ಟಿಯಲ್ಲಿ ನಡೆದಿದೆ. ಗ್ರಾಮದ ಸ್ವಾಮಿ ವಿವೇಕಾನಂದ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಅಡಿವೆಯ್ಯ ಸ್ವಾಮಿ ಎಂಬ ಹತ್ತನೇ ತರಗತಿಯ ವಿದ್ಯಾರ್ಥಿಯ ತಾಯಿ ವಿಜಯಲಕ್ಷ್ಮಿ ಸಿದ್ದಯ್ಯಸ್ವಾಮಿ (38) ಶುಕ್ರವಾರ ಬೆಳಗಿನ ಸಮಯದಲ್ಲಿ ಹುಬ್ಬಳ್ಳಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ತಾಯಿಯ ಅಗಲಿಕೆಯ ಸುದ್ದಿಯ ಮಧ್ಯೆಯೂ ಧೃತಿಗೆಡದ ವಿದ್ಯಾರ್ಥಿ ತನ್ನ ಕುಟುಂಬದವರ ಮನವೊಲಿಸಿ ಪರೀಕ್ಷೆ ಬರೆಯುವುದಾಗಿ ತಿಳಿಸಿದ್ದ.

ವಿದ್ಯಾರ್ಥಿ ಮನೆಗೆ ಬಂದ ಶಿಕ್ಷಕರು: ನೋವಿನಲ್ಲಿದ್ದ ವಿದ್ಯಾರ್ಥಿ ಅಡಿವೆಯ್ಯ ಸ್ವಾಮಿ ಮನೆಗೆ ಬಂದ ಶಿಕ್ಷಕರು ಸಾಂತ್ವಾನ ಹೇಳಿದರು. ಬಳಿಕ ಪರೀಕ್ಷಾ ಕೇಂದ್ರದವರೆಗೆ ಕರೆದೊಯ್ಯಲು ನೆರವಾದರು. ಪರೀಕ್ಷೆಯ ಬಳಿಕ ವಿದ್ಯಾರ್ಥಿ ತನ್ನ ತಾಯಿಯ ಅಂತಿಮ ಸಂಸ್ಕಾರದಲ್ಲಿ ಭಾಗಿಯಾದ ವಿದ್ಯಾರ್ಥಿ ತಾಯಿ ವಿಜಯಲಕ್ಷ್ಮಿ ಕಳೆದ ಕೆಲ ದಿನಗಳ ಹಿಂದೆ ಸ್ನಾನದ ಕೋಣೆಯಲ್ಲಿ ಬಿದ್ದು ತಲೆಗೆ ಗಾಯ ಮಾಡಿಕೊಂಡಿದ್ದರು. ಪರಿಣಾಮ ತಲೆಯಲ್ಲಿ ರಕ್ತ ಹೆಪ್ಪುಗಟ್ಟಿತ್ತು. ಹೀಗಾಗಿ, ಚಿಕಿತ್ಸೆಗಾಗಿ ಹುಬ್ಬಳ್ಳಿಯ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಗುರುವಾರ ರಾತ್ರಿ ಶಸ್ತ್ರಚಿಕಿತ್ಸೆ ಮಾಡಲಾಗಿತ್ತು. ಆದರೆ, ಶುಕ್ರವಾರ ಬೆಳಗ್ಗೆ ವಿಜಯಲಕ್ಷ್ಮಿ ಸಾವನ್ನಪ್ಪಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

## ಕಲ್ಯಾಣ ಲಿಂಗ ಸಮಾನತೆ-ಸಾಮಾಜಿಕ ನ್ಯಾಯ ಒದಗಿಸಿದ ನೆಲ: - ಡಾ. ವಡ್ಡಗೆರೆ ನಾಗರಾಜಯ್ಯ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: -ಮಾ 21 ಬುದ್ಧನ ನಂತರ ವೈಚಾರಿಕ ಬೆಳಕು ಹರಿಸಿ, ಕಲ್ಯಾಣದ ನೆಲದಲ್ಲಿ ಎಲ್ಲರಿಗೂ ಲಿಂಗ ಸಮಾನತೆ-ಸಾಮಾಜಿಕ ನ್ಯಾಯ ಕೊಡಿಸಿದ್ದು ಬಸವಣ್ಣನವರು ಎಂದು ಬೆಂಗಳೂರಿನ ಹಿರಿಯ ಚಿಂತಕ ಡಾ. ವಡ್ಡಗೆರೆ ನಾಗರಾಜಯ್ಯ ಹೇಳಿದರು.

ನಗರದ ತಾಲೂಕು ಪಂಚಾಯಿತ ಸಭಾಂಗಣದಲ್ಲಿ ತಾಲೂಕು ಸರ್ಕಾರಿ ನೌಕರರ ಸಂಘದಿಂದ ಹಮ್ಮಿಕೊಂಡಿದ್ದ ಮಹಿಳಾ ದಿನಾಚರಣೆ ಮತ್ತು ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿ ವಚನ ಚಳುವಳಿ ಎಲ್ಲರನ್ನೂ ಒಳಗೊಳ್ಳುವಿಕೆಯ ಮೂಲಕ ಇಡೀ ವಿಶ್ವದ ಚರಿತ್ರೆಯಲ್ಲಿ ಮಹತ್ವ ಪಡೆದಿದೆ ಎಂದರು.

ನಿರ್ಲಕ್ಷಿತ ಸಮುದಾಯಗಳಿಗೆ ಅಧಿಕಾರ ಕೊಡುವ ಮೂಲಕ ಸಾಮಾಜಿಕವಾಗಿ ಮುನ್ನೆಲೆಗೆ ತರಲು ಪ್ರಯತ್ನಿಸಿದ್ದು ವಚನ ಚಳುವಳಿಯಾಗಿದೆ. ಮಹಿಳೆಯರಿಗೆ ಆಸ್ತಿ ಹಕ್ಕು, ಸಮಾನತೆ ನೀಡುವ ಮೂಲಕ ಸಂವಿಧಾನ ಸ್ತ್ರೀವಾದಿ ಅಂಶಗಳು ಒಳಗೊಂಡಿದೆ ಎಂದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಚಿದ್ರಿ ಅವರು ಉದ್ಘಾಟಿಸಿ ಮಾತನಾಡಿ ಸರ್ಕಾರಿ ನೌಕರರ ಎಲ್ಲ ಸಮಸ್ಯೆಗಳನ್ನೂ ಸಕಾರಾತ್ಮಕ ರೀತಿಯಲ್ಲಿ ಬಗೆಹರಿಸಲು ಪ್ರಯತ್ನ ಮಾಡಲು ಎಲ್ಲರೂ ಸಂಘಟನಾತ್ಮಕವಾಗಿ ದುಡಿಯೋಣ. ನಮ್ಮ ಒಟ್ಟು ಸಮಸ್ಯೆ ಸರ್ಕಾರ ಮುಂದೆ ಇಟ್ಟು ಪರಿಹಾರ ಕಂಡುಕೊಳ್ಳೋಣ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ದಿಲೀಪ್ ಕುಮಾರ್ ಉತ್ತಮ ಮಾತನಾಡಿ, ಮಹಿಳೆಯರು ಎಲ್ಲ ರಂಗಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಈ ಕಾಲದಲ್ಲಿ ಹೆಣ್ಣು ಗಂಡುಗಳಲ್ಲಿ ಮೇಲು ಕೀಳು ಎಂಬ ತಾರತಮ್ಯಗಳಿಲ್ಲ. ಎಲ್ಲ ರಂಗಗಳಲ್ಲೂ ಮಹಿಳಾ ಶಕ್ತಿ ಅನಾವರಣ ಆಗುತ್ತಿದ್ದಾರೆ ಎಂದರು.

ಜಾನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಬೆಂಗಳೂರಿನ ಹಿರಿಯ ಜಾನಪದ ಗಾಯಕಿ ವಡ್ಡಗೆರೆ ಕದರಮ್ಮ ಬಸವಣ್ಣ ಮತ್ತು ಅಂಬೇಡ್ಕರ್ ಅವರ ಕುರಿತು ಹಾಡುಗಳನ್ನು ಹಾಡಿದರು.

ಕರಾಸನೌ ಸಂಘದ ಪ್ರಧಾನ ಕಾರ್ಯದರ್ಶಿ ಪ್ರಭುಲಿಂಗ ತುಗಾವೆ, ಸಂಘದ ರಾಜ್ಯ ಘಟಕದ ಸದಸ್ಯ ರಾಜಕುಮಾರ ಮಾಳಗೆ, ಜಿಲ್ಲಾ ಖಜಾಂಚಿ ದೇವಪ್ಪ, ಸಂಘದ ನಿರ್ದೇಶಕ ಗೌತಮ ಶಿಂಧೆ ಮಾತನಾಡಿದರು.

. ಹುಲಸೂರ ತಹಸೀಲ್ದಾರ್ ಶಿವಾನಂದ ಮೇತ್ರೆ, ಬೀದರಿನ ಕವಯಿತ್ರಿ ಸ್ವರೂಪಾರಾಣಿ ನಾಗೂರೆ

ಸುಭಾಷ ಕಾಮಶೆಟ್ಟಿ, ಸಂತೋಷಕುಮಾರ ಚೌವ್ಹಾಣ್, ಡಾ. ಮಹಾಳೇಶ್, ಡಾ. ಆನಂದ ಪಾಟೀಲ ಸೇರಿ ಅನೇಕರು ಉಪಸ್ಥಿತರಿದ್ದರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳೆಯರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

## ಗ್ಯಾರಂಟಿ ಯೋಜನೆಗಳನ್ನು ಬಡವರಿಗೆ ತಲುಪಿಸುವುದು ಅಧಿಕಾರಿಗಳ ಕರ್ತವ್ಯವಾಗಿದೆ:- ಸಂಗ್ರಾಮಪ್ಪ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ರಾಜ್ಯ ಸರಕಾರವು ಅನುಷ್ಠಾನಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳನ್ನು ಬಡವರಿಗೆ ಉಪಯೋಗ ಆಗುವಂತೆ ಯೋಜನೆಗಳು ತಲುಪಿಸುವುದು ಅಧಿಕಾರಿಗಳ ಆದ್ಯ ಕರ್ತವ್ಯವಾಗಿದೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ತಾಲೂಕು ಮಟ್ಟದ ಅಧ್ಯಕ್ಷ ಸಂಗ್ರಾಮಪ್ಪ ಹೇಳಿದರು. ಪಟ್ಟಣ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡುತ್ತ ಯುವ ನಿಧಿ ಯೋಜನೆಯ ನೊಂದಣಿ ಆಮೆಗತಿಯಿಂದ ಸಾಗಿದ್ದು ಕೂಡಲೆ ತ್ವರಿತಗತಿಯಿಂದ ನೊಂದಣಿ ಕಾರ್ಯ ಚುರುಕುಗೊಳಿಸಬೇಕು ಎಂದು ಸಭೆಯಲ್ಲಿ ತಿಳಿಸಿದರು. ಕ್ಷೇತ್ರದಲ್ಲಿರುವ ಮಹಿಳೆಯರು ಶಕ್ತಿ ಯೋಜನೆಯ ಸದೂಪಯೋಗ ಪಡೆದುಕೊಳ್ಳುತ್ತಿರುವುದು ಸಂತಸ ತಂದಿದೆ. ಸಾರಿಗೆ ಬಸಗಳಲ್ಲಿ ಸಂಚರಿಸುವಾಗ ವೃದ್ದರು, ಅಂಗವಿಕಲರಿಗೆ ತೊಂದರೆ ಅನುಭವಿಸುವಂತಾಗಿದೆ. ಕೂಡಲೆ ಸಾರಿಗೆ ಇಲಾಖೆಯ ನಿರ್ವಾಹಕರು ಸಂಕಷ್ಟ ಎದುರಿಸುತ್ತಿರುವ ವೃದ್ದರಿಗೆ ಅಂಗವಿಕಲರಿಗೆ ಆಸನದ ವ್ಯವಸ್ಥೆ ಕಲ್ಪಿಸಿಕೊಡುವಂತೆ ಸಾರಿಗೆ ಇಲಾಖೆಯ ನಿರ್ವಾಹಕರಿಗೆ ತಿಳಿಸುವಂತೆ ಸಾರಿಗೆ ಇಲಾಖೆಯ ವ್ಯವಸ್ಥಾಪಕರಿಗೆ ಸೂಚಿಸಿದರು. ಗೃಹಜ್ಯೋತಿ, ಅನ್ನಭಾಗ್ಯ, ಗೃಹಲಕ್ಷ್ಮಿ ಯೋಜನೆಗಳ ಕುರಿತು ಸಮಗ್ರವಾಗಿ ಚರ್ಚಿಸಿದರು. ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮಿ ಬಿರಾದಾರ್, ಗ್ಯಾರಂಟಿ ಯೋಜನೆಗಳ ತಾಲೂಕು ಮಟ್ಟದ ಅನುಷ್ಠಾನದ ಉಪಾಧ್ಯಕ್ಷ ಮನೋಜಕುಮಾರ ಕೋಟೆಕರ, ಯೋಜನೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಸೇರಿದಂತೆ ತಾಲೂಕು ಪಂಚಾಯತ ಸಿಬ್ಬಂದ್ದಿಗಳು ಉಪಸ್ಥಿತರಿದ್ದರು.


## ವಿಶ್ವ ಅರಣ್ಯ ದಿನಾಚರಣೆ ಶಾಲಾ ಕಾಲೇಜುಗಳಲ್ಲಿ ಆಚರಿಸಲು ಸರ್ಕಾರಕ್ಕೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:-ಪಟ್ಟಣದ ಗದಗಿಮಠದಲ್ಲಿ ಅಂತರಾಷ್ಟೀಯ ಅರಣ್ಯ ದಿನಾಚರಣೆ ಅಂಗವಾಗಿ ಮಾತೃಶ್ರೀ ಸರಸ್ವತಿ ಕಾವಡಿಮಠ ಇವರ ನೇತೃತ್ವದಲ್ಲಿ ವೃಕ್ಷಕ್ಕೆ ವಿಶೇಷ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಪರಿಸರವಾದಿ ಶೈಲೇಂದ್ರ ಕಾವಡಿ ವಿಶೇಷ ಪೂಜೆ ಸಲ್ಲಿಸಿ ಈ ಶುಭದಿನದಂದು ಹಲವಾರು ಸಂಕಲ್ಪಗಳನ್ನು ಮಾಡಿದರು. ಅಳಿವಿನಂಚಿನಲ್ಲಿರುವ ಅಂಟುವಾಳ ಶಮಿ ಗಿಡಗಳನ್ನು ಬೀದರ್ ಜಿಲ್ಲೆಯಲ್ಲಿ ಈ ವರ್ಷ ನಡೆಸುವಂತಹ ಕಾರ್ಯಕ್ರಮ ಹಾಗೂ ಜನಜಾಗೃತಿ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಸರ್ಕಾರದಿಂದ ಕಡ್ಡಾಯವಾಗಿ ವಿಶ್ವ ಅರಣ್ಯ ದಿನಾಚರಣೆ ಗ್ರಾಮ ಮಟ್ಟದಲ್ಲಿ ಶಾಲಾ ಕಾಲೇಜುಗಳಲ್ಲಿ ಕಡ್ಡಾಯವಾಗಿ ಆಚರಿಸಲು ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸುವುದಾಗಿ ತಿಳಿಸಿದರು.


## ರೇವಣಸಿದಯ್ಯಾ ಹೀರೆಮಠ ತಂಡದಿಂದ ಕರ್ನಾಟಕ ರತ್ನ ಪುನೀತ್ ರಾಜಕುಮಾರ್ 50ನೆಯ ಜನ್ಮ ದಿನದ ಸಂಭ್ರಮ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಮಾರ್ಚ್ 21- ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್ ಅವರ ಹುಟ್ಟಿದ ದಿನ. ಅವರು ಅಭಿಮಾನಿಗಳನ್ನು ಅಗಲಿ ನಾಲ್ಕು ವರ್ಷಗಳಾಗಿವೆ. ಆದ್ರೂ, ಅಪ್ಪುವಿನ ನೆನಪುಗಳು ಕನ್ನಡಿಗರ ಮನಸ್ಸಿನಲ್ಲಿ ಹಚ್ಚ ಹಸಿರಾಗಿ ಉಳಿದಿದೆ ಎಂದು ಭರವಸೆ ಬೆಳಕು ಜನ ಸೇವಾ ಟ್ರಸ್ಟ್ (ರಿ) ಸಂಸ್ಥಾಪಕರಾದ ಶ್ರೀಮತಿ ಸಾಕ್ಷಿ ಡಾ. ರೇವಣಸಿದ್ದಯ್ಯ ಹಿರೇಮಠ್ ರವರು ಐವತ್ತನೇ ಜನ್ಮದಿನದ ಪ್ರಯುಕ್ತ ಕೇಕ್ ಕತ್ತರಿಸುವ ಮೂಲಕ ಮಾತನಾಡುತ್ತಾ ನುಡಿದರು. ಕರ್ನಾಟಕ ರತ್ನ ಪುನೀತ್ ರಾಜ್‌ಕುಮಾರ್ ಅವರ 50ನೇ ವರ್ಷದ ಜನ್ಮದಿನಕ್ಕೆ ಅಭಿಮಾನಿಗಳು ಅವರ ಭಾವಚಿತ್ರವನ್ನು ಇಟ್ಟು ಪೂಜೆ ಮಾಡಿದ್ರು. ಪುಷ್ಪಾರ್ಚನೆ, ಘೋಷಣೆಗಳನ್ನು ಕೂಗಿದರು. ಕಲಾವಿದರು ಜೊತೆಗೂಡಿ ಅಪ್ಪುವಿನ ಭಾವಚಿತ್ರವನ್ನು ಮೂಡಿಸಿದರು. ಪುನೀತ್ ರಾಜ್ ಕುಮಾರ್ ಅವರು ತಮ್ಮ ವಿಭಿನ್ನ ಅಭಿನಯದ ಮೂಲಕ ಕನ್ನಡಿಗರ ಹೃದಯದಲ್ಲಿದ್ದಾರೆ. ಅವರ 50 ನೇ ವರ್ಷದ ಹುಟ್ಟು ಹಬ್ಬವನ್ನು ಆಚರಣೆ ಮಾಡುವ ಜೊತೆಗೆ ನಮ್ಮೊಂದಿಗೆ ಅಭಿಮಾನಿಗಳು ಸದಾ ಇರುತ್ತಾರೆ ಎಂಬ ಸಂದೇಶವನ್ನು ಆ ಕುಟುಂಬಕ್ಕೆ ನೀಡೋಣ. ನಟನೆಯಲ್ಲದೆ ಸಾಮಾಜಿಕ ಕಾರ್ಯಗಳಲ್ಲೂ ಅವರು ಮುಂದಿದ್ದರು. ಜಿಲ್ಲೆ ಅಭಿವೃದ್ಧಿ ರಾಯಭಾರಿಯಾಗಿದ್ದರು. ಡಾ. ರಾಜಕುಮಾರ್ ಟ್ರಸ್ಟ್ ಮೂಲಕ ಹೆಣ್ಣುಮಕ್ಕಳ ಶ್ರೇಯೋಭಿವೃದ್ಧಿಗೆ ಒತ್ತು ನೀಡಿದ್ದರು. ಯುವಜನಾಂಗದ ಸ್ಫೂರ್ತಿ ಚಿಲುಮೆಯಾಗಿದ್ದರು ಎಂದರು. ಇದೇ ಸಂದರ್ಭದಲ್ಲಿ ಬೆಳ್ಳಿಗೆ ಅಪ್ಪು ಹೆಸರಿನಲ್ಲಿ ಹುಮ್ನಾಬಾದನ ಹನುಮಾನ ದೇವಸ್ಥಾನದಲ್ಲಿ ಶ್ರೀಮತಿ ಸಾಕ್ಷಿ ಡಾ. ಶ್ರೀ ರೇವಣಸಿದ್ದಯ್ಯ ಹಿರೇಮಠ್ ಹಾಗೂ ಅಪ್ಪು ಅಭಿಮಾನಿಗಳಿಂದ ವಿಶೇಷ ಪೂಜೆ ಸಲ್ಲಿಸಿ, ಹುಮ್ನಾಬಾದ್ ಪಟ್ಟಣದ ಹನುಮಾನ ದೇವಸ್ಥಾನದ ಎದುರುಗಡೆ ವಾಂಜರಿ ರಸ್ತೆ ಹತ್ತಿರ ಪುನೀತ್ ರಾಜಕುಮಾರ್ ಚೌಕ್ ನಿರ್ಮಿಸಿದ ಅಪ್ಪು ಅಭಿಮಾನಿಗಳು ಪುನಿತ ರಾಜಕುಮಾರವರ ಜನ್ಮ ದಿನ ಅದ್ದೂರಿಯಾಗಿ ಆಚರಣೆ ಮಾಡಿದರು. ಭರವಸೆ ಬೆಳಕು ಜನ ಸೇವಾ ಟ್ರಸ್ಟ್ (ರಿ) ಸಂಸ್ಥಾಪಕರಾದ ಶ್ರೀಮತಿ ಸಾಕ್ಷಿ ಡಾ. ಶ್ರೀ ರೇವಣಸಿದ್ದಯ್ಯ ಹಿರೇಮಠ್ ರವರಿಂದ ಇಂದು ಗಡಿ ಜಿಲ್ಲೆ ಬೀದರ್ ನಲ್ಲಿ ಸಂಜೆ ನಡೆಯಲಿರುವ ವೇದಿಕೆ ಕಾರ್ಯಕ್ರಮದಲ್ಲಿ ನೀಡಿ ಸಂಗೀತ ಕಾರ್ಯಕ್ರಮದಿಂದ ಜನರಿಂದ ಬಂದ ದೇಣಿಗೆಯನ್ನು ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವ ಕುಟುಂಬಕ್ಕೆ ಆಸ್ಪತ್ರೆಯ ಖರ್ಚಿಗಾಗಿ ನೀಡಿದರು. ಭರವಸೆ ಬೆಳಕು ಜನ ಸೇವಾ ಟ್ರಸ್ಟ್ (ರಿ) ಸಂಸ್ಥಾಪಕರಾದ ಶ್ರೀಮತಿ ಸಾಕ್ಷಿ ಡಾ. ಶ್ರೀ ರೇವಣಸಿದ್ದಯ್ಯ ಹಿರೇಮಠ್ ಹೀಗೆ ವಿವಿಧ ಕಾರ್ಯಕ್ರಮಕ್ಕೆ ತೆರಳುವಾಗ ಯಾರಿಗಾದರೂ ಯಾವುದೇ ತೊಂದರೆ ಉಂಟು ಆಗಿದ ಕ್ಷಣ ಕಂಡರೆ ಸಹಾಯ ಮಾಡುವರು, ಹೀಗೆ ಸಹಾಯ ಮಾಡುತ್ತಾ ಬೀದರ ಜಿಲ್ಲೆಗೆ ಹಾಗೂ ಹುಮನಾಬಾದ ತಾಲ್ಲೂಕಿಗೆ ಕೀರ್ತಿ ತರಲಿ ಎಂದು ಸಂತೋಷ ಪಾಟೀಲ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಶಾಸಕರ ಸಹೋದರರಾದ ಸಂತೋಷ್ ಪಾಟೀಲ್, ವೀರೇಶ್ ಸಿಗಿ, ಗೌತಮ್ ಸಾಗರ್., ಹಾಸ್ಯ ಕಲಾವಿದನದ ಗುಂಡಣ್ಣ ಡಿಗಿ, ಗುರು ಮುಗಳಿ, ಶಿವ್ ಪುಟ್ಕಲ್, ರಾಜು ರೆಡ್ಡಿ. ವಿನೋದ್ ಡಿಕೆ. ಹಾಗೂ ಇನ್ನಿತ್ತರರು ಉಪಸ್ಥಿತರಿದ್ದರು.

## ಜೆ. ಬಿ .ಕೆ .ಪ್ರೌಢ ಶಾಲೆ ಯಲ್ಲಿ 10ನೇ ತರಗತಿ ಮಕ್ಕಳಿಗೆ ಬೀಳ್ಕೊಡಗೆ ಸಮಾರಂಭ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮಾ 21 ಇಲ್ಲಿನ ಶ್ರೀ ಜಗದ್ಗುರು ಬಸವಕುಮಾರೇಶ್ವರ ಪ್ರೌಢ ಶಾಲೆಯಲ್ಲಿ 55 ನೇ ಶಾಲಾ ವಾರ್ಷಿಕೋತ್ಸವ ಹಾಗೂ 2024 -2025 ನೇ ಸಾಲಿನ ಎಸ್ ಎಸ್ ಎಲ್ ಸಿ ಮಕ್ಕಳಿಗೆ ಬೀಳ್ಕೊಡಗೆ ಸಮಾರಂಭದ ಅಧ್ಯಕ್ಷತೆಯನ್ನು ಹುಲಸೂರಿನ ಪೂಜ್ಯ ಶ್ರೀ ಮ,ನಿ,ಪ್ರ,ಡಾ, ಶಿವಾನಂದ ಮಹಾಸ್ವಾಮಿಗಳು ವಹಿಸಿ ಮಾತನಾಡಿ ಶಿಕ್ಷಣವು ಹುಲಿಯ ಹಾಲು ಇದ್ದಂತೆ ಆ ಹಾಲು ಕೊಡಿದರೆ ಘರ್ಜಿಸಲೇ ಬೇಕು ಎಂದು ಹೇಳಿದರು. 9 ನೇಯ ತರಗತಿಯ ವಿಧಾರ್ಥಿಗಳು 10 ನೇಯ ತರಗತಿಯ ವಿಧಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡಿದರು. 10ನೇ ತರಗತಿಯ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಾದ ದತ್ತಾ ಮೆಹತ್ರೆ , ಶೃಷ್ಠಿ ಮತ್ತು ದಾನೇಶ್ವರಿ ಇವರು ಶಾಲೆಯ ಮತ್ತು ಶಿಕ್ಷಕರ ಬಗ್ಗೆ ಮನದಾಳದ ಅನಿಸಿಕೆ ವ್ಯಕ್ತಪಡಿಸಿದರು .

ಶಾಲೆಯ ಸಮಾಜವಿಜ್ಞಾನ ಶಿಕ್ಷಕರಾದ ಪ್ರಕಾಶ್ ಎಮ್, ಜಾಧವ ಮಾತನಾಡಿ ಒಬ್ಬ ರಾಜ ಅವನ ಪ್ರಜೆಗಳಿಗೆ ಸೀಮಿತ ವಾಗಿರುತ್ತಾನೆ ಆದರೆ ಒಬ್ಬ

ಜ್ಞಾನಿ ಪ್ರಪಂಚದಲ್ಲಿ ಪೂಜ್ಯನಿಯ ವಾಗಿರುತ್ತಾನೆ ಅದಕ್ಕಾಗಿ ಮಕ್ಕಳೇ ತಾವು ಸರಿಯಾಗಿ ಶಿಕ್ಷಣ ಪಡೆದರೆ ನಿಮ್ಮ ಭವಿಷ್ಯ ಉಜ್ವಲ್ ವಾಗುತ್ತದೆ ಎಂದರು.

ಶಾಲೆಯ ಮುಖ್ಯಗುರುಗಳಾದ ಶಿವಶಂಕರಪರಶೆಟ್ಟೆ, ಶಿವಾನಂದೇಶ್ವರ ಶಾಲೆಯ ಮುಖ್ಯಗುರುಗಳಾದ ನಾಗರಾಜ್ ಶೀಲವಂತ, ಸಂಗಮೇಶ ಭೂರೆ. ಶಿವುಕುಮಾರ್ ಪಾಟೀಲ್ ಪೂಜಾ ಶೀಲವಂತ ಅಖಿಲೇಶ್ ಬಿರಾದಾರ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ಮಕ್ಕಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಶಾಲೆಯ ದೈಹಿಕ ಶಿಕ್ಷಕರಾದ ಹೀರಾಸಿಂಗ್ ಭೋವಿ ನಿರೂಪಿಸಿದರು. ಸಹ ಶಿಕ್ಷಕರಾದ ಶಾಮು ಚವಾಣ್ ವಂದಿಸಿದರು.

## ಮುರ್ಕಿ ಶಾಲೆಯಲ್ಲಿ ಏಳನೇ ತರಗತಿ ವಿದ್ಯಾರ್ಥಿಗಳೆ ಬಿಳ್ಕೋಡುಗೆ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:

ತಾಲೂಕಿನ ಮುರ್ಕಿ ಗ್ರಾಮದ ಸರ್ಕಾರಿ ಮಾದರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಹಮ್ಮಿಕೊಂಡ ಏಳನೇ ತರಗತಿ ವಿದ್ಯಾರ್ಥಿಗಳ ಬಿಳ್ಕೋಡುಗೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶಾಲೆಯ

ಎಸ್.ಡಿ.ಎಮ್.ಸಿ. ಅಧ್ಯಕ್ಷ ಅಮರ ಠಾಕೂರ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜ್ಞಾನದ ಬೆಳಕಿನ ಶಕ್ತಿಯ ಮೂಲಕ ಸಾಧನೆ ಮಾಡಬೇಕು. ಶ್ರದ್ಧಾ ಭಕ್ತಿಯಿಂದ ವ್ಯಾಸಂಗ ಮಾಡಿ ಗುರಿಯನ್ನು ತಲುಪಿ ತಂದೆ-ತಾಯಿಗಳು ಹಾಗೂ ಗುರು ಹಿರಿಯರಿಗೆ ಕೀರ್ತಿ ತರಬೇಕು ಎಂದು ಸಲಹೆ ನೀಡಿದರು.

ಮುಖ್ಯಶಿಕ್ಷಕ ರಾಜು ಪೂಜಾರಿ ಮಾತನಾಡಿ, ವಿದ್ಯಾರ್ಥಿಗಳು ವಿನಯವಂತಿಕೆ ಹಾಗೂ ಶಿಸ್ತು ಸಂಯಮವನ್ನು ಮೈಗೂಡಿಸಿಕೊಂಡು ಸಮಾಜಕ್ಕೆ ಕೊಡುಗೆ ನೀಡುವ ಮೂಲಕ ಸರ್ವಶ್ರೇಷ್ಠ ಸಾಧನೆ ಮಾಡಬೇಕೆಂದರು. ನಿವೃತ್ತ ಪ್ರಾಚಾರ್ಯ ಡಾ.ಎಸ್ ಎಸ್ ಮೈನಾಳೆ ಮಾತನಾಡಿ ವಿದ್ಯಾರ್ಥಿ ಜೀವನ ಅತ್ಯಮೂಲ್ಯ. ವಿದ್ಯಾರ್ಥಿಯು ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನಹರಿಸಿ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಿಆರ್‌ಪಿ ಬಾಲಾಜಿ ಗವಳಿ, ಎಸ್‌ಡಿಎಮ್‌ಸಿ ಸದಸ್ಯ ವಿಲಾಸರಾವ ಖಿಂಡಿವಾಲೆ, ಗ್ರಾ.ಪಂ. ಸದಸ್ಯ ಬಾಬುರಾವ ಆಡೆ, ಪತ್ರಕರ್ತ ಭಾವುರಾವ ಹೆಡೆ, ರಾಜಶೇಖರ ಅಜ್ಜಾ, ಮುರ್ಕಿ ಕ್ಲಸ್ಟರ ಶಾಲೆಗಳ ಮುಖ್ಯಶಿಕ್ಷಕರಾದ ಮನೋಹರ ಪಾಂಚಾಳ, ಸಂದೇಶ ಘಾಗ-ರೆ, ವಿದ್ಯಾಲತಾ, ಶಿಕ್ಷಕರಾದ ಅಂಕುಶ ಖಿಂಡಿವಾಲೆ, ಪ್ರಕಾಶ ಎಡಗೆ, ನಿರ್ಮಲಾ, ಸಂಗೀತಾ, ರಶೀಕಾಬಾಯಿ, ಸುನೀತಾ, ಶೇಶಿಕಾಂತ, ಮಧುಕರ, ಸಂಜಯಕುಮಾರ, ರವಿಕಾಂತ, ಬಸ್ವಂತ. ಮಹೇಶ, ಚಂಪಾವತಿ, ಅರ್ಚನಾ ಠಾಕೂರ, ಅರ್ಚನಾ ಬಾರೋಳೆ ಹಾಗೂ ವಿದ್ಯಾರ್ಥಿಗಳು ಇದ್ದರು.

ಕು. ಭಕ್ತಿ ನಿರೂಪಿಸಿದರು. ಪ್ರಕಾಶ ಎಡವೆ ವಂದಿಸಿದರು.

## ಅಬಕಾರಿ ಅಧಿಕಾರಿಗಳಿಂದ 3ಲೀಟರ್ ಸೇಂದಿ ವಶ

ಮಲ್ಲಮ್ಮ ನುಡಿ ವಾರ್ತೆ

ಇಂಡಿ :ಮಾ.21:ಇಂಡಿ ವ್ಯಾಪ್ತಿಯ ಚಡಚಣ ತಾಲೂಕಿನ ವಿಜಯಪುರ ಸೋಲಾಪುರ ರಾಷ್ಟೀಯ ಹೆದ್ದಾರಿ 52 ರ ಭೀಮಾ ನದಿಯ ಬ್ರೀಜ್ ಪಕ್ಕದಲ್ಲಿ ಹೊಂಡಾ ಕಂಪನಿಯ ಶೈನ್ ದ್ವೀ ಚಕ್ರ ವಾಹನ ಸಂ-ಖ್ಯೆ ಕೆಎ-28 ಎ ಎಚ್‌ಬಿ-1002 ರ ಮೇಲೆ ಅಬಕಾರಿ ದಾಳಿ ಮಾಡಿ ಒಟ್ಟು-03 ಲೀಟರ್ ಸೇಂದಿಯನ್ನು ಜಪ್ತುಪಡಿಸಿಕೊಂಡಿದ್ದಾರೆ.

ಆರೋಪಿ ಶಿವಗೇನಿ ಮಲಕಾರಿ ಪೂಜಾರಿ ಸಾ-ಹಲಸಂಗಿ ತಾ-ಚಡಚಣ ಅವರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಮಾನ್ಯನ್ಯಾಯಾಲಯಕ್ಕೆ ಹಾಜರು ಪಡಿಸಿದ್ದಾರೆ. ರಾಹುಲ್ ಎಸ್ ನಾಯಕ ಅಬಕಾರಿ ನಿರೀಕ್ಷಕರು ಇಂಡಿ ವಲಯ ರವರ ನೇತೃತ್ವದಲ್ಲಿ ಶ್ರೀ ವಾದಿರಾಜ ಎನ್ ಆಶ್ರೀತ ಅಬಕಾರಿ ಉಪ ನಿರೀಕ್ಷಕರು-2 ಇಂಡಿ ವಲಯ ರವರು ಪ್ರಕರಣವನ್ನು ದಾಖಲಿಸಿಕೊಂಡರು. ಸಿಬ್ಬಂದಿಗಳಾದ, ಅಶೋಕ ಎಸ್ ಗೋಣಸಗಿ, ಶಿವಾನಂದ ಕೊಡತೆ, ಲಾಳೆಮಶ್ಯಾಕ ಮಸಳಿ, ಮಲ್ಲಪ್ಪ ಬಿರಾದಾರ, ದಾಳಿಯಲ್ಲಿ ಪಾಲ್ಗೊಂಡಿದರು. ಅಂತಾ ರಾಹುಲ್ ನಾಯಕ ಅಬಕಾರಿ ನಿರೀಕ್ಷಕರು ಇಂಡಿ ವಲಯ ರವರು ತಿಳಿಸಿರುತ್ತಾರೆ.

## ಸಂತೋಷ್ ನಾಟೇಕರ ಭಾಲ್ಕಿ ತಾಲೂಕು ಅಧ್ಯಕ್ಷರಾಗಿ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಭಾಲ್ಕಿ ತಾಲೂಕು ಅಧ್ಯಕ್ಷರಾಗಿ ಸಂತೋಷ್ ಎನ್. ನಾಟೇಕರ ಅವರನ್ನು ನೇಮಕ ಮಾಡಲಾಗಿದೆ. ಭಾಲ್ಕಿ ತಾಲೂಕಿನ ಪತ್ರಕರ್ತರನ್ನು ಸಂಘಟಿಸುವ ಜವಾಬ್ದಾರಿಯನ್ನು ಅವರ ಮೇಲೆ ವಹಿಸಲಾಗಿದೆ. ಪತ್ರಕರ್ತರ ಹಕ್ಕುಗಳನ್ನು ರಕ್ಷಿಸುವ ಮತ್ತು ಎದುರಾಗುವ ಸಮಸ್ಯೆಗಳಿಗೆ ಧ್ವನಿಯಾಗುವ ಉದ್ದೇಶದೊಂದಿಗೆ ಈ ನೇಮಕ ನಡೆದಿದೆ ಎಂದು ಸಂಘಟನೆಯ ರಾಜ್ಯಾಧ್ಯಕ್ಷರಾದ ಬಂಗ್ಲೆ ಮಲ್ಲಿಕಾರ್ಜುನ ಅವರು ಆದೇಶ ಪತ್ರದಲ್ಲಿ ಘೋಷಿಸಿದ್ದಾರೆ.

# ಇಂದು, ನಾಳೆ ಮಹಾದಂಡನಾಯಕರ ಸ್ಮರಣೋತ್ಸವ

## ಸಚಿವ ಡಾ. ಶರಣಪ್ರಕಾಶ ಪಾಟೀಲರಿಂದ ಉದ್ಘಾಟನೆ: ಶ್ರೀಕಾಂತ ಸ್ವಾಮಿ




ಮಲ್ಲಮ್ಮ ನುಡಿ ವಾರ್ತೆ
ಬೀದರ.ಮಾ. 21 : ಬಸವ ತತ್ವವನ್ನು ನಾಡಿನಾದ್ಯಂತ ಪಸರಿಸಿ,ಜನಮನಕ್ಕೆತಲುಪಿಸಿದ ವಿಶ್ವದ ಪ್ರಥಮ ಮಹಿಳಾ ಮಹಾಜಗದ್ಗುರು ಬಸವಾತ್ಮಜೆ ಮಾತೆಮಹಾದೇವಿಯವರ6ನೇ ಸಂಸ್ಮರಣೆಹಾಗೂಲಿಂಗಾನಂದ ಸ್ವಾಮಿಗಳ ಸ್ಮರಣೆ ಪ್ರಯುಕ್ತ ನಗರದಲ್ಲಿ ಆಯೋಜಿಸಿದ ಮಹಾದಂಡನಾಯಕರಸ್ಮರಣೋತ್ಸವ ಕಾರ್ಯಕ್ರಮವನ್ನುವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ಮಹಾದಂಡನಾಯಕರ ಸ್ಮರಣೋತ್ಸವದ ಸ್ವಾಗತ ಸಮಿತಿಕಾರ್ಯಾಧ್ಯಕ್ಷಶ್ರೀಕಾಂತ ಸ್ವಾಮಿ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ರಾಷ್ಟ್ರೀಯ ಬಸವ ದಳ, ಲಿಂಗಾಯತ ಧರ್ಮ ಮಹಾಸಭಾ, ಲಿಂಗಾಯತ ಸಮಾಜ ಮತ್ತುಕ್ರಾಂತಿಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣದ ಸಂಯುಕ್ತಾಶ್ರಯದಲ್ಲಿ ಮಾರ್ಚ್ 22 ಮತ್ತು 23 ರಂದು ಎರಡು ದಿವಸಗಳ ಕಾಲ ನಗರದ ಪಾಪನಾಶ ದೇವಸ್ಥಾನದ ಸಮೀಪವಿರುವ ಸ್ವಾಮಿಸಮರ್ಥಸಭಾಮಂಟಪದಲ್ಲಿ ಮಹಾದಂಡನಾಯಕರಸ್ಮರಣೋತ್ಸವ ಆಯೋಜಿಸಲಾಗಿದೆ.ಲಿಂಗಾಯತ ಧರ್ಮಕ್ಕೆಮಾತಾಜಿ ಕೊಡುಗೆ ಅಪಾರ. ದೇಶದಾದ್ಯಂತ ನೂರಾರು ಬಸವ ಧರ್ಮ ಸಮ್ಮೇಳನ, ಲಿಂಗಾಯತ ಧರ್ಮ ಸಮ್ಮೇಳನ, ಶರಣ ಮೇಳ, ಕಲ್ಯಾಣ ಪರ್ವ, ಗಣಮೇಳ, ಬಸವೋತ್ಸವ, ಶರಣೋತ್ಸವ ಆಯೋಜಿಸಿ ಗೌಣವಾಗಿದ್ದ ಬಸವಾದಿ ಶರಣರ ಸಂದೇಶಗಳನ್ನು ಜನಸಾಮಾನ್ಯರಲ್ಲಿ ಬಿತ್ತಿ ಬೆಳಗಿದ್ದಾರೆ ಎಂದರು. ರಾಷ್ಟ್ರೀಯ ಬಸವ ದಳದ ಕೇಂದ್ರ ಸಮಿತಿ ಅಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿಯವರ ದಿವ್ಯ ನೇತೃತ್ವದಲ್ಲಿ ನಡೆಯಲಿದ್ದು, ಮಾರ್ಚ್ 22 ರಂದು ಬೆ. 10–30ಕ್ಕೆ ಉದ್ಘಾಟನಾ ಸಮಾರಂಭ ಜರುಗಲಿದೆ. ಸಾನಿಧ್ಯವನ್ನು ಹುಲಸೂರಿನ ಪೂಜ್ಯಶ್ರೀ ಡಾ. ಶಿವಾನಂದ ಮಹಾಸ್ವಾಮಿಗಳು, ಬಸವಕಲ್ಯಾಣದಪೂಜ್ಯಸಿದ್ಧರಾಮ ಬೆಲ್ದಾಳ ಶರಣರು, ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯಜ್ಯೋತಿರ್ಮಯಾನಂದ ಸ್ವಾಮೀಜಿ,ಪೂಜ್ಯಓಂಕಾರೇಶ್ವರ ಸ್ವಾಮೀಜಿ ವಹಿಸಲಿದ್ದು, ಸಮ್ಮುಖವನ್ನುಬಸವಮಂಟಪದ ಪೂಜ್ಯ ಮಾತೆ ಸತ್ಯಾದೇವಿ ವಹಿಸಲಿದ್ದಾರೆ. ವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಉದ್ಘಾಟಿಸಲಿದ್ದಾರೆ. ಧ್ವಜಾರೋಹಣವನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪೌರಾಡಳಿತ ಮತ್ತು ಹಜ್ ಸಚಿವ ರಹಿಂಖಾನ್, ಸಂಸದ ಸಾಗರ ಖಂಡ್ರೆ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನುಸ್ವಾಗತ ಸಮಿತಿ ಅಧ್ಯಕ್ಷರು ಹಾಗೂ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ವಹಿಸಲಿದ್ದಾರೆ. ಅತಿಥಿಗಳಾಗಿ ಜಿಲ್ಲೆಯ ಎಲ್ಲಾ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಆಗಮಿಸಲಿದ್ದಾರೆ. ಗುರುಬಸವ ಪೂಜೆಯನ್ನು ದಾಸೋಹ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಜೈಲರ್ ಮಾಡಲಿದ್ದಾರೆ. ಪ್ರಮುಖ ಉಪಸ್ಥಿತಿಯನ್ನು ವಿವಿಧ ರಾಜ್ಯಗಳ ಹಾಗೂ ಜಿಲ್ಲೆಗಳ ಪ್ರಮುಖರು ವಹಿಸಲಿದ್ದಾರೆ.

ಮಾರ್ಚ್ 22 ರಂದು ಸಾ. 4ಗಂಟೆಗೆ ಅನುಭಾವಗೋಷ್ಠಿ–1 ನಡೆಯಲಿದೆ. ಉದ್ಘಾಟನೆಯನ್ನು ಚಿಕ್ಕಮಗಳೂರಿನ ಪೂಜ್ಯ ಶ್ರೀ ಜಯಬಸವಾನಂದ ಸ್ವಾಮೀಜಿ ಮಾಡಲಿದ್ದಾರೆ. ಸಮ್ಮುಖವನ್ನು ಧುಮ್ಮನಸೂರಿನ ಮುಕ್ತಿನಾಥ ಮಠದ ಶಂಕರಲಿಂಗಸ್ವಾಮಿಗಳು, ಉದಗೀರದ ಹಾವಗಿಸ್ವಾಮಿ ಮಠದ ಪೂಜ್ಯ ಶಂಭುಲಿಂಗೇಶ್ವರ ಸ್ವಾಮೀಜಿ, ಹಿರನಾಗಾಂವ ಮಠದ ಪೂಜ್ಯ ಜಯೇಂದ್ರ ಸ್ವಾಮಿಗಳು, ಬೆಳಗಾವಿಯ ಪೂಜ್ಯ ಅಕ್ಕನಾಗಲಾಂಬಿಕಾ ಮಾತಾಜಿ ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಬೆಂಗಳೂರಿನ ನಿ. ಪ್ರಾಧ್ಯಾಪಕ ಹಾಗೂ ಚಿಂತಕ ಶ್ರೀಶೈಲ ಮಸೂತೆ ವಹಿಸಲಿದ್ದಾರೆ. ಉಪನ್ಯಾಸವನ್ನು ಶಹಾಪುರದ ಬಸವ ತತ್ವ ಚಿಂತಕ ವಿಶ್ವಾರಾಧ್ಯ ಸತ್ಯಂಪೇಟೆ, ಶಿರಗುಪ್ಪದ ಚಿಂತಕ ಬಸವರಾಜಪ್ಪ ವೆಂಕಟಾಪುರ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ನಿ.ಕೆಎಎಸ್ ಅಧಿಕಾರಿ ಎಸ್.ದಿವಾಕರ್, ಮಾಜಿ ಶಾಸಕ ಮಲ್ಲಿಕಾರ್ಜುನ ಖೂಬಾ, ಡಾ. ಗುರಮ್ಮಾ ಸಿದ್ದಾರೆಡ್ಡಿ, ಶಕುಂತಲಾ ಬೆಲ್ದಾಳೆ ಸೇರಿದಂತೆ ಜಿಲ್ಲೆಯ ಪ್ರಮುಖರು ಆಗಮಿಸಲಿದ್ದಾರೆ. ಗುರುಬಸವ ಪೂಜೆಯನ್ನು ಹಾವಶೆಟ್ಟಿ ಪಾಟೀಲ ಮಾಡಲಿದ್ದಾರೆ ಎಂದರು. ಮಾರ್ಚ್ 23 ರಂದು ಬೆ. 9ಗಂಟೆಗೆ ನಗರದ ಬಸವೇಶ್ವರ ವೃತ್ತದಿಂದ ವಚನ ಸಾಹಿತ್ಯದ ಹಾಗೂ ಮಹಾದಂಡನಾಯಕರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ. ಮೆರವಣಿಗೆಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಚಾಲನೆ ನೀಡಲಿದ್ದು, ಧ್ವಜಾರೋಹಣ ಹಿರಿಯ ಶರಣ ಕಾಶಿನಾಥ ಪಾಟೀಲ ಮಾಡಲಿದ್ದಾರೆ. ಉಪಸ್ಥಿತಿಯನ್ನು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ ವಹಿಸಲಿದ್ದಾರೆ. ಗುರುಬಸವ ಪೂಜೆಯನ್ನು ಡಾ. ಸುರೇಶ ಪಾಟೀಲ ಮಾಡಲಿದ್ದಾರೆ ಎಂದು ಹೇಳಿದರು. ಮಾರ್ಚ್ 23 ರಂದು ಮ. 12 ಗಂಟೆಗೆ ಅನುಭಾವಗೋಷ್ಠಿ–2 ನಡೆಯಲಿದೆ. ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಮಿತಿಯ ಗೌರವಾಧ್ಯಕ್ಷ ಈಶ್ವರ ಬಿ ಖಂಡ್ರೆ ಮಾಡಲಿದ್ದಾರೆ. ಧ್ವಜಾರೋಹಣ ಮಾಜಿ ಬುಡಾ ಅಧ್ಯಕ್ಷ ಬಾಬು ವಾಲಿ ಮಾಡಲಿದ್ದು, ಅಧ್ಯಕ್ಷತೆ ಚಿತ್ರದುರ್ಗದ ತಾರಕನಾಥ ವಹಿಸಲಿದ್ದಾರೆ. ದಿವ್ಯಸಮ್ಮುಖವನ್ನು ಕೂಡಲ ಸಂಗಮದ ಶ್ರೀ ಲಿಂಗಾರೂಢರು, ಚಳ್ಳಕೆರೆಯ ಗುರುಸ್ವಾಮಿಗಳು ವಹಿಸಲಿದ್ದಾರೆ ಎಂದು ಶ್ರೀಕಾಂತ ಸ್ವಾಮಿ ತಿಳಿಸಿದರು. ಬೆಂಗಳೂರಿನ ಬಸವ ಗಂಗೋತ್ರಿಯ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ಮಾತನಾಡಿ ಲಿಂಗಾಯತ ಧರ್ಮಕ್ಕೆ ಒಂದು ಹೊಸ ಚೌಕಟ್ಟನ್ನು ಹಾಕಿಕೊಟ್ಟವರು ಮಾತಾಜಿ. ಸ್ವತಂತ್ರ ಧರ್ಮದ ಮಾನ್ಯತೆಗಾಗಿ ಹಗಲಿರುಳು ಶ್ರಮಿಸಿದ್ದು ಅವರ ಹಿರಿಮೆ ಗರಿಮೆಗೆ ಸಾಕ್ಷಿಯಾಗಿದೆ. ಹೀಗಾಗಿ ಅವರ ಹೆಸರಿನ ಮೇಲೆ ಬಸವಾತ್ಮಜೆ ಪ್ರಶಸ್ತಿಯನ್ನು ಧಾರವಾಡದ ಸುಜಾತಾ ಬಸವರಾಜ ಯರಗಟ್ಟಿ ಅವರಿಗೆ ನೀಡಲಾಗುತ್ತಿದೆ. ಲಿಂಗಾನಂದ ಶ್ರೀ ಪ್ರಶಸ್ತಿಯನ್ನು ಖವಟಕೊಪ್ಪದ ಹಿರಿಯ ಶರಣ ಅಶೋಕ ನಾವಿ ಅವರಿಗೆ ಪ್ರದಾನ ಮಾಡಲಾಗುತ್ತಿದೆ. ಈ ಕಾರ್ಯಕ್ರಮದಲ್ಲಿ ಮಹಾರಾಷ್ಟ್ರ, ತೆಲಂಗಾಣ ಆಂಧ್ರಪ್ರದೇಶ ಹಾಗೂ ಕರ್ನಾಟಕದ ಹಲವು ಜಿಲ್ಲೆಗಳಿಂದ ಸಾವಿರಾರು ಶರಣರು ಭಾಗವಹಿಸಲಿದ್ದಾರೆ. ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಪ್ರಾರ್ಥಿಸಿದರು. ಬಸವ ಮಂಟಪದ ಪೂಜ್ಯ ಶ್ರೀ ಸದ್ಗುರು ಸತ್ಯಾದೇವಿ ಮಾತಾಜಿ ಮಾತನಾಡಿ ಹಿರಿಯ ಪತ್ರಕರ್ತರಾದ ಖಾದ್ರಿ ಶಾಮಣ್ಣ ಪ್ರಶಸ್ತಿ ಪುರಸ್ಕೃತರಾದ ಅಪ್ಪಾರಾವ ಸೌದಿ, ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿಪುರಸ್ಕೃತರಾದ ಶಶಿಕಾಂತ ಶೆಂಬೆಳ್ಳಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಡಿಕೆ ಗಣಪತಿ ಅವರನ್ನು ಸನ್ಮಾನಿಸಲಾಗುತ್ತಿದೆ. ನೃತ್ಯಾಂಗನೆ ತಂಡದ ಪೂರ್ಣಚಂದ್ರ ಮೈನಾಳೆ ಹಾಗೂ ಕೀರ್ತಿ ಘೂಳೆ, ವಾಣಿಶ್ರೀ ಮತ್ತು ವಚನ ಜ್ಯೋತಿ ಕಟಾಳೆ, ಸಮೃದ್ಧಿ ಲಾಧಾ ಅವರಿಂದ ವಚನ ನೃತ್ಯ, ಮಂಡ್ಯದ ಶಿವು ಜನ್ಯ ಅವರಿಂದ ವಚನ ಗಾಯನ, ಕಲ್ಯಾಣರಾವ ಬಂಬುಳಗಿ ಅವರಿಂದ ವಚನ ಭಜನೆ ಜರುಗಲಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಅಕ್ಕನಾಗಲಾಂಬಿಕಾ ಮಾತಾಜಿ ಬೆಳಗಾವಿ, ಅಕ್ಕಮಹಾದೇವಿ ಮಾತಾಜಿ, ಓಂಕಾರೇಶ್ವರ ಸ್ವಾಮೀಜಿ, ಶಿವರಾಜ ಪಾಟೀಲ ಅತಿವಾಳ, ಶಿವಶರಣಪ್ಪ ಪಾಟೀಲ, ಮಲ್ಲಿಕಾರ್ಜುನ ಶಾಪುರ, ವಿಶ್ವನಾಥ ಪಾಟೀಲ, ಶಿವು ಜನ್ಯ, ಮಲ್ಲಿಕಾರ್ಜುನ ಬುಕ್ಕಾ, ರವಿಕಾಂತ ಬಿರಾದಾರ, ಬಸವರಾಜ ಸಂಗಮದ, ಬಸವಂತರಾವ ಬಿರಾದಾರ ಉಪಸ್ಥಿತರಿದ್ದರು.

## ಮಾ. 25ಕ್ಕೆ ಪಶು ವಿಶ್ವವಿದ್ಯಾಲಯದ 14ನೇ ಘಟಿಕೋತ್ಸವ





ಮಲ್ಲಮ್ಮ ನುಡಿ ವಾರ್ತೆ
ಬೀದರ. ಮಾ. 21 : ನಗರದ ಹೊರವಲಯದ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಮಾ.25ರಂದು ವಿಶ್ವವಿದ್ಯಾಲಯದ 14ನೇ ಘಟಿಕೋತ್ಸವ ಆಯೋಜಿಸಲಾಗಿದೆ.

ರಾಜ್ಯಪಾಲರು ಹಾಗೂ ವಿವಿ ಕುಲಾಧಿಪತಿಗಳಾದ ಥಾವರ್ ಚಂದ್ ಗೆಹ್ಲೋಟ್ ಅವರು ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ, ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಿದ್ದಾರೆ.

ಪುಣೆ ಐಸಿಎಂಆರ್–ರಾಷ್ಟ್ರೀಯ ವೈರಾಲಜಿ ಸಂಸ್ಥೆಯ ನಿರ್ದೇಶಕ ಡಾ. ನವೀನಕುಮಾರ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಪಶು ಸಂಗೋಪನೆ ಸಚಿವರಾದ ಸಹ ಕುಲಾಧಿಪತಿ ಕೆ. ವೆಂಕಟೇಶ್ ಅವರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ವಿವಿ ಕುಲಪತಿ ಡಾ. ಕೆ.ಸಿ ವೀರಣ್ಣ ಮಾಹಿತಿ ನೀಡಿದರು.

ಘಟಿಕೋತ್ಸವದಲ್ಲಿ ಒಟ್ಟು 634 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುತ್ತಿದ್ದು, ಇದರಲ್ಲಿ 417 ಸ್ನಾತಕ ಪದವೀಧರರು, 187 ಸ್ನಾತಕೋತ್ತರ ಹಾಗೂ 28 ಡಾಕ್ಟರೇಟ್ ಪದವಿಧರರು ಸೇರಿದ್ದಾರೆ. ಘಟಿಕೋತ್ಸವದ ದಿನದಂದು 127 ಪದವೀಧರರು ಉಪಸ್ಥರಾಗಿ ಪದವಿ ಸ್ವೀಕರಿಸಲಿದ್ದಾರೆ. ಜತೆಗೆ ಒಟ್ಟು 46 ಪ್ರತಿಭಾನ್ವಿತ ಸ್ನಾತಕ, ಸ್ನಾತಕೋತ್ತರ ಮತ್ತು ಡಾಕ್ಟರೇಟ್ ಪದವಿಧರರಿಗೆ ಚಿನ್ನದ ಪದಕಗಳನ್ನು ನೀಡಿ ಗೌರವಿಸಲಾಗುವುದು. ಅದರಲ್ಲಿ 35 ವಿವಿ ಪದಕಗಳು ಮತ್ತು 61 ಪ್ರಾಯೋಜಿತ ಚಿನ್ನದ ಪದಕಗಳಾಗಿವೆ ಎಂದು ವಿವರಿಸಿದರು. ಸ್ನಾತಕ ಪದವಿ (16 ವಿದ್ಯಾರ್ಥಿ–53 ಪದಕ): ಬಿವಿಎಸ್‌ಸಿ–ಎಎಚ್‌ನಲ್ಲಿ ಬೆಂಗಳೂರಿನ ಪಶುವೈದ್ಯಕೀಯ ಮಹಾವಿದ್ಯಾಲಯದ ರವೀನಾ ಕೆ.ಎಸ್ ಅವರು 15 ಹಾಗೂ ಆದಿತ್ಯಾ ಚಿದಾನಂದ 9 ಚಿನ್ನದ ಪದಕಗಳನ್ನು ಸ್ವೀಕರಿಸಲಿದ್ದಾರೆ. ಬೀದರ ಪಶುಮಹಾವಿದ್ಯಾಲಯದ ಭಾಗ್ಯಶ್ರೀ ಮತ್ತು ಶಿವಮೊಗ್ಗ ಪಶು ಮಹಾವಿದ್ಯಾಲಯದ ವಿಶ್ವಾಸ ತಲಾ 4, ಹಾಸನ ಪಶು ಮಹಾವಿದ್ಯಾಲಯದ ಶ್ರೇಯಸ್ ಹಾಗೂ ಗದಗ ಪಶು ಮಹಾವಿದ್ಯಾಲಯದ ಚಾಂದನಿ ಎನ್ ಅವರು ತಲಾ 2 ಪದಕಗಳನ್ನು ಪಡೆಯಲಿದ್ದಾರೆ ಎಂದು ತಿಳಿಸಿದರು. ಬಿ.ಟೆಕ್ (ಹೈನು ತಂತ್ರಜ್ಞಾನ)ನಲ್ಲಿ ಬೆಂಗಳೂರು ಹೈನು ವಿಜ್ಞಾನ ಮಹಾವಿದ್ಯಾಲಯದ ವೈದೇಹಿ ಬಿ.ಟಿ 4, ಕಲಬುರಗಿ ಹೈನು ಮಹಾವಿದ್ಯಾಲಯದ ವರ್ಷಾ ಎ.ಎಂ 3 ಚಿನ್ನದ ಪದಕಗಳು, ಬಿಎಫ್‌ಎಸ್‌ಸಿಯಲ್ಲಿ ಮಂಗಳೂರಿನ ಮೀನುಗಾರಿಕಾ ಮಹಾವಿದ್ಯಾಲಯದ ಸುಹಾಸ್ ಎಂ. ಅವರು 3 ಚಿನ್ನದ ಪದಕಗಳನ್ನು ಸ್ವೀಕರಿಸಲಿದ್ದಾರೆ ಎಂದು ಹೇಳಿದರು. ಸ್ನಾತಕೋತ್ತರ ಪದವಿ (21 ವಿದ್ಯಾರ್ಥಿ– 34 ಪದಕ): ಎಂವ್ಹಿಎಸ್‌ಸಿಯಲ್ಲಿ ಬೆಂಗಳೂರು ಪಶು ಮಹಾವಿದ್ಯಾಲಯದ ದಕ್ಷೀತ್ ಪಿಎಲ್ 6, ಅನುಶ್ರೀ ಎನ್‌ಆರ್ 3, ನೇಹಾ ಬಣಕಾರ, ಅನುಶಾ ಎಂಎನ್ ಮತ್ತು ಕಾವೇರಿ ಎನ್.ಈ ತಲಾ 2 ಚಿನ್ನದ ಪದಕಕ್ಕೆ ಭಾಜನರಾಗಿದ್ದಾರೆ. ಪಶು ವೈದ್ಯಕೀಯ ಮಹಾವಿದ್ಯಾಲಯ ಬೀದರನ ಮೋನಿಕಾ ಎಂ. 3, ಎಂ.ಟೆಕ್ (ಹೈನು ವಿಜ್ಞಾನ)ನಲ್ಲಿ ಬೆಂಗಳೂರಿನ ಹೈನು ವಿಜ್ಞಾನ ಮಹಾವಿದ್ಯಾಲಯದ ಜಯಶ್ರೀ ಹೆಚ್., ಐಶ್ವರ್ಯಾ ತಲಾ 1, ಎಂಎಫ್‌ಎಸ್‌ಸಿಯಲ್ಲಿ ಮಂಗಳೂರಿನ ಮೀನುಗಾರಿಕಾ ಮಹಾವಿದ್ಯಾಲಯದ ಅಂಕಿತ ಕಾರ್, ಶೃತಿ ಹೆಚ್.ಯು ತಲಾ 1 ಮತ್ತು ಅನನ್ಯ ಟಿ. 2 ಪದಕ ಪಡೆಯಲಿದ್ದಾರೆ ಎಂದರು. ಡಾಕ್ಟರೇಟ್ ಪದವಿ (7 ವಿದ್ಯಾರ್ಥಿ–7 ಪದಕ): ಬೆಂಗಳೂರು ಪಶು ವೈದ್ಯಕೀಯ ಮಹಾವಿದ್ಯಾಲಯದ ಕೃತಿಕಾ ಎನ್, ಸೆಲ್ವಿ ಡಿ., ರಶ್ಮಿ ಕೆ.ಎಂ ಮತ್ತು ಸ್ವರೂಪ್ ಜಿ.ಎಲ್ ತಲಾ ಒಂದು ಪದಕ, ಮಂಗಳೂರು ಮೀನುಗಾರಿಕಾ ಮಹಾವಿದ್ಯಾಲಯದ ದಗ್ಗುಲ್ ನರಶಿವುಡು, ಅಜ್ಮಲ್ ಹುಸೇನ್ ಹಾಗೂ ಕುಶಾಲ ಕೆ.ಬಿ ತಲಾ ಒಂದು ಪದಕ ಪಡೆಯಲಿದ್ದಾರೆ ಎಂದು ಹೇಳಿದರು.

## ರೈತರ ಹೆಸರಿನಲ್ಲಿ ಹಣ ಲೂಟಿ ಮಾಡುತ್ತಿರುವ ಅಧಿಕಾರಿಗಳ ವಿರುದ್ದ ತನಿಖೆಗೆ ಆಗ್ರಹಿಸಿ ಮನವಿ



ಮಲ್ಲಮ್ಮ ನುಡಿ ವಾರ್ತೆ
ಬೀದರ. ಮಾ. 21 : ಔರಾದ ತಾಲೂಕಾದ್ಯಂತ ಚಿಂತಾಕಿ, ಸಂತಪೂರ, ವಡಗಾಂವ ಹೋಬಳಿ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿ ಕ್ಷೇತ್ರ ಬದ್ದು ರೈತರ ಹೊಲದಗಡಿರೇಖೆ ಮಣ್ಣಿನಿಂದ ನಿರ್ಮಿಸಿದ್ದು, ಅವಶ್ಯಕತೆಗೂ ಮೀರಿ ಯಂತ್ರ ಬಳಸಿ ಕೋಟ್ಯಾಂತರ ರೂಪಾಯಿಗಳ ನಕಲಿ ಬಿಲ್ಲು ಲೂಟಿ ಮಾಡಿರುತ್ತಾರೆ. ಈ ವ್ಯವಸ್ಥೆಯು ಜಲಾನಯನ ಪ್ರದೇಶದಲ್ಲಿನ ಮಾನವ ಸಂಪನ್ಮೂಲ ಮತ್ತು ಪರಿಸರದ ಒಟ್ಟಾರೆ ಅಭಿವೃದ್ಧಿಯು ಸರಕಾರದ ಉದ್ದೇಶವಾಗಿರುತ್ತದೆ. ಆದರೆ ಔರಾದ ತಾಲೂಕಾ ಸಹಾಯಕ ಕೃಷಿ ನಿರ್ದೇಶಕರು ರೈತರಿಗೆ ಉಪಯೋಗವಾಗುವಂತ ಕೆಲಸ ಕಿ.ಮೀ. ಲೆಕ್ಕದಲ್ಲಿ ಹಣ ಬಿಲ್ಲು ಪಡೆಯುವಗೋಸ್ಕರ ರೈತರ ಭೂಮಿಯಲ್ಲಿ ಮನಬಂದಂತೆ ಅಗೆದು ಭೂಮಿ ಉಪಯೋಗಕ್ಕೆ ಬಾರದಂತೆ ಭೂಮಿ ಹಾಳು ಮಾಡಿರುತ್ತಾರೆ.

ಕೌಠಾ (ಬಿ) ಗ್ರಾಮ ಪಂಚಾಯತ, ದುಪತ್ತಮಹಾಗಾಂವ ಗ್ರಾಮ ಪಂಚಾಯತ ವಿವಿಧ ಅಪೂರ್ಣ ಕೃಷಿಹೊಂಡ, ಕ್ಷೇತ್ರ ಬದ್ದು, ಕಂದಕ, ಗುಂಡಿ ಬದ್ದು, ಸಮಪಾತಳಿ ಪಟ್ಟಿ, ಗುಂಡುಕಲ್ಲು ಬದ್ದುಗಳ, ನೀರು ದಾರಿ ಹಲವಾರು ಚಟುವಟಿಕೆಗಳು ರೈತರ ಹೊಲದಲ್ಲಿ ಸಂಪೂರ್ಣ ಕಾಮಗಾರಿಗಳು ಕಳಪೆಯಾಗಿರುತ್ತವೆ. ಕೂಡಲೇ ಔರಾದ ತಾಲೂಕಿನಲ್ಲಿ ರಿವಾರ್ಡ ಯೋಜನೆಗೆ ಸಂಬಂಧಪಟ್ಟ ಕಾಮಗಾರಿಗಳು ಗ್ರಾಮವಾರು ತಾಲೂಕಿನಾದ್ಯಂತ ತನಿಖೆ ಮಾಡಬೇಕು. ಇನ್ನು ಮುಂದೆ ಹಿಂದಿನ ಕಾಮಗಾರಿಗಳು ತನಿಖೆಯಾಗುವರೆಗೆ ಸಹಾಯಕ ನಿರ್ದೇಶಕರಾದ ಧುಳಪ್ಪಾ ರವರಿಗೆ ಇಲ್ಲಿಂದ ವರ್ಗಾವಣೆ ಮಾಡಬಾರದು. ದೂರು ನೀಡಿದ ನಂತರ ಕಾಮಗಾರಿಗೆ ಸಂಬಂಧಪಟ್ಟಂತೆ ಯಾವುದೇ ಬಿಲ್ಲು ಮಂಜೂರಾಗದಂತೆ ತಡೆಹಿಡಿಯಬೇಕು. ಈ ಕುರಿತು ಕೂಡಲೇ ಕ್ರಮ ಜರುಗಿಸದಿದ್ದ ಪಕ್ಷದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ, ಜಿಲ್ಲಾ ಸಮಿತಿ ವತಿಯಿಂದ ಮೋಸ ಹೋಗಿರುವ ರೈತರು ಸೇರಿಕೊಂಡು ಸಹಾಯಕ ಕೃಷಿ ನಿರ್ದೇಶಕರ ವಿರುದ್ಧ ಕ್ರಮ ಜರುಗಿಸುವಂತೆ ಒತ್ತಾಯಿಸಿ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಮುತ್ತಿಗೆ ಹಾಕಿ ಹಂತ–ಹಂತವಾಗಿ ಹೋರಾಟ ಮಾಡಲಾಗುವುದೆಂದು ಇಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕಲಬುರಗಿ ವಿಭಾಗೀಯ ಸಂಚಾಲಕರಾದ ಉಮೇಶಕುಮಾರ ಸ್ವಾರಳ್ಳಿಕರ್, ಜಿಲ್ಲಾ ಸಂಚಾಲಕರಾದ ಬಾಬುರಾವ ಕೌಠಾ, ಜಿಲ್ಲಾ ಸಂ. ಸಂಚಾಲಕರಾದ ಅಶೋಕ ಸಂಗಮ, ಜಿಲ್ಲಾ ಖಜಾಂಚಿಗಳಾದ ದೇವರಾಜ ಡಾಕುಳಗಿ ಅವರು ಉಪಸ್ಥಿತರಿದ್ದರು.

## ನಾಳೆ ಮಹಾತ್ಮ ಬೊಮ್ಮಗೊಂಡೇಶ್ವರ ಉತ್ಸವ

### ಎಚ್.ಎಂ.ರೇವಣ್ಣ ಅವರಿಂದ ಉದ್ಘಾಟನೆ: ಸಂತೋಷ ಜೋಳದಾಪಕೆ



ಮಲ್ಲಮ್ಮನುಡಿವಾರ್ತೆ ಬೀದರ. ಮಾ. 21 : ನಾಳೆ(ಮಾರ್ಚ್ 23 ರಂದು) ಮ. 12–30ಕ್ಕೆ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ವತಿಯಿಂದ ದ್ವಿತೀಯ ಮಹಾತ್ಮ ಬೊಮ್ಮಗೊಂಡೇಶ್ವರ ಉತ್ಸವ ಜರುಗಲಿದ್ದು, ಈ ಕಾರ್ಯಕ್ರಮವನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ರಾಜ್ಯಾಧ್ಯಕ್ಷ ಎಚ್.ಎಂ.ರೇವಣ್ಣ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಗೊಂಡ ವಿದ್ಯಾರ್ಥಿ ಸಂಘದ ಜಿಲ್ಲಾಧ್ಯಕ್ಷ ಸಂತೋಷ ಜೋಳದಾಪಕೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾದ ಕರೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ದಿವ್ಯ ಸಾನಿಧ್ಯವನ್ನು ದೇವದುರ್ಗದ ಕಾಗಿನೆಲೆ ಕನಕ ಗುರುಪೀಠದ ಶ್ರೀ ಸಿದ್ಧರಾಮನಂದಪುರಿ ಮಹಾಸ್ವಾಮೀಜಿ ವಹಿಸಲಿದ್ದಾರೆ. ಸಮ್ಮುಖವನ್ನು ಭಾಲ್ಕಿಯ ಪೂಜ್ಯ ಗುರುಬಸವ ಪಟ್ಟದ್ದೇವರು, ಸಿದ್ಧಯ್ಯ ಆಧುನಿಕ ಒಡೆಯರು, ಪೂಜ್ಯ ಭಂತೆ ಸಂಘ ರಖ್ಖೀತ್ ಆಣದೂರ, ಮೌಲಾನಾ ಮಹ್ಮದ್ ಕಿರಮಾನಿ, ನೆಲ್ಸನ್ ಸುಮಿತ್ರಾ, ಬಾಬುರಾವ ಮುತ್ಯಾ, ಬಾಲತಪಸ್ವಿ ಗೋಪಾಲ ಮುತ್ಯಾ ವಹಿಸಲಿದ್ದಾರೆ ಎಂದು ತಿಳಿಸಿದರು. ವಿಶೇಷ ಆಹ್ವಾನಿತರಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಆಗಮಿಸಲಿದ್ದು, ಚಿತ್ರಕಲಾ ಪ್ರದರ್ಶನವನ್ನು ಪೌರಾಡಳಿತ ಸಚಿವ ರಹಿಂಖಾನ್ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಂಸದ ಸಾಗರ ಖಂಡ್ರೆ, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಮಾಜಿ ಸಭಾಪತಿಗಳಾದ ರಘುನಾಥ ಮಲ್ಕಾಪುರೆ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡೆ, ಮುರಳಿಧರ ಎಕಲಾರಕರ್ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಸಂತೋಷ ಜೋಳದಾಪಕೆ ವಹಿಸಲಿದ್ದಾರೆ. ವಿಶೇಷ ಉಪನ್ಯಾಸವನ್ನು ವಿಜಯನಗರ ವಿಶ್ವವಿದ್ಯಾಲಯದ ನಿವೃತ್ತ ಕುಲಪತಿ ಡಾ.ಕೆ.ಎಂ.ಮೈತ್ರಿ ನೀಡಲಿದ್ದಾರೆ. ಅತಿಥಿಗಳಾಗಿ ಜಿಲ್ಲೆಯ ಹಿರಿಯ ಮುಖಂಡರು, ಸಮಾಜ ಸೇವಕರು, ವಿವಿಧ ಸಂಘ–ಸಂಸ್ಥೆಗಳ ಪ್ರಮುಖರು ಆಗಮಿಸಲಿದ್ದಾರೆ ಎಂದು ಹೇಳಿದರು. ಮಾರ್ಚ್ 23 ರಂದು ಸಾ. 4ಗಂಟೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಉದ್ಘಾಟನೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸುರೇಶ ಚನಶೆಟ್ಟಿ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಸಂತೋಷ ಜೋಳದಾಪಕೆ ವಹಿಸಲಿದ್ದು, ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ, ಡಾ.ಸಂಜೀವಕುಮಾರ ಅತಿವಾಳೆ, ಶಂಭುಲಿಂಗ ವಾಲದೊಡ್ಡಿ, ಡಾ. ರಾಜಕುಮಾರ ಹೆಬ್ಬಾಳೆ ಸೇರಿದಂತೆ ವಿವಿಧ ಮುಖಂಡರು ಆಗಮಿಸಲಿದ್ದಾರೆ. ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಜರುಗಲಿದ್ದು, ಅಂದು ಬೆ. 9 ಗಂಟೆಗೆ ಮಹಾತ್ಮ ಬೊಮ್ಮಗೊಂಡೇಶ್ವರ ಭಾವಚಿತ್ರದ ಮೆರವಣಿಗೆ ಜರುಗಲಿದೆ. ಜಿಲ್ಲೆಯ ಅನೇಕ ಕಲಾತಂಡಗಳು ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿವೆ. ಇದೇ ವೇಳೆ ರಾಜ್ಯ ಸರ್ಕಾರಿ ನೌಕರರಿಗೆ ಸನ್ಮಾನ ಜರುಗಲಿದೆ. ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕೋರಿದರು.

ಕಲ್ಲಪ್ಪ ಬೆನಕನಹಳ್ಳಿ, ತುಕಾರಾಮ ಚಿಮಕೋಡ, ಮಲ್ಲಿಕಾರ್ಜುನ ಮುರ್ಕೆ, ವೈಜಿನಾಥ ಎಂ.ಪಿ., ವಿಜಯಕುಮಾರ್ ಬ್ಯಾಲಳ್ಳೆ, ಸಿದ್ದು ಬಾವಗೆ, ಲಕ್ಷ್ಮಣ ಉಪ್ಪೆ ಸೇರಿದಂತೆ ಹಲವರು ಸುದ್ದಿಗೋಷ್ಠಿಯಲ್ಲಿ ಹಾಜರಿದ್ದರು.

## ಪಂಚಗವ್ಯ ಉಚಿತ ತಪಾಸಣಾ ಶಿಬಿರ ಇಂದು

ಬೀದರ. ಮಾ. 21 : ಉತ್ತರ ಕರ್ನಾಟಕ ಪ್ರಾಂತ ಗೋ ಸೇವಾ ಗತಿ ವಿಧಿ ಹಾಗೂ ನಾಗೋರಾದ ಕಾಮಧೇನು ಗೋಶಾಲೆ ವತಿಯಿಂದ ನಗರದ ಸಾಯಿ ಪುಷ್ಪಾಂಜಲಿ ಕಲ್ಯಾಣ ಮಂಟಪದ ಹತ್ತಿರ ಶನಿವಾರ (ಮಾ.22) ಸಂಜೆ 4 ರಿಂದ 6 ರ ವರೆಗೆ ಪಂಚಗವ್ಯ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಡಾ. ಡಿ.ಪಿ. ರಮೇಶ, ಡಾ. ಅಶ್ವಿನಕುಮಾರ ವಾಘಮಾರೆ ಹಾಗೂ ಆಕ್ಯುಪ್ರೇಶರ್ ಪರಿಣಿತ ಶ್ರೀಕಾಂತ ಮೋದಿ ಅವರು ತಪಾಸಣೆ ಮಾಡಲಿದ್ದಾರೆ.

ಹೆಸರು ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 7411993300 (ಶಿವಕುಮಾರ ಹಿರೇಮಠ) ಅಥವಾ 9449829468 (ಸಿ.ಬಿ. ರೆಡ್ಡಿ) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಸ್ವಸಹಾಯ ಸಂಘಗಳಿಂದ ಸರ್ಕಾರಿ ಶಾಲೆಗಳಿಗೆ ಕೋಳಿ ಮೊಟ್ಟೆ ಪೂರೈಕೆ ಕಾರ್ಯ ರಾಜ್ಯಕ್ಕೆ ಅನ್ವಯ : ಸಿಇಓ ರಾಹುಲ್ ರತ್ನಂ ಪಾಂಡೇಯ



ಮಲ್ಲಮ್ಮನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯ ಸ್ವಸಹಾಯ ಸಂಘಗಳಿಂದ ಸರ್ಕಾರಿ ಶಾಲೆಗಳಿಗೆ ಕೋಳಿ ಮೊಟ್ಟೆ ಪೂರೈಕೆಯಾಗುತ್ತಿರುವ ಮದರಿ ಕಾರ್ಯವು ರಾಜ್ಯಕ್ಕೆ ಅನ್ವಯವಾಗುತ್ತಿದೆ ಎಂದು ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಹೇಳಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ್ ಜೆ.ಹೆಚ್.ಪಾಟೀಲ್ ಸಭಾಂಗಣದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರ ಜೀವನೋಪಾಯ ಅಭಿಯಾನ, ಕರ್ನಾಟಕ, ಜಿಲ್ಲಾ ಪಂಚಾಯತ್ ಕೊಪ್ಪಳ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂಜೀವಿನಿ ಒಕ್ಕೂಟದ ಅಡಿಯಲ್ಲಿ ಜಿಲ್ಲೆಯ ಕುದರಿಮೋತಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಸ್ವಸಹಾಯ ಗುಂಪಿನವರು ಕೋಳಿ ಸಾಕಾಣಿಕೆ ಘಟಕವನ್ನು ಪ್ರಾರಂಭಿಸಿ, ಸರಕಾರಿ ಶಾಲೆ, ಅಂಗನವಾಡಿ ಕೇಂದ್ರಗಳಿಗೆ ಮೊಟ್ಟೆ ಸರಬರಾಜು ಮಾಡುತ್ತಿರುವ ಕಾರ್ಯವು ರಾಜ್ಯದ ಗಮನ ಸೆಳೆದಿದ್ದು, ಇದೇ ಮಾದರಿಯನ್ನು ಇಡೀ ರಾಜ್ಯಕ್ಕೆ ವಿಸ್ತರಿಸಲು ಮುಖ್ಯಮಂತ್ರಿಗಳು 2025ರ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದಾರೆ. ಇದಕ್ಕಾಗಿ ಕುದರಿಮೋತಿ ಸ್ವಸಹಾಯ ಗುಂಪಿನವರ ಮಾದರಿ ಕಾರ್ಯಕ್ಕೆ ಪ್ರಶಸ್ತಿಯೂ ದೊ-ರೆತಿದ್ದು, ಜಿಲ್ಲಾ ಪಂಚಾಯತ್ ವತಿಯಿಂದ ಅಭಿನಂಧನೆ ಸಲ್ಲಿಸುತ್ತೇನೆ. ಈ ವ್ಯವಸ್ಥೆಯು ಕರ್ನಾಟದಲ್ಲಿ ಯಶಸ್ವಿಯಾಗಿ ಮುಂದಿನ ದಿನಮಾನಗಳಲ್ಲಿ ದೇಶಾದ್ಯಂತ ವಿಸ್ತರಣೆಯಾಗಲಿದೆ ಎಂದರು.

2025ರ ಬಜೆಟ್‌ನಲ್ಲಿ ರಾಜ್ಯ ಸರ್ಕಾರವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಹೆಚ್ಚು ಅನುದಾನವನ್ನು ನೀಡಿದೆ. ಇದರ ಸದ್ಬಳಕೆಯಾಗಬೇಕು. ಮಕ್ಕಳ ಪಾಲನೆ ಸೇರಿದಂತೆ ಮನೆಯ ಕೆಲಸ ಕಾರ್ಯಗಳ ಜೊತೆಗೆ ಕಛೇರಿ ಕೆಲಸವನ್ನು ಯಶಶ್ವಿಯಾಗಿ ಮಾಡುವ ಶಕ್ತಿ ಮಹಿಳೆಯರಲ್ಲಿದೆ. ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಮುಂದುವರೆಯಬೇಕು. ಬಾಲ್ಯವಿವಾಹವು ಶಿಕ್ಷಾರ್ಹ ಅಪರಾದವಾಗಿದ್ದು, ಜಿಲ್ಲೆಯಲ್ಲಿ ಬಾಲ್ಯವಿವಾಹಗಳು ನಡೆಯದಂತೆ ಎಲ್ಲರೂ ಸಹಕರಿಸಬೇಕು. ರಾಜಕೀಯದಲ್ಲಿರುವ ಮಹಿಳಾ ಜನಪ್ರತಿನಿಧಿಗಳ ಆಡಳಿತದಲ್ಲಿ ಪುರುಷರ ಹಸ್ತಕ್ಷೇಪ ಕೊನೆಯಾಗಬೇಕು. ಈ ಹಿನ್ನೆಲೆಯಲ್ಲಿ ರಾಜಕೀಯವಾಗಿ ಮಹಿಳೆಯರು ಗ್ರಾ.ಪಂ ಮಟ್ಟದಿಂದಲೇ ಸದೃಡರಾಗಬೇಕು ಎಂದು ಹೇಳಿದರು.

ಜಿ.ಪಂ ಯೋಜನಾ ನಿರ್ದೇಶಕ ಪ್ರಕಾಶ್ ವಿ. ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಹಿಳೆ ಅಬಲೆಯಲ್ಲ ಸಬಲೆ, ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಹುದು, ಎನ್ನುವುದಕ್ಕೆ ಈ ಕಾರ್ಯಕ್ರಮಕ್ಕೆ ಸಾಕ್ಷಿ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಬಿವೃದ್ಧಿ ಇಲಾಖೆಯ ಉಪನಿರ್ದೇಶಕ ಪರಶುರಾಮ ವೈ ಶೆಟ್ಟೆಪ್ಪನವರ್ ಮಾತನಾಡಿ, ಸಂಜೀವಿನಿ ಫಲಾನುಭವಿಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿವಿಧ ಇಲಾಖೆಯ ಮೂಲಕ ಸರಕಾರದ ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಮಹಿಳಾ ದಿನಾಚರಣೆ ಆಚರಣೆ ನಿಮಿತ್ತ ಜಿಲ್ಲಾ ಮಟ್ಟಕ್ಕೆ ಉತ್ತಮ ಜಿ.ಪಿ.ಎಲ್.ಎಫ್ ಹಾಗೂ ಉತ್ತಮ ಎಸ್.ಹೆಚ್.ಜಿ ಆಯ್ಕೆ ಮಾಡಿ, ಬಹುಮಾನ, ಪ್ರಮಾಣ ಪತ್ರ ಹಾಗೂ ಸವಿನೆನಪಿನ ಕಾಣಿಕೆಯನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಜಿ.ಪಂ ಎನ್.ಆರ್.ಎಲ್.ಎಂ ಸಂಜೀವಿನಿ ಘಟಕದ ಅಂಬಣ್ಣ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ಉಪಸ್ಥಿತರಿದ್ದರು.

## ಮಾ.26 ರಂದು ಪೂರ್ವ ಸಿದ್ದತಾ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 21– : 2025–26ನೇ ಸಾಲಿನ ಡಾ.ಬಾಬು ಜಗಜೀವನರಾಂ ಅವರ 118ನೇ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಅಂಗವಾಗಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ 2025ರ ಮಾರ್ಚ್ 26 ರಂದು ಪೂರ್ವಸಿದ್ಧತಾ ಸಭೆಯು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರು ಎಸ್.ಎಸ್.ಚನ್ನಬಸಪ್ಪ ಅವರು ತಿಳಿಸಿದ್ದಾರೆ.

"ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪ್ರತಿ ವರ್ಷ ಏಪ್ರಿಲ್ 5 ರಂದು ಡಾ.ಬಾಬು ಜಗಜೀವನರಾಂ ಜನ್ಮದಿನಾಚರಣೆ ಹಾಗೂ ಏಪ್ರಿಲ್ 14 ರಂದು ಡಾ.ಬಿ.ಆರ್.ಅಂಬೇಡ್ಕರ್ ಅವರ ಜನ್ಮದಿನಾಚರಣೆಯನ್ನು ಜಿಲ್ಲಾ ಮಟ್ಟದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಯಾದಗಿರಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಅಂದು ಮಧ್ಯಾಹ್ನ 3 ಗಂಟೆಗೆ ಡಾ.ಬಾಬು ಜಗಜೀವನರಾಂ ರವರ 118ನೇ ಜನ್ಮದಿನಾಚರಣೆ ಪೂರ್ವಭಾವಿ ಸಭೆ ಹಾಗೂ ಸಂಜೆ 4 ಗಂ-ಟೆಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆ ಪೂರ್ವಭಾವಿ ಸಭೆ ನಡೆಯಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮೊದಲ ದಿನದ ಎಸ್.ಎಸ್.ಎಲ್.ಸಿ ಪರೀಕ್ಷೆ ಸುಗಮ

## ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಲಿ; ಜಿ.ಪಂ ಸಿಇಓ ರಾಹುಲ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.21 –ಇಂದಿನಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಆರಂಭವಾಗಿವೆ. ರಾಯಚೂರು ಜಿಲ್ಲೆಯಲ್ಲಿ 34,619 ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. 97 ಪರೀಕ್ಷಾ ಕೇಂದ್ರಗಳನ್ನು ತೆರಯಲಾಗಿದೆ. ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ತುಕಾರಂ ಪಾಂಡ್ವೆ ಅವರು ಹೇಳಿದರು.

ಮಾ.21ರ ಶುಕ್ರವಾರ ದಂದು ಜಿಲ್ಲೆಯ ಮಾನವಿ ತಾಲೂಕಿನ ಆದರ್ಶ ವಿದ್ಯಾಲಯ, ಸರಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಹಾಗೂ ವೆಲಂಕಿ ರಾಮಕೃಷ್ಣ ಹಿರಿಯ ಪ್ರಾಥಮಿಕ ಶಾಲೆಯ ಪರೀಕ್ಷೆ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಮಾತನಾಡಿದರು. ನೀರಮಾನ್ವಿಯ ಆದರ್ಶ ವಿದ್ಯಾಲಯ ಪರೀಕ್ಷೆ ಕೇಂದ್ರಕ್ಕೆ ಬೇಟಿ ನೀಡಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳ ಮಾಹಿತಿ ಪಡೆದರು. ಕೇಂದ್ರದಲ್ಲಿ ಒಟ್ಟು 607 ವಿದ್ಯಾರ್ಥಿಗಳ ಪೈಕಿ 52 ವಿದ್ಯಾರ್ಥಿಗಳು ಗೈರು ಹಾಜರಿ ಕಂಡುಬಂತು. ಸರಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಕೇಂದ್ರದಲ್ಲಿ ಒಟ್ಟು 387 ವಿದ್ಯಾರ್ಥಿಗಳ ಪೈಕಿ 10 ವಿದ್ಯಾರ್ಥಿಗಳು ಗೈರು, ವೆಲಂಕಿ ರಾಕೃಷ್ಣ ಹಿರಿಯ ಪ್ರಾಥಮಿಕ ಶಾಲೆ ಕೇಂದ್ರದಲ್ಲಿ ಒಟ್ಟು 536 ಪೈಕಿ 48 ವಿದ್ಯಾರ್ಥಿಗಳು ಗೈರು ಆಗಿರುವ ಮಾಹಿತಿಯನ್ನು ಪಡೆದುಕೊಂಡರು. ಈ ಬಾರಿ ಪರೀಕ್ಷಾ ಕೇಂದ್ರಗಳಲ್ಲಿ ಪ್ರತಿಯೊಂದು ಕೊಠಡಿಗೆ ಸಿಸಿ ಕ್ಯಾಮರಾ ಅಳವಡಿಸಿ ಮುಖ್ಯ ಗುರುಗಳ ಕೋಣೆಯಲ್ಲಿ ವೀಕ್ಷಿಸಲು ಅವಕಾಶ ಕಲ್ಪಿಸಿದ್ದು, ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿರುವ ವ್ಯವಸ್ಥೆ ಪರಿಶೀಲಿಸಿದರು. ನಂತರ ಪರೀಕ್ಷಾ ಕೇಂದ್ರದಲ್ಲಿ ಯಾವುದೇ ಕಾರಣಕ್ಕೂ ನಕಲು/ಅಕ್ರಮಗಳು ನಡೆಯದಂತೆ ಎಲ್ಲಾ ಬಗೆಯ ಅಗತ್ಯಕ್ರಮಗಳನ್ನು ಕೈಗೊಂಡು ಪರಿಕ್ಷಾರ್ಥಿಗಳಿಗೆ ಆರೋಗ್ಯಕರ ವಾತಾವರಣದಲ್ಲಿ ಪರೀ-ಕ್ಷೆ ಬರೆಯಲು ಅವಕಾಶ ಕಲ್ಪಿಸುವಂತೆ ಕೇಂದ್ರಗಳ ಅಧೀಕ್ಷಕರಿಗೆ ಸೂಚಿಸಿದರು.

ಇನ್ನೂ ಪರೀಕ್ಷೆ ಕೇಂದ್ರಗಳಿಗೆ ನಿಂಯೋಜನೆಗೊಂಡ ಸಿಬ್ಬಂದಿಯವರಿಂದ ಪರೀಕ್ಷೆ ಸುಗಮವಾಗಿ ನಡೆಯುವ ಬಗ್ಗೆ ಮಾಹಿತಿ ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಹಾಗೂ ಕರ್ತವ್ಯ ನಿರತ ಅಧಿಕಾರಿಗಳು ಹಾಗೂ ಸೇರಿದಂತೆ ಇತರೆ ಸಿಬ್ಬಂದಿಗಳು ಇದ್ದರು.

## 15ನೇ ಹಣಕಾಸಿನ ಹಣ ದುರ್ಬಳಕೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ: ತಾಲೂಕಿನ ಕೋಠಾ ಗ್ರಾಮಪಂಚಾಯತಿಯಲ್ಲಿ 15 ನೇ ಹಣಕಾಸು ದುರ್ಬಳಿಕೆ ಮಾಡಿಕೊಂಡಿರುವ ದಾಖಲೆಗಳನ್ನು ಪರಿಶಿಲಿಸಿ ದಾಖಲೆ ನೀಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಡಿ.ಜಿ ಸಾಗರ ಬಣ ಲಿಂಗಸುಗೂರ ತಾಲೂಕು ಸಮಿತಿ ತಾಲ್ಲೂಕ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮನವಿ ಸಲ್ಲಿ ಒತ್ತಾಯಿಸಿದರು.

ಕೋಠಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು 15ನೇ ಹಣಕಾಸಿನ ಚಟುವಟಿಕೆಗಳಿಗೆ ಸಂಬಂದಿಸಿದಂತೆ ಒಬ್ಬ ಸರಬರಾಜು ದಾರನಿಗೆ 1 ಲಕ್ಷಕಿಂತ ಹೆಚ್ಚಿನ ಮೊತ್ತವನ್ನು ಪಾವತಿಸಿ ಕೆ.ಟಿ.ಟಿ.ಪಿ. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಿಕತೆ ಅಧಿ ನಿಯಮ 1999 ಮತ್ತು ನಿಯಮಗಳನ್ನು ಗಾಳಿಗೆ ತೂರಿ ಅಕ್ರಮ ಮಾಡಲಾಗಿದೆ ಎಂದು ಆರೋಪಿಸಿದರು. ಕೈಲಾಸ ಎಲೆಕ್ಟಿಕಲ್ಸ್ ಏಜೆನ್ಸಿ, ದಂಡಾವತಿ ಆಗೋಟೆಂಡರಸ್, ಮೈಹೀಬೂಬು ಎಲೆಕ್ಟ್ರಿಕಲ್ಸ್, ಕೃಷ್ಣಾ ಬುಕ್ ಸ್ಟಾಲ್ ಏಜೆನ್ಸಿಗಳಿಗೆ ಹಣ ಪಾವತಿ ಮಾಡಿ ಹಣ ದುರುಪಯೋಗ ಮಾಡಿಕೊಂಡಿರುತ್ತಾರೆ. ಕೊಟ್ಟಂತಹ ದೂರು ಮತ್ತು ಮನವಿ

ಕೂಲಂಕೂಷವಾಗಿ ದಾಖಲಾತಿಗಳನ್ನು ಪರಿಶೀಲನೆ ಮಾಡಿ ಕಾನೂನು ನಿಯಮಾನುಸಾರ ವರದಿಯನ್ನು ನಮ್ಮ ಸಂಘಟನೆಗೆ ಪರಿಶಿಲನೆ ಮಾಡಿದ ದಾಖಲೆ ನಕಲು ಪ್ರತಿಯನ್ನು ಒಂದು ವಾರದೊಳಗೆ ಕೊಡಬೇಕೆಂದು ತಮ್ಮಲ್ಲಿ ಒತ್ತಾಯಿಸುತ್ತೇವೆ. ತಾವುಗಳು ವರದಿ ನೀಡದೇ ಹೋದಲ್ಲಿ ಮುಂದಿನ ದಿನಾಂಕ:04–2025 ರಂದು ಮಂಗಳವಾರದಂದು ತಮ್ಮ ಕಾಯಾಲಯದ ಮುಂದೆ ನಮ್ಮ ಸಂಘಟನೆ ಅನಿರ್ಧಿಷ್ಟಾವಧಿ ಧರಣಿಯನ್ನು ಮಾಡಲಾಗುವುದು ಎಂದು ಹೇಳಿದರು

ಈ ವೇಳೆ ಅಧ್ಯಕ್ಷ ಮಲ್ಲೇಶ ಮ್ಯಾಗೇರಿ, ಅಮರೇಗೌಡ ಪಾಟೀಲ್, ಅಮರೇಶ ನಾಯಕ, ಹನುಮಂತ್ರಾಯ ಲುಕ್ಕಿ, ಗಂಗಾಧರ ನಾಯಕ ಇದ್ದರು.

## ಶ್ರೀಶೈಲಂಗೆ ವಿಶೇಷ ಬಸ್‌ಗಳ ಸೌಲಭ್ಯಕ್ಕೆ ಸೂಚನೆ

ಯಾದಗಿರಿ : ಮಾರ್ಚ್ 21 : ಯುಗಾದಿ ಹಬ್ಬದ ಪ್ರಯುಕ್ತ ಸುಕ್ಷೇತ್ರ ಶ್ರೀಶೈಲಂಗೆ ವಿಶೇಷ ಬಸ್‌ಗಳ ವ್ಯವಸ್ಥೆ ಸೌಲಭ್ಯಕ್ಕೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀ ಸುನೀಲ್ ಕುಮಾರ ಚಂದರಗಿ ಅವರು ತಿಳಿಸಿದ್ದಾರೆ. ಯುಗಾದಿ ಹಬ್ಬದ ಹಿನ್ನೆಲೆ ಆಂದ್ರಪ್ರದೇಶದಲ್ಲಿರುವ ಸುಕ್ಷೇತ್ರ ಶ್ರೀಶೈಲ ಶ್ರೀ ಸಂಭ್ರಮ ಮಲ್ಲಿಕಾರ್ಜುನ ದೇವರ ಜಾತ್ರೆಯ ನಡೆಯಲಿದೆ. ಈ ಜಾತ್ರೆಗೆ ಹೋಗಿ ಭಕ್ತಾಧಿಗಳ ಅನುಕೂಲಕ್ಕಾಗಿ 2025ರ ಮಾರ್ಚ್ 23 ರಿಂದ 30ರ ವರೆಗೆ ವಿಭಾಗದಿಂದ ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಲಾಗಿರುತ್ತದೆ. ಈ ಬಸ್‌ಗಳು ವಿಭಾಗದ ಯಾದಗಿರಿ, ಶಹಾಪೂರ, ಸುರಪುರ, ಗುರುಮಠಕಲ್, ಹುಣಸಗಿ, ಕೆಂಭಾವಿ, ಬಸ್ ನಿಲ್ದಾಣಗಳಿಂದ ಕಾರ್ಯಚರಣೆ ಮಾಡಲಾಗುತ್ತದೆ.

ಅಲ್ಲದೇ ಯಾವುದೇ ಗ್ರಾಮೀಣ ಪ್ರದೇಶದ ಸ್ಥಳಗಳಿಂದ ಶ್ರೀಶೈಲಂಕ್ಕೆ ಹೋಗುವ ಕನಿಷ್ಠ 50 ಜನರಿದ್ದಲ್ಲಿ ಸಮೀಪದ ಘಟಕ ವ್ಯವಸ್ಥಾಪಕರನ್ನು ಸಂಪರ್ಕಿಸಿದಲ್ಲಿ ಕೂಡಲೇ ಅವರ ಗ್ರಾಮಗಳಿಂದಲೇ ನೇರವಾಗಿ ಶ್ರೀಶೈಲಂಗೆ ಬಸ್‌ಗಳನ್ನು ಬಿಡಲಾಗುವುದು. ಶ್ರೀಶೈಲಂಕ್ಕೆ ಹೋಗುವ ಭಕ್ತಾಧಿ ಪ್ರಯಾಣಿಕರು ತಮ್ಮ ಸಾರಿಗೆ ಸೌಕರ್ಯಕ್ಕೆ ಯಾದಗಿರಿ ಘಟಕ ವ್ಯವಸ್ಥಾಪಕರು ದೂ.ಸಂ.7760992463, ಶಹಾಪೂರ ಘಟಕ ವ್ಯವಸ್ಥಾಪಕರು ದೂ.ಸಂ.7760992464, ಸುರಪುರ ಘಟಕ ವ್ಯವಸ್ಥಾಪಕರು ದೂ.ಸಂ.7760992467, ಗುರುಮಠಕಲ್ ಘಟಕ ವ್ಯವಸ್ಥಾಪಕರು ದೂ.ಸಂ.7760992465, ಶ್ರೀಶೈಲಂ ಜಾತ್ರೆ ಸ್ಥಳ ದೂ.ಸಂ.7760992449, ವಿಭಾಗೀಯ ಸಂಚಲನಾಧಿಕಾರಿ ದೂ.ಸಂ.7760992452ಗೆ ವಿಶೇಷ ಸೂಚನೆ ಶ್ರೀಶೈಲಂನಲ್ಲಿ ಬಸ್‌ಗಳ ಮುಂಗಡ ಬುಕಿಂಗ್ ವ್ಯವಸ್ಥೆ ಮಾಡಲಾಗಿರುತ್ತದೆ. ಭಕ್ತಾಧಿ ಪ್ರಯಾಣಿಕರು ಈ ವಿಶೇಷ ಬಸ್‌ಗಳ ಸೌಲಭ್ಯದ ಸದುಪಯೋಗಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಪೋಲಿಸ್ ವ್ಯವಸ್ಥೆ ಜಾರಿಗೆ ತರುವ ಬಗ್ಗೆ ರಾಷ್ಟ್ರಪತಿ ಮತ್ತು ಪ್ರಧಾನಿಗೆ ವಡ್ಡೆಯವರಿಂದ ಮನವಿ

ಮಲ್ಲಮ್ಮ ನುಡಿ ವಾರ್ತೆ



ಕಮಲನಗರ: ದೇಶದಲ್ಲಿನ ಎಲ್ಲಾ ರಾಜ್ಯಗಳಲ್ಲಿ ಒಂದು ರಾಷ್ಟ್ರ ಒಂದು ಪೋಲಿಸ್ ವ್ಯವಸ್ಥೆ ದೃಷ್ಟಿಯಿಂದ ರಾಷ್ಟೀಯ ಪೋಲಿಸ್ ವ್ಯವಸ್ಥೆ ಜಾರಿಗೆ ತರಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ರಾಷ್ಟ್ರಪತಿ ಹಾಗೂ ಪ್ರಧಾನಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿ ಸಲ್ಲಿಸಿದ್ದಾರೆ.

ಇವತ್ತಿನ ಪರಿಸ್ಥಿತಿಯಲ್ಲಿ ನಮ್ಮ ದೇಶಕ್ಕೆ ರಾಷ್ಟ್ರೀಯ ಪೋಲಿಸ್ (ಭಾರತೀಯ ಪೋಲಿಸ್) ವ್ಯವಸ್ಥೆ ದೇಶಾದ್ಯಂತ ಪ್ರಾರಂಭಿಸುವುದು ಅವಶ್ಯಕವಾಗಿದೆ. ದೇಶದ ಸ್ವತಂತ್ರ ಹೋರಾಟದಲ್ಲಿ ಅಂದಿನ ಸ್ವತಂತ್ರ ಹೋರಾಟಗಾರರು ರಾಷ ಭಾವನೆಯಿಂದ ಹೋರಾಡಿದರು. ಯಾರು ಮನಸ್ಸಿನಲ್ಲೂ ಪ್ರಾಂತೀಯ ವಿಚಾರ ಇರಲಿಲ್ಲ. ದೇಶದ ಅಖಂಡತೆಗಾಗಿ, ದೇಶದ ಏಕತೆಗಾಗಿ ಹೋರಾಡಿರುತ್ತಾರೆ. ಅದರಿಂದ ಇಡೀ ದೇಶಕ್ಕೆ ಒಂದೇ ಪೋಲಿಸ್ ವ್ಯವಸ್ಥೆ ಜಾರಿ ಮಾಡುವುದು ಇಂದಿನ ಪರಿಸ್ಥಿತಿಯಲ್ಲಿ ಅನಿವಾರ್ಯವಾಗಿರುತ್ತದೆ.

ಭಾರತ ಸಂವಿಧಾನದಲ್ಲಿ ಪೋಲಿಸ್ ವ್ಯವಸ್ಥೆ (ಕಾನೂನು ಮತ್ತು ಸುವ್ಯವಸ್ಥೆ) ಯನ್ನು ರಾಜ್ಯದ ವಿಷಯಕ್ಕೆ ಸೇರಿದೆ. ಆದರೆ ಇಂದು ದೇಶದ ಅನೇಕ ರಾಜ್ಯಗಳಲ್ಲಿ ಅಂತರರಾಜ್ಯ ಅಪರಾಧಗಳು ನಡೆಯುತ್ತಿವೆ. ಜಾತಿ, ಧರ್ಮ ಹೆಸರಿನಲ್ಲಿ ಹಾಗೂ ಭಾಷೆಯ ಹೆಸರಿನಲ್ಲಿ ಹಾಗೂ ಪ್ರಾದೇಶಿಕತೆ ಹೆಸರಿನಲ್ಲಿ ದಂಗೆಗಳು ನಡೆಯುತ್ತಿವೆ. ಇದರಿಂದ ಭಾರತದಲ್ಲಿನ ನಾಗರಿಕರ ಸುರಕ್ಷತೆಗೆ ಕಂಟಕ ನಿರ್ಮಾಣವಾಗಿದೆ.

ಹಾಗಾಗಿ ಭಾರತೀಯ ನಾಗರಿಕರ ಸುರಕ್ಷತೆಯ ದೃಷ್ಟಿಯಿಂದ ಹಾಗೂ ದೇಶದ ಏಕತೆ ಹಾಗೂ ಅಖಂಡತೆ ದೃಷ್ಟಿಯಿಂದ ಭಾರತದ ಎಲ್ಲಾ ರಾಜ್ಯಗಳಲ್ಲಿ ಒಂದೇ ಭಾರತೀಯ ಪೋಲಿಸ್ ವ್ಯವಸ್ಥೆ ಪ್ರಾರಂಭಿಸುವುದು ಬಹಳ ಅವಶ್ಯಕವಾಗಿರುತ್ತದೆ.

ದೇಶದಲ್ಲಿ ಅನೇಕ ಯೋಜನೆಗಳಲ್ಲಿ ಒಂದು ದೇಶ ಒಂದು ವ್ಯವಸ್ಥೆ ಜಾರಿಗೆ ತರಲಾಗುತ್ತಿದೆ ಹಾಗೂ ಚುನಾವಣೆಯೂ ಕೂಡ ಒಂದು ದೇಶ ಒಂದು ಚುನಾವಣೆ ಚರ್ಚೆ ದೇಶದಲ್ಲಿ ನಡೆಯುತ್ತಿದೆ. ಹೀಗಿರುವಾಗ ಭಾರತೀಯ ನಾಗರಿಕರ ಜೀವದ ಸುರಕ್ಷತೆ ಹಾಗೂ ದೇಶದ ಏಕತೆ ಹಾಗೂ ಅಖಂಡತೆಗಾಗಿ ಒಂದು ದೇಶ ಒಂದು ಪೋಲಿಸ್ ವ್ಯವಸ್ಥೆ ಇರುವುದು ಅವಶ್ಯಕವಾಗಿರುತ್ತದೆ. ಈ ದೃಷ್ಟಿಯಿಂದ ತಾವು ಈ ಬಗ್ಗೆ ಚಿಂತನೆ ನಡೆಸಿ, ದೇಶದ ಹಿತದೃಷ್ಟಿಯಿಂದ ಸೂಕ್ತ ನಿರ್ಣಯ ಕೈಗೊಳ್ಳಬೇಕೆಂದು ಸಮಾಜ ಸೇವಕ ಗುರುನಾಥ ವಡ್ಡೆಯವರು ತಮ್ಮ ಮನವಿಯಲ್ಲಿ ಮನವಿ ಮಾಡಿಕೊಂಡಿದ್ದಾರೆ.

## ಮಾರ್ಚ್ 22 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.21– ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–2ರ ವ್ಯಾಪ್ತಿಯಲ್ಲಿ ಬರುವ 33/11 ಅಂಕಲಗಾ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಮೆಂಟೇನನ್ಸ್ ಕಾರ್ಯ ಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ವಿತರಣಾ ಕೇಂದ್ರಗಳಲ್ಲಿನ ಗ್ರಾಮಗಳಲ್ಲಿ ಇದೇ ಮಾರ್ಚ್ 22 ರಂದು ಬೆಳಿಗ್ಗೆ 11 ರಿಂದ ಸಂಜೆ 6 ಗಂಟೆಯವರೆಗೆ ರವರೆಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುತ್ತಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

## ಮಾರ್ಚ್ 24 ರಂದು ಶ್ರೀ ದೇವರ ದಾಸಿಮಯ್ಯ ಜಯಂತಿಯ ಪೂರ್ವಸಿದ್ಧತಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 21, (ಕ.ವಾ) : 2025ರ ಏಪ್ರಿಲ್ 2ರ ಬುಧವಾರ ರಂದು ಶ್ರೀ ದೇವರ ದಾಸಿಮಯ್ಯ ಜಯಂತ್ಯೋತ್ಸವವನ್ನು ಆಚರಣೆ-ಯ ಹಿನ್ನೆಲೆ ಪೂರ್ವಸಿದ್ದತಾ ಸಭೆಯು ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರ ಅಧ್ಯಕ್ಷತೆಯಲ್ಲಿ ಇದೇ 2025ರ ಮಾರ್ಚ್ 24ರ ಸೋಮವಾರ ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರದೇವಿ ಮಠಪತಿ ಅವರು ತಿಳಿಸಿದ್ದಾರೆ.

ಶ್ರೀ ದೇವರ ದಾಸಿಮಯ್ಯ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆದಿಂದ ಏರ್ಪಡಿಸಲಾಗಿದ್ದು, ಈ ಜಯಂತಿಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ಈ ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಮತ್ತು ಸಾರ್ವಜನಿಕರು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏ.4, ಹಾಗೂ 5 ರಂದು ಬೋಧಕ ಹುದ್ದೆಗಳಿಗೆ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 21, (ಕ.ವಾ) : ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವತಿಯಿಂದ ಎನ್‌ಎಮ್‌ಸಿ ನಿಯಮಾವಳಿ ಅನ್ವಯ ಅಗತ್ಯವಿರುವ ಬೋಧಕ ಹುದ್ದೆಗಳಿಗೆ ಸಂದರ್ಶನ 2025ರ ಏಪ್ರಿಲ್ 4, ಹಾಗೂ 5 ರಂದು ಬೆಳಿಗ್ಗೆ 8 ರಿಂದ 11ರ ವರೆಗೆ ನಡೆಯಲಿದೆ ಎಂದು ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಡೀನ್ ಮತ್ತು ನಿರ್ದೇಶಕರು ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಯಿಮ್ಸ್ ಸಂಸ್ಥೆಯ ವೆಬ್‌ಸೈಟ್ yimsyadgiri.karnataka.gov.inನಲ್ಲಿ ಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.21.–ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬೆಂಗಳೂರಿನಿಂದ ರೈಲಿನ ಮೂಲಕ ಮಾರ್ಚ್ 22 ರಂದು ಶನಿವಾರ ಬೆಳಿಗ್ಗೆ 5.50 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಬೆಳಿಗ್ಗೆ 10.30 ಗಂಟೆಗೆ ಕಲಬುರಗಿ ಸುಪರ ಸ್ಪೇಷಾಲಿಟಿ ಆಸ್ಪತ್ರೆಗೆ ಭೇಟಿ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು. ಮಾರ್ಚ್ 23 ರಂದು ಭಾನುವಾರ ಮಧ್ಯಾಹ್ನ 1 ಗಂಟೆಗೆ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಮಹಲ್ ರೋಜಾ ಗ್ರಾಮಕ್ಕೆ ತೆರಳಿ ಗ್ರಾಮದ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಮರಳಿ ಸಂಜೆ 5.30 ಗಂ-ಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

## ನೀರನ್ನು ಕಾಯಿಸಿ, ಆರಿಸಿ ಮತ್ತು ಸೋಸಿ ಕುಡಿಯುಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.21.–ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲಗಳಲ್ಲಿ ಒಂದಾದ ಭೀಮಾ ನದಿಯ ಮೇಲ್ಭಾಗದಲ್ಲಿ ನೀರಿನ ಹರಿಯುವಿಕೆ ಪೂರ್ತಿಯಾಗಿ ನಿಂತಿದ್ದು, ಈ ಬ್ಯಾರೇಜಿನಲ್ಲಿ ಶೇಖರಣೆಗೊಂಡ ನೀರು ಕೆಳಮಟ್ಟದಾಗಿದ್ದು, ಈ ನಿಂತಿರುವ ನೀರಿನ ಬಣ್ಣ ಹಾಗೂ ಗುಣಮಟ್ಟವು ತೀವ್ರವಾಗಿ ಇಳಿಕೆಯಾಗಿದೆ. ಇದನ್ನು ಸುಧಾರಿಸಲು ಈಗಾಗಲೇ ಸೂಪರ್ ಕ್ಲೋರಿನೇಶನ್ ಮಾಡಿ ನೀರು ಸರಬರಾಜು ಮಾಡಲಾಗುತ್ತಿದೆ. ಆದಾಗ್ಯೂ ಆರೋಗ್ಯದ ಹಿತದೃಷ್ಟಿಯಿಂದ ನಗರದ ಸಾರ್ವಜನಿಕರು ಕುಡಿಯುವ ನೀರನ್ನು ಕಾಯಿಸಿ, ಆರಿಸಿ ಮತ್ತು ಸೋಸಿ ಕುಡಿಯಬೇಕೆಂದು ಕಲಬುರಗಿ ಕೆಯುಡಬ್ಲ್ಯುಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ಅದೇ ರೀತಿ ಬೆಣ್ಣೆತೋರಾ ಮೂಲ ಸ್ಥಾವರದಲ್ಲಿ ಕುರಿ-ಕೋಟಾ ಪಂಪ್‌ಹೌಸ್‌ನಲ್ಲಿ ಹಾಗೂ ಬಂಬೂ ಬಜಾರ ರಸ್ತೆಗೆ ಇರುವ ಹಳೇ ಜಲಶುದ್ಧೀಕರಣ ಕೇಂದ್ರದಲ್ಲಿ 3 ದಿನಗಳಿಂದ ವಿದ್ಯುತ್ ಪೂರೈಕೆಯಲ್ಲಿ ತೊಂದರೆಯಾಗುತ್ತಿರುವ ಕಾರಣ ನಗರದ ನಿರಂತರ ನೀರು ಸರಬರಾಜು ಮಾಡುವ ಬಡಾವಣೆಗಳಿಗೆ ಕುಡಿಯುವ ನೀರಿನ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಅದ್ದರಿಂದ ಕಲಬುರಗಿ ನಗರದ ಸಾರ್ವಜನಿಕರು ಕೆಯುಡಬ್ಲ್ಯುಎಸ್‌ಎಂಪಿ–ಕೆಯುಐಡಿಎಫ್‌ಸಿ ಹಾಗೂ ಮೆ. ಎಲ್ ಆ್ಯಂಡ್ ಟಿ ಲಿಮಿಟೆಡ್ ಇವರೊಂದಿಗೆ ಸಹಕರಿಸಬೇಕೆಂದು ಅವರು ತಿಳಿಸಿದ್ದಾರೆ.

## ಕುಡಿಯುವ ನೀರಿನಲ್ಲಿ ಯಾವುದೇ ವ್ಯತ್ಯಯ ಉಂಟಾದಲ್ಲಿ ಸಹಾಯವಾಣಿ ಕರಗೆ ಸೂಚನೆ

ಯಾದಗಿರಿ : ಮಾರ್ಚ್ 21– ಯಾದಗಿರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಬಡಾವಣೆಯ ಜನರಿಗೆ ಗಮನಕ್ಕೆ ಈಗಾಗಲೇ ಬೇಸಿಗೆ ಕಾಲ ಪ್ರಾರಂಭವಾಗಿದ್ದು, ನಗರದಲ್ಲಿ ನೀರು ಸಬರಾಜಿನ ಬಣ್ಣದಲ್ಲಿ ಏನಾದರೂ ವ್ಯತ್ಯಯ ಕಂಡು ಬಂದರೆ ಕುಡಿಯುವ ನೀರಿನಲ್ಲಿ ವಾಸನೆ ಕಂಡು ಬಂದರೆ ಮತ್ತು ಮೋರಿ ನೀರು ನೀರಿನ ಪೈಪ್‌ನಲ್ಲಿ ಮಿಶ್ರಣ ವಾಗುತ್ತಿದ್ದರೆ ಹಾಗೂ ಕುಡಿಯುವ ನೀರಿನಲ್ಲಿ ಯಾವುದೇ ಸಮಸ್ಯೆ ಕಂಡುಬಂದರೆ ಈ ವಿಷಯವನ್ನು ನಗರಸಭೆಯ ಸಹಾಯವಾಣಿ ಸಂಖ್ಯೆ 08473 253265ಗೆ ಕರೆಗೆ ಸಾರ್ವಜನಿಕರಲ್ಲಿ ವಿನಂತಿಸಿದೆ ಎಂದು ಯಾದಗಿರಿ ನಗರಸಭೆ ಪೌರಾಯುಕ್ತರು ಉಮೇಶ ಚವ್ಹಾಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕ ಪದ್ಧತಿ ನಿರ್ಮೂಲನೆ: ಜನಜಾಗೃತಿ ಸಂಚಾರಿ ವಾಹನಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.21–ಶಿಕ್ಷಣವೇಶಕ್ತಿ–ಬಾಲದುಡಿಮೆಗೆಮುಕ್ತಿಎಂಬ ಧ್ಯೇಯದೊಂದಿಗೆಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986ರ ಮತ್ತು ತಿದ್ದುಪಡಿ ಕಾಯ್ದೆ 2016ರ ಕುರಿತು ಜಿಲ್ಲೆಯಲ್ಲಿ 7 ದಿನಗಳ ಕಾಲ ಸಂಚರಿಸುವ ಜನಜಾಗೃತಿಸಂಚಾರಿವಾಹನಕ್ಕೆ ನಗರದಜಿಲ್ಲಾಧಿಕಾರಿಗಳಕಚೇರಿ ಆವರಣದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಹಾಗೂ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಶುಕ್ರವಾರ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾರ್ಮಿಕ ಇಲಾಖೆ ಇವರ ಸಂಯುಕ್ತಾಶ್ರಯಲ್ಲಿ ಜಿಲ್ಲಾ ಬಾಲ ಕಾರ್ಮಿಕ ಸೊಸೈಟಿ ಕಚೇರಿ ವತಿಯಿಂದ 2024–25 ನೇ ಸಾಲಿನ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಅನುದಾನದಡಿ ಜಿಲ್ಲೆಯ 05 ತಾಲ್ಲೂಕು ವಿವಿಧ ಗ್ರಾಮಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕರ ಪದ್ಧತಿ ನಿರ್ಮೂಲನೆ ಕುರಿತು ಜಾಗೃತಿಮೂಡಿಸುವ ಧ್ವನಿವರ್ಧಕ ಹೊಂದಿದ ಆಟೋ ಪ್ರಚಾರ ವಾಹನವು ಮಾ.21 ರಿಂದ 27 ರ ವರೆಗೆ ಸಂಚರಿಸಲಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಸದಸ್ಯಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಮಕ್ಕಳನ್ನು ದುಡಿಮೆಗೆ ಕಳುಹಿಸಬಾರದು, ಮಕ್ಕಳಿಂದ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ. ಮಕ್ಕಳಿಗೆ ಬಾಲ್ಯ, ಆರೋಗ್ಯ ಮತ್ತು ಶಿಕ್ಷಣ ನೀಡಬೇಕು ಎಂದು ಹೇಳಿದರು.

ಅಪರಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯಿಂದ ಸಮಾಜದ ಅಭಿವೃದ್ಧಿಗೆ ನಾಂದಿಯಾಗುತ್ತದೆ. ಬಾಲ ದುಡಿಮೆಗೆ ಮುಕ್ತಿ ನೀಡಲು, ಶಿಕ್ಷಣವೇ ಶಕ್ತಿಯಾಗಿದೆ ಎಂದು ಹೇಳಿದರು.

14 ವರ್ಷದೊಳಗಿನ ಯಾವುದೇ ಮಕ್ಕಳನ್ನು ಯಾವುದೇ ಕ್ಷೇತ್ರದಲ್ಲಿ ಮತ್ತು 14 ರಿಂದ 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿದಲ್ಲಿ 6 ತಿಂಗಳಿಗಿಂತ ಕಡಿಮೆ ಇಲ್ಲದಂತೆ ಹಾಗೂ 2 ವರ್ಷದವರೆಗೆ ಕಾರಾಗೃಹ ಶಿಕ್ಷೆ ಅಥವಾ 20 ಸಾವಿರದಿಂದ 50 ಸಾವಿರದವರೆಗೆ ದಂಡ, ಇಲ್ಲವೇ ಎರಡನ್ನು ವಿಧಿಸಬಹುದಾಗಿದೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಜಿಲ್ಲಾ ಯೋಜನಾಧಿಕಾರಿ ಎ.ಮೌನೇಶ್ ಅವರು ಹೇಳಿದರು.

ಇದೇ ವೇಳೆ ಗಣ್ಯರು ಬಾಲ ಕಾರ್ಮಿಕ ಮತ್ತು ಕಿಶೋರಕಾರ್ಮಿಕರ ಪದ್ಧತಿ ನಿರ್ಮೂಲನೆ ಕುರಿತು ಜಾಗೃತಿ ಕರಪತ್ರ ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಮಿಕ ಇಲಾಖೆಯ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು, ತಾಲ್ಲೂಕು ಕಾರ್ಮಿಕ ಇಲಾಖೆಯ ಅಧಿಕಾರಿಗಳು ಸೇರಿದಂತೆ ಇತರರು ಇದ್ದರು.

ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯ 'ಪತ್ರಿಕೋದ್ಯಮ' ವಿಭಾಗದಲ್ಲಿ ವಿಶೇಷ ಉಪನ್ಯಾಸ

## ಪತ್ರಿಕೆ ಓದುವುದರಿಂದ ಜ್ಞಾನ ವೃದ್ಧಿಸಿಕೊಳ್ಳಬಹುದು: ಪ್ರೊ.ಎಂ.ಮುನಿರಾಜು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.21–ಪತ್ರಿಕೋದ್ಯಮ ಎಂಬುದು ಜನರ ಜೀವನಾಡಿಯಂತಿದ್ದು, ಬದಲಾಗುತ್ತಿರುವ ಶಿಕ್ಷಣಕ್ರಮದಲ್ಲಿ ಕೌಶಲ್ಯ ಆಧಾರಿತ ತಾಂತ್ರಿಕ ಕಲಿಕೆಗೆ ಒತ್ತು ನೀಡಬೇಕು. ದಿನವೂ ಪತ್ರಿಕೆಗಳನ್ನು ಓದುವ ಹವ್ಯಾಸದಿಂದ ಜ್ಞಾನ ವೃದ್ಧಿಸಿಕೊಳ್ಳಬಹುದು ಎಂದು ವಿಜಯನಗರಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಎಂ.ಮುನಿರಾಜು ಅವರು ಹೇಳಿದರು.

ಶುಕ್ರವಾರದಂದು ವಿಜಯನಗರ ಶ್ರೀಕೃಷ್ಣದೇವರಾಯವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಆಯೋಜಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪತ್ರಿಕೋದ್ಯಮ ರಂಗದಲ್ಲಿ ಅವಕಾಶಗಳು ಹೆಚ್ಚು, ವಿದ್ಯಾರ್ಥಿಗಳು ಕೌಶಲ್ಯ ಅಭಿವೃದ್ಧಿ ಹೊಂದುವುದರ ಮೂಲಕ ಪತ್ರಿಕೋದ್ಯಮ ವೃತ್ತಿಯಲ್ಲಿ ಮುಂದುವರೆಯಬಹುದು ಎಂದರು.

ಪತ್ರಿಕೋದ್ಯಮ ಶಿಕ್ಷಣ ಗಟ್ಟಿಗೊಳಿಸಲು ಮುಂಬರುವ ದಿನಗಳಲ್ಲಿ ವಿವಿಯಲ್ಲಿ ಸುಸಜ್ಜಿತ ಸ್ಟುಡಿಯೋ ಹಾಗೂ ಅತ್ಯಾಧುನಿಕ ಉಪಕರಣಗಳನ್ನು ಒದಗಿಸುತ್ತೇವೆ ಎಂದು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

ಕುಲಸಚಿವರಾದ ರುದ್ರೇಶ್ ಎಸ್.ಎನ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಹೆಚ್ಚು ಬರೆಯಬೇಕು. ಬರೆಯುವುದರಿಂದ ಬರವಣಿಗೆಯಲ್ಲಿನ ಲೋಪದೋಷಗಳು ಮನವರಿಕೆಯಾಗುತ್ತವೆ. ಇದ–ರಿಂದ ಬರವಣಿಗೆಯ ಕೌಶಲ್ಯ ವೃದ್ಧಿಸುತ್ತದೆ. ಇದರ ಜೊತೆಗೆ ಮಾತನಾಡುವ ಕೌಶಲ್ಯವನ್ನು ಸಹ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವರದಿಗಾರ ಹರಿಶಂಕರ್ ಜಿ.ಪಾಳ್ಯ ಅವರು ಮಾತನಾಡಿ, ತನಿಖಾ ಪತ್ರಿಕೋದ್ಯಮವನ್ನು ಆಯ್ಕೆ ಮಾಡಿಕೊಳ್ಳುವವರು ನಿರ್ಭೀತಿ ಮತ್ತು ಆಮೀಷಕ್ಕೆ ತುತ್ತಾಗದಂತೆ ಕೆಲಸ ಮಾಡುವುದು ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಪತ್ರಿಕೋದ್ಯಮ ಎಂಬುದು ಹುಲಿಯ ಮೇಲಿನ ಸವಾರಿ ಇದ್ದಂತೆ. ಅಡ್ಡದಾರಿ ಹಿಡಿಯದೆ ನೈತಿಕ ಪತ್ರಿಕೋದ್ಯಮವನ್ನು ಅಂತರಾಳ ಮಾಡಿಕೊಂಡು ಕೆಲಸ ನಿರ್ವಹಿಸಿದಲ್ಲಿ ಯಾರ ಹಂಗಿಲ್ಲದೆ ಈ ಕ್ಷೇತ್ರದಲ್ಲಿ ಮುಂದುವರೆಯಬಹುದು ಎಂದು ತಿಳಿಸಿದರು.

ಬಳಿಕ ಪತ್ರಿಕೋದ್ಯಮ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ನಡೆಯಿತು.

ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥರಾದ ರಾಕೇಶ್ ವಿ.ತಾಳಿಕೋಟಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿಬ್ಬಂದಿ ಧನುಂಜಯಭಟ್ ಸ್ವಾಗತಿಸಿದರು. ಡಾ.ಜಯರಾಜ.ಹೆಚ್ ನಿರೂಪಿಸಿ ವಂದಿಸಿದರು. ಪತ್ರಿಕೋದ್ಯಮದ ವಿದ್ಯಾರ್ಥಿಗಳು ಸೇರಿದಂತೆ ವಿವಿಧ ವಿಭಾಗದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ವಿಶ್ವ ಕ್ಷಯರೋಗ ದಿನಾಚರಣೆ: ಮಾ.24 ರಂದು ಜಾಥಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.21–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಜಿಲ್ಲಾ ಕ್ಷಯ–ರೋಗ ನಿರ್ಮೂಲನಾ ಕೇಂದ್ರ ವತಿಯಿಂದ 'ವಿಶ್ವ ಕ್ಷಯ–ರೋಗ ದಿನಾಚರಣೆ–2025'ರ ಅಂಗವಾಗಿ ಸಾರ್ವಜನಿಕರಲ್ಲಿ ಕ್ಷಯರೋಗದ ಬಗ್ಗೆ ಅರಿವು ಮೂಡಿಸಲು ಮಾ.24 ರಂದು ಬೆಳಿಗ್ಗೆ 08.30 ಗಂಟೆಗೆ ನಗರದ ಕನಕದಾಸರ ವೃತ್ತದ ಕೆಎಂಎಫ್ ಮುಂಭಾಗದಲ್ಲಿ ಜನಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ.

ಜಾಥಾವು ನಗರದ ಕನಕದಾಸರ ವೃತ್ತದ ಕೆಎಂಎಫ್ ಮುಂಭಾಗದಿಂದ ಆರಂಭಗೊಂಡು ಇನ್ ಫ್ಯಾಂಟರಿ ರಸ್ತೆಯ ಮೂಲಕ ಬಳ್ಳಾರಿ ವೈದ್ಯಕೀಯ ಕಾಲೇಜ್ ಮತ್ತು ಸಂಶೋಧನಾ ಕೇಂದ್ರ (ಬಿಮ್ಸ್)ದ ಬಿಸಿ ರಾಯ್ ಸಭಾಂಗಣದವರೆಗೆ ಸಾಗಿ ಬರಲಿದೆ.

ಬಳಿಕ ಅಂದು ಬೆಳಿಗ್ಗೆ 10 ಗಂಟೆಗೆ ಬಿಮ್ಸ್ ನ ಬಿಸಿ ರಾಯ್ ಸಭಾಂಗಣದಲ್ಲಿ 2024ನೇ ಸಾಲಿಗೆ ಎಸ್‌ಟಿಇಪಿ ಕಾರ್ಯಕ್ರಮದಲ್ಲಿ ಉತ್ತಮ ಸೇವೆ ಸಲ್ಲಿಸಿದ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ ಅವರು ತಿಳಿಸಿದ್ದಾರೆ.

## ಅನಾಮಧೇಯ ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.21–ಕಂಪ್ಲಿ ಪೊಲೀಸ್ ಠಾಣೆ ವ್ಯಾಪ್ತಿಯ ಮೆಟ್ರಿ ಗ್ರಾಮದ ಹತ್ತಿರದ ಕಂಪ್ಲಿ–ಬಳ್ಳಾರಿ ರಸ್ತೆಯ ಸುಬ್ಬಮ್ಮವ್ವ ಮಠದ ಬಳಿ ಗದ್ದೆಗಳ ಹತ್ತಿರ ಮಾ.21ರಂದು ಯಾವುದೋ ವಾಹನವು ಹಿಂಬದಿಯಿಂದ ಡಿಕ್ಕಿಹೊಡೆದು, ಅಪಘಾತಪಡಿಸಿದ ಪರಿಣಾಮ ಸುಮಾರು 35–40 ವರ್ಷದ ಅನಾಮಧೇಯ ವ್ಯಕ್ತಿಯು ಸ್ಥಳದಲ್ಲಿಯೇ ಮೃತಪಟ್ಟಿದ್ದು, ಮೃತನ ವಾರಸುದಾರರು ಬಗ್ಗೆ ತಿಳಿದಿರುವುದಿಲ್ಲ. ವಾರಸುದಾರರ



ಬಗ್ಗೆ ಮಾಹಿತಿ ಇದ್ದಲ್ಲಿ ಕಂಪ್ಲಿ ಪೊಲೀಸ್ ಠಾಣೆಗೆ ಸಂಪರ್ಕಿಸಬಹುದು ಎಂದು ಪೊಲೀಸ್ ಸಬ್ ಇನ್ಸೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ.ಅಂಬೇಡ್ಕರ್,ಜಗಜೀವನ ರಾಮ್ ಜಯಂತಿ: ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ತಾಲೂಕ ಆಡಳಿತದ ವತಿಯಿಂದ 2025–26ನೇ ಸಾಲಿನಲ್ಲಿ ದಿನಾಂಕ 5–4–2025 ರಂದು ಆಚರಿಸಲಾಗುತ್ತಿರುವ ಹಸಿರು ಕ್ರಾಂತಿಯ ಹರಿಕಾರ, ಭಾರತದ ಮಾಜಿ ಪ್ರಧಾನ ಮಂತ್ರಿ ಬಾಬು ಜಗಜೀವನ ರಾಮ್ ಇವರ 118ನೇ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಿದ್ಧತಾ ಸಭೆ ದಿನಾಂಕ 27.03.2025 ರಂದು ಬೆಳಿಗ್ಗೆ 11 ಘಂಟೆಗೆ ತಾಳಿಕೋಟಿ ತಹಸಿಲ್ದಾರ್ ಕಾರ್ಯಾಲಯದಲ್ಲಿ ಹಾಗೂ ಭಾರತದ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರರ 134ನೇ ಜಯಂತಿಯನ್ನು ದಿನಾಂಕ 14–4–2025 ರಂದು ಆಚರಿಸಲಾಗುತ್ತಿದ್ದು ಇದರ ಪೂರ್ವಭಾವಿ ಸಿದ್ಧತಾ ಸಭೆ ದಿನಾಂಕ 28.03.2025 ರಂದು ಬೆಳಿಗ್ಗೆ 11 ಗಂಟೆಗೆ ತಾಳಿಕೋಟಿ ತಹಸಿಲ್ದಾರ್ ಕಾರ್ಯಾಲಯದಲ್ಲಿ ನಡೆಯಲಿದ್ದು ಈ ಇಬ್ಬರೂ ಮಹಾನ್ ರಾಷ್ಟ್ರ ನಾಯಕರ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯಲ್ಲಿ ಆಯಾ ಸಮಾಜದ ಮುಖಂಡರು, ಹಿರಿಯರು, ಗಣ್ಯರು ಹಾಗೂ ಸಾರ್ವಜನಿಕರು ಸರಿಯಾದ ಸಮಯಕ್ಕೆ ಭಾಗವಹಿಸಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಬೇಕು ಎಂದು ತಹಶೀಲ್ದಾರ್ ಕಾರ್ಯಲಯದ ಪ್ರಕಟಣೆ ತಿಳಿಸಿದೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:
9448604450

## ಪ್ರವಾಸೋದ್ಯಮ ಇಲಾಖೆ: ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಬಳ್ಳಾರಿ,ಮಾ.2–ಪ್ರವಾಸೋದ್ಯಮ ಇಲಾಖೆಯಿಂದ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರದಲ್ಲಿ 2ನೇ ಹಂತದಲ್ಲಿ ವಿವಿಧ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ವಿವರ:

ಆಹಾರ ಮತ್ತು ಪಾನೀಯ ಸೇವಾ ವ್ಯವಸ್ಥಾಪಕ: ಎಸ್‌ಎಸ್‌ಎಲ್‌ಸಿ ವಿದ್ಯಾರ್ಹತೆ ಹೊಂದಿರಬೇಕು. 20 ರಿಂದ 45 ವರ್ಷದೊಳಗಿನವರಾಗಿರಬೇಕು. (ನಾಲ್ಕು ತಿಂಗಳ ಅವಧಿ).

ಬಹು ವಿಧದ ಅಡುಗೆಯವರು: 8ನೇ ತರಗತಿ ಉತ್ತೀರ್ಣರಾಗಿರಬೇಕು. 20 ರಿಂದ 45 ವರ್ಷದೊಳಗಿನವರಾಗಿರಬೇಕು. (ಐದು ತಿಂಗಳ ಅವಧಿ).

ಅರ್ಜಿಗಳನ್ನು ಕಮಲಾಪುರದ ಲೋಟಸ್ ಮಹಲ್ ಹತ್ತಿರದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿ ಏ.03 ರೊಳಗಾಗಿ ಇದೇ ಕಚೇರಿಗೆ ಸಲ್ಲಿಸಬೇಕು.

ಈಗಾಗಲೇ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ರಾಜ್ಯದ ವಿವಿಧ ಪಂಚತಾರಾ ಹಾಗೂ ಇತರೆ ಹೋಟೆಲ್ ಗಳಲ್ಲಿ ಉದ್ಯೋಗ ಖಾತ–ರಿಯಾಗಿದೆ.

ತರಬೇತಿ ಪಡೆಯುವ ವೇಳೆ ರೂ.2000/– ರಂತೆ ಮಾಹೆಯಾನ ಸ್ಟೈಫಂಡ್ ನೀಡಲಾಗುವುದು. ತರಬೇತಿಗೆ ಹಾಜರಾಗುವವರಿಗೆ ವಸತಿ, ಊಟೋಪಚಾರ ಹಾಗೂ ಸಮವಸ್ತ್ರ ನೀಡಲಾಗುವುದು. ತರಗತಿಯ ತರಬೇತಿ ಜೊತೆಗೆ ರಾಜ್ಯದ ವಿವಿಧ ಪಂಚತಾರಾ ಹಾಗೂ ಇತರೆ ಹೋಟೆಲ್ ಗಳಲ್ಲಿ ಉದ್ಯೋಗ ತರಬೇತಿ ಸಹ ನೀಡಲಾಗುವುದು.

ಐಹೆಚ್‌ಎಂ ಬೆಂಗಳೂರು ಮತ್ತು ಎಫ್‌ಸಿಐ ಮೈಸೂರು ಸಂಸ್ಥೆಗಳು ಪ್ರತಿಷ್ಠಿತ ಅತಿಥ್ಯ ಕ್ಷೇತ್ರದಲ್ಲಿ ತರಬೇತಿ ನೀಡುವ ಕೇಂದ್ರ ಹಾಗೂ ರಾಜ್ಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾಗಿದ್ದು ಈ ಸಂಸ್ಥೆಗಳಿಂದ ತರಬೇತಿ ನೀಡಿ ಪ್ರಮಾಣ ಪತ್ರಗಳನ್ನು ನೀಡುವುದರಿಂದ ರಾಜ್ಯದೊಳಗೆ ಅಲ್ಲದೇ ದೇಶದ ಯಾವುದೇ ಭಾಗದ ಹೋಟೆಲ್ ಉದ್ಯಮದಲ್ಲಿ ಕೆಲಸ ಖಾತರಿಯಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಮಲಾಪುರದ ಲೋಟಸ್ ಮಹಲ್ ಹತ್ತಿರದ ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಕಚೇರಿ ಅಥವಾ ದೂ.08394–295640 ಗೆ ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಡಾರ–ರೂಬೆಲ್ಲಾ ಲಸಿಕೆ ಹಾಕಿಸಿ: ಡಾ.ಹನುಮಂತಪ್ಪ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.21–ನಿರ್ಲಕ್ಷಿಸಿದರೆ ಅಪಾಯಕಾರಿಯಾಗುವ ದಡಾರವನ್ನು ತಡೆಯಲು ಮಗುವಿನ ವಯಸ್ಸು ಒಂಬತ್ತು ತಿಂಗಳು ತುಂಬಿದ ನಂತರ ತಪ್ಪದೇ ದಡಾರ–ರೂಬೆಲ್ಲಾ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್‌ನ ಮಾರ್ಗದರ್ಶನದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಜಿಲ್ಲಾಯಾದ್ಯಂತ ದಡಾರ ಪ್ರಕರಣಗಳು ಈ ಪೂರ್ವದಲ್ಲಿ ವರದಿಯಾದ ಗ್ರಾಮ, ಬಡಾವಣೆಗಳನ್ನು ಗುರಿಯವಾಗಿಟ್ಟುಕೊಂಡು ವಿಶೇಷ ಲಸಿಕಾ ಅಭಿಯಾನ ಹಮ್ಮಿಕೊಂಡ ಹಿನ್ನಲೆಯಲ್ಲಿ ನಗರದ ಗುಗ್ಗರಹಟ್ಟಿ, ಕಾರ್ಕಲತೋಟ ಕೌಲ್‌ಬಜಾರ್, ಆಶ್ರಯ ಕಾಲೋನಿಗಳಲ್ಲಿ ಲಸಿಕಾ ಕಾರ್ಯ ಪರಿಶೀಲಿಸಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಬೇಸಿಗೆಯಲ್ಲಿ ಬೆವರುಸಾಲೆಯಿಂದ ದೇಹದ ಮೇಲೆ ನುಚ್ಚುಗುಳ್ಳೆಗಳು ಕಂಡು ಬರುವುದು ಸಹಜವಾಗಿದ್ದು, ಇದೇ ರೀತಿ ಕಂಡು ಬರುವ ದಡಾರ ಸೋಂಕು ಹರಡುವ ಮೈತುಂಬಾ ನುಚ್ಚುಗುಳ್ಳೆಗಳ ಹಾಗೂ ಅಂತಹ ಮಕ್ಕಳಿಗೆ ಕೆಮ್ಮು, ಜ್ವರ, ಮೂಗಿನಿಂದ ಸುರಿಯುವುದು ಕಂಡು ಬಂದು ಆರೋಗ್ಯದಲ್ಲಿ ಗಂಭೀರ ಪರಿಣಾಮ ಉಂಟಾಗಬಹುದು. ಮುಂಜಾಗೃತೆಗಾಗಿ ಮಕ್ಕಳಿಗೆ ದಡಾರ–ರೂಬೆಲ್ಲಾ ಲಸಿಕೆ ಹಾಕಿಸಬೇಕು ಎಂದು ತಿಳಿಸಿದರು.

ಸಮುದಾಯದಲ್ಲಿ ಅಮ್ಮ, ತಟ್ಟು ಎಂದು ಕರೆಯಲ್ಪಡುವ ದಡಾರ ರೋಗವು ವೈರಸ್‌ನಿಂದ ಹರಡುತ್ತದೆ. ಸೋಂಕು ಹೊಂದಿದ ವ್ಯಕ್ತಿಯಿಂದ ವ್ಯಕ್ತಿ ಸಂಪರ್ಕದ ಮೂಲಕ ಕೆಮ್ಮು ಮತ್ತು ಸೀನುವಿಕೆಯಿಂದ ಇನ್ನೊಬ್ಬರಿಗೆ ಹರಡುತ್ತದೆ. ರೋಗವನ್ನು ನಿರ್ಲಕ್ಷಿಸಿದಲ್ಲಿ ಮಾರಣಾಂತಿಕವಾಗಬಹುದು. ಹಾಗಾಗಿ ಸಾರ್ವಜನಿಕರು ತಮ್ಮ ಮಕ್ಕಳಿಗೆ 9 ತಿಂಗಳು ತುಂಬಿದ ನಂತರ ಹಾಗೂ ಒಂದುವರೆ ವರ್ಷದ ಅವಧಿಯಲ್ಲಿ ತಪ್ಪದೆ ಲಸಿಕೆ ಹಾಕಿಸಿ ಎಂದು ವಿನಂತಿಸಿದರು.

ವಿಶ್ವ ಆರೋಗ್ಯ ಸಂಸ್ಥೆಯ ಸರ್ವೇಕ್ಷಣಾ ವೈದ್ಯಾಧಿಕಾರಿ ಡಾ.ಆರ್.ಎಸ್ ಶ್ರೀಧರ ಅವರು ಮಾತನಾಡಿ, ದಡಾರ ಸೋಂಕಿತ ವ್ಯಕ್ತಿಗೆ ಸುಮಾರು 10 ದಿನಗಳ ನಂತರ ದಡಾರದ ಲಕ್ಷಣಗಳು ಸಾಮಾನ್ಯವಾಗಿ ಕಾಣಿಸಿಕೊಳ್ಳುತ್ತವೆ. ದಡಾರದ ಅತ್ಯಂತ ಪ್ರಮುಖ ಲಕ್ಷಣವೆಂದರೆ ಕೆಂಪು ಬಣ್ಣದ ದದ್ದು (ಗುಳ್ಳೆ), ಆದರೆ ಇದು ಸಾಮಾನ್ಯವಾಗಿ ಮೊದಲ ಲಕ್ಷಣವಲ್ಲ. ದಡಾರವು ಸಾಮಾನ್ಯವಾಗಿ ಜ್ವರ ತರಹದ ಕಾಯಿಲೆಯಾಗಿ ಪ್ರಾರಂಭವಾಗುತ್ತದೆ. 2 ರಿಂದ 4 ದಿನಗಳವರೆಗೆ ಇರುತ್ತದೆ ಎಂದು ತಿಳಿಸಿದರು.

ಲಕ್ಷಣಗಳು:

ಜ್ವರ, ಆಯಾಸ, ತೀವ್ರ ಕೆಮ್ಮು, ಕಾಂಜಂಕ್ಟಿವಿಟಿಸ್ (ಕೆಂಪು ಕಣ್ಣುಗಳು), ಸ್ರವಿಸುವ ಮೂಗು, ಬಾಯಿಯಲ್ಲಿ ಬಿಳಿ ಚುಕ್ಕೆಗಳು (ಕೊಪ್ಲಿಕ್ ಚುಕ್ಕೆಗಳು ಎಂದು ಕರೆಯಲಾಗುತ್ತದೆ) ಇವು ಅನಾರೋಗ್ಯದ 3 ರಿಂದ 7 ದಿನಗಳಲ್ಲಿ ದದ್ದು ಕಾಣಿಸಿಕೊಳ್ಳುತ್ತದೆ. ಇದು ಸಾಮಾನ್ಯವಾಗಿ ಕೆಂಪು ಮತ್ತು ಮಚ್ಚೆಯಿಂದ ಕೂಡಿರುತ್ತದೆ, ಆದರೆ ತುರಿಕೆ ಇರುವುದಿಲ್ಲ ಎಂದು ಅವರು ವಿವರಿಸಿದರು.

ದಡಾರದ ದದ್ದು ಸಾಮಾನ್ಯವಾಗಿ ತಲೆಯ ಮೇಲೆ ಪ್ರಾರಂಭವಾಗುತ್ತದೆ ಮತ್ತು ನಂತರ ದೇಹದ ಉಳಿದ ಭಾಗಗಳಿಗೆ ಹರಡುತ್ತದೆ. ಇದು ಸಾಮಾನ್ಯವಾಗಿ 4 ರಿಂದ 7 ದಿನಗಳವರೆಗೆ ಇರುತ್ತದೆ. ಒಂದು ವೇಳೆ ನಿರ್ಲಕ್ಷಿಸಿದರೆ ವಾಂತಿ–ಭೇದಿ, ನ್ಯೂಮೋನಿಯಾ ಉಂಟಾಗಿ ಮಗು ಮರಣ ಸಹ ಹೊಂದಬಹುದು. ಈ ಹಿನ್ನಲೆಯಲ್ಲಿ ಪ್ರಸ್ತುತ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಹೆಚ್ಚುವರಿಯಾಗಿ ಒಂದು ಡೋಸ್ ಲಸಿಕೆ ಹಾಗೂ ಇದರೊಂದಿಗೆ ವಿಟಾಮಿನ್–ಎ ಅನ್ನಾಂಗ ದ್ರಾವಣ ಸಹ ನೀಡಲಾಗುತ್ತಿದ್ದು, ತಪ್ಪದೇ ಹಾಕಿಸಬೇಖು ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ.ಕಾಶಿಪ್ರಸಾದ್, ಡಾ.ಶಗುಪ್ತಾ ಶಾಹೀನ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಮಂಜುಳಾ, ನಾಗಲಕ್ಷ್ಮೀ ಜ್ಯೋತಿ, ಆರೋಗ್ಯ ನಿರೀಕ್ಷಣಾಧಿಕಾರಿ ಈರಯ್ಯ, ಮುದಸ್ಸೀರ್ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

## ಇಫ್ತಾರ್ ಕೂಟಗಳು ಸಾಮರಸ್ಯದ ಪ್ರತೀಕ: ಹಿರೇಮಠ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪವಿತ್ರ ರಮಜಾನ್ ಮಾಸದಲ್ಲಿ ಮುಸ್ಲಿಂ ಬಾಂಧವರು ಎಲ್ಲ ಸಮಾಜದವರನ್ನು ಜೊತೆ ಗೂಡಿಸಿಕೊಂಡು ನಡೆಸುವ ಇಂತಹ ಸೌಹಾರ್ದ ಇಫ್ತಾರ್ ಕಾರ್ಯಕ್ರಮಗಳಿಂದ ಸಮಾಜದಲ್ಲಿ ಸಾಮರಸ್ಯ ಇನ್ನಷ್ಟು ಬೆಳೆಯುತ್ತದೆ ಎಂದು ವಿವಿ ಸಂಘದ ಅಧ್ಯಕ್ಷ ವಿರುಪಾಕ್ಷಯ್ಯ ಹಿರೇಮಠ ಅಭಿಪ್ರಾಯಪಟ್ಟರು. ಪಟ್ಟಣದ ಬಾವಾಪ್ಯಾರೆ ಬಡಾವಣೆಯಲ್ಲಿ ಗುರುವಾರ ಸಂಜೆ ಪುರಸಭೆ ಮಾಜಿ ಉಪಾಧ್ಯಕ್ಷ ಗೈಬೂಶಾ ಮಕಾಂದಾರ ಇವರು ಹಮ್ಮಿಕೊಂಡ ಸೌಹಾರ್ದ



ಇಫ್ತಾರ ಕೂಟದಲ್ಲಿ ಭಾಗವಹಿಸಿ ಅವರು ಮಾತನಾಡಿ ಹಿರಿಯ ಮುಖಂಡರಾದ ಗೈಬೂಶಾ ಮಕಾಂದಾರ ಅವರು ಪಟ್ಟಣದ ಎಲ್ಲ ಸಮಾಜದವರೊಂದಿಗೆ ಅನೂನ್ಯವಾದ ಸಂಬಂಧಗಳನ್ನು ಹೊಂದಿದವರಾಗಿದ್ದಾರೆ ಅವರು ಒಂದು ಸಣ್ಣ ಕಾರ್ಯಕ್ರಮ ಮಾಡಿದರೂ ಎಲ್ಲರನ್ನು ಪ್ರೀತಿಯಿಂದ ಕರೆದು ಅತಿಥಿ ಸತ್ಕಾರ ನೀಡುತ್ತಾರೆ. ರಮಜಾನ್ ಮಾಸದ ಈ ಪವಿತ್ರ ಸಂದರ್ಭದಲ್ಲಿ ನನಗೆ ಆಮಂತ್ರ ನೀಡಿರುವುದಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ ಸಾನಿಧ್ಯ ವಹಿಸಿದ್ದರು. ಇಫ್ತಾರ ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ದಶರಥಸಿಂಗ್ ಮನಗೂಳಿ, ಗನಿಸಾಬ ಲಾಹೋರಿ, ಪ್ರಭುಗೌಡ ಮದರಕಲ್, ಶರ–ಣಗೌಡ ದೊಡ್ಡಮನಿ, ರಾಜು ಹಯ್ಯಾಳ, ಈದಗಾ ಸಮಿತಿ ಮಾಜಿ ಅಧ್ಯಕ್ಷ ಮಸೂಮಸಾಬ ಕೆಂಭಾವಿ, ರೋಶನ್ ಡೋಣಿ, ಚನ್ನಬಸ್ಸು ಕಟ್ಟಿಮನಿ, ಅಬ್ದುಲ್ ಸತ್ತಾರ ಅವಟಿ, ರಾಜ ಅಹ್ಮದ್ ಒಂಟಿ, ಸಿಕಂದರ ವಠಾರ, ನಿರಂಜನಶಾ ಮಕಾಂದಾರ, ನಬಿ ಹುಣಶ್ಯಾಳ, ಮಶಾಕ್‌ಚೋರಗಸ್ತಿ, ಆರೀಫ್ ಹೊನ್ನೂಟಗಿ, ಚಾಂದ ಸಾ ಲಾಹೋರಿ, ಮಂಜೂರ ಬೇಪಾರಿ, ಗೌಸ್‌ನಾಸೀರ, ಫೈರೋಜ ತಾಳಿಕೋಟಿ, ಬುಡ್ಡಾಜನಾಬ ಮಕಾಂದಾರ, ಮುರ್ತುಜಾ ಮಕಾಂದಾರ(ಹುನಗುಂದ), ಸಲೀಂ ಗೈಬೂಶಾಮಕಾಂದಾರ, ಹುಸೇನ್ ಕೆಂಭಾವಿ ಮತ್ತಿತರು ಇದ್ದರು.

# ಮಾ.23 ರಂದು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.21-ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-2ರ ವ್ಯಾಪ್ತಿಗೆ ಬರುವ ವಿದ್ಯುತ್ ಉಪ-ಕೇಂದ್ರದ ನಿರ್ವಹಣೆ ಕಾರ್ಯಕೈಗೊಳ್ಳುತ್ತಿರುವುರಿಂದ ಮಾ.23 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 04 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಎಫ್-1 ವ್ಯಾಪ್ತಿಯ ಕಪ್ಪಗಲ್ಲು ರಸ್ತೆ,ಸಿದ್ದಾರ್ಥ ನಗರ ಕಾಲೋನಿ, ಹೌಸಿಂಗ್ ಬೋರ್ಡ್,ಬೀಚಿನಗರ, ಕೆಇಬಿ ಕ್ವಾರ್ಟಸ್, ಭಗತ್ ಸಿಂಗ್ ನಗರ, ಹೆಚ್‌ಡಿಎಫ್‌ಸಿ ಬ್ಯಾಂಕ್,ಎಸಿ ಸ್ಟ್ರೀಟ್,ಬಾಲಾಜಿ ನರ್ಸಿಂಗ್ ಹೋಮ್, ಲಾ ಕಾಲೇಜು,ಮುಲ್ಲಂಗಿ ಲೇಔಟ್, ಕನಕದುರ್ಗ ಲೇಔಟ್. ಎಫ್-2 ವ್ಯಾಪ್ತಿಯ ಗಾಂಧಿನಗರ, ಬಿ.ಎಸ್.ಕಾಂಪೌಂಡ್,ರ್ರಿತಾತ ನಗರ,ಸೆಂಟ್ರಲ್‌ಜೈಲ್,ಪಾರ್ವತಿ ನಗರ, ಮಾರುತಿ ಕಾಲೋನಿ, ಮೋಕ ರಸ್ತೆ, ಸೊಂತಲಿಂಗಣ್ಣ ಕಾಲೋನಿ, ರೈಲ್ವೆ ಸ್ಟೇಷನ್, ಎಸ್.ಪಿ.ಬಂಗ್ಲೆ, ಮಹಿಳಾ ಕಾಲೇಜು ರಸ್ತೆ, ಗಾಂಧಿನಗರ, ಸೂರ್ಯ ಕಾಲೋನಿ.

ಎಫ್-4 ವ್ಯಾಪ್ತಿಯ ಆಟೋ ನಗರ,ಎಸ್.ಆರ್.ಎಮ್ ಲೇಔಟ್, ಕನಕದಾಸ್ ನಗರ,ಕೆ.ಎ.ಐ.ಡಿ,ಬಿ ಕೈಗಾರಿಕಾ ಪ್ರದೇಶ. ಎಫ್-6 ವ್ಯಾಪ್ತಿಯ ತಾಳೂರು ರೋಡ್, ಸ್ನೇಹ ಕಾಲೋನಿ, ಶ್ರೀನಗರ, ರೇಣುಕಾ ನಗರ, ಭಗತ್‌ಸಿಂಗ್ ನಗರ,ಕನ್ನಡ ನಗರ,ಮಹಾನಂದಿ ಕೊಟ್ಟಂ, ಪಾರ್ವತಿ ನಗರ, ಎಸ್.ಪಿ.ಸರ್ಕಲ್, ಶಾಸ್ತ್ರೀ ನಗರ, ಬ್ಯಾಂಕ್ ಕಾಲೋನಿ, ಬಸವನಕುಂಟೆ, ಸಿರುಗುಪ್ಪ ರೋಡ್, ರಾಮ ನಗರ, ಅವಂಬಾವಿ. ಶ್ರೀಧರಗಡ್ಡ.

ಎಫ್-7 ವ್ಯಾಪ್ತಿಯ ಸಂಗನಕಲ್ಲು ರಸ್ತೆ, ಎಸ್.ಎನ್.ಪೇಟ್ 3ನೇ ಕ್ರಾಸ್, ಜಿಲ್ಲಾ ಆಸ್ಪತ್ರೆ, ರಾಘವ ಕಲಾ ಮಂದಿರ, ಅನಂತಪುರ ರಸ್ತೆ, ವಡ್ಡರ ಬಂಡ್ಡೆ, ಅಗಡಿ ಮಾರೆಪ್ಪ ಕಾಂಪೌಂಡ್, ರೂಪನಗುಡಿರಸ್ತೆ,ಮುಬರಕ್‌ಟಾಕೀಶ್, ಬಾಲಾಜಿರಾವ್‌ರಸ್ತೆ, ಕೆ.ಸಿ. ರೋಡ್, ಮೀನಾಕ್ಷಿ ಸರ್ಕಲ್, ಬೆಂಗಳೂರು ರಸ್ತೆ, ದುಗ್ಗಪ್ಪ ಬೀದಿ, ರೆಡ್ಡಿ ಬೀದಿ, ಅಲ್ಲಂ ಬೀದಿ, ಮುಲ್ಲಂಗಿ ಸಂಜೀವಪ್ಪ ಬೀದಿ, ರೂಪನಗುಡಿ ನರಪ್ಪ ಬೀದಿ, ತಾಯಮ್ಮಕಟ್ಟೆ.

ಎಫ್-8 ವ್ಯಾಪ್ತಿಯ ಬಸವೇಶ್ವರ ನಗರ,ಎಂ.ಆರ್.ವಿ. ಲೇಔಟ್, ಸದ್ಗುರುಕಾಲೋನಿ,ರೇಣುಕಾಚಾರ್ಯ ನಗರ,ಅಲ್ಲಂ ಲೇಔಟ್,ಬಿ.ಎಂ. ಎಸ್. ಲೇಔಟ್, ತಿರುಮಲ ಲೇಔಟ್, ಹರಿಪ್ರಿಯ ನಗರ, ಸುಷ್ಮಸ್ವರಾಜ್ ಕಾಲೋನಿ.

ಎಫ್-9 ನೆಹರು ಕಾಲೋನಿ, 1ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ, ಶಂಕರ್ ಕಾಲೋನಿ, ಎಸ್. ಎನ್.ಪೇಟೆ6ನೇ,5ನೇಮತ್ತು4ನೇ, 3ನೇ ಅಡ್ಡರಸ್ತೆ,ಡಿಆರ್‌ಗ್ರೌಂಡ್, ಕೂಲ್‌ಕಾರ್ನರ್, ಡಬಲ್ ರಸ್ತೆ, ಕೋಲಾಂಚಾಲಂ ಕೌಪೌಂಡ್, ರಾಯಲ್ ಸರ್ಕಲ್, ಗಾಂಧಿ ಭವನ, ಸಿಎಂಸಿ, ಅಂಬಲಿ ಬಾಗ್,ತಾಲ್ಲೂಕ್‌ಅಫೀಸ್,ಡಿಸಿ ಅಫೀಸ್. ಎಫ್-10 ವ್ಯಾಪ್ತಿಯ ವಾಟರ್ ಬೂಸ್ಟರ್, ಮೋಕ ವಾಟರ್ ವರ್ಕ್ಸ್. ಎಫ್-10 ವ್ಯಾಪ್ತಿಯ ಅಶೋಕ್ ನಗರ. ಎಫ್-11ನ ಕೈಗಾರಿಕಾ ಪ್ರದೇಶ (ಇಂಡಸ್ಟ್ರಿಯಲ್ ಏರಿಯಾ).

ಎಫ್-12 ವ್ಯಾಪ್ತಿಯ ನಿಜಲಿಂಗಪ್ಪ ಕಾಲೋನಿ, ಲಲಿತಾ ಲೇಔಟ್, ಗೊಲ್ಲರ ನರಸಪ್ಪ ಕಾಲೋನಿ, ರಾಘವೇಂದ್ರಕಾಲೋನಿ 2ನೇ ಹಂತ, ದೀಪಕ್ ಕಾಲೋನಿ, ಕೆವಿಟಿನಗರ,ವೆಂಕಟೇಶ್ವರನಗರ, ಅನಂತಪುರ ರಸ್ತೆ, ಶೇಕ್ಷಾವಲ್ಲಿ ದುರ್ಗಾ, ಕುಬೇರ ಲೇಔಟ್.

ಎಫ್-13 ವ್ಯಾಪ್ತಿಯ ದೇವಿನಗರ, ಸಿರುಗುಪ್ಪಾ ರಸ್ತೆ, ಇಂದಿರನಗರ,ಸಂಜಯನಗರ, ಶಿವಲಿಂಗನಗರ,ಶಾಸ್ತ್ರೀನಗರ, ಬಸವನಕುಂಟೆ,ಎಂ.ಕೆ.ನಗರ, ಹವಂಬಾವಿ,ಅಶೋಕ ನಗರ, ಶ್ರೀನಿವಾಸ ನಗರ, ಕುರಿಹಟ್ಟಿ, ಎಸ್.ಪಿ.ಸರ್ಕಲ್,ವೀರಣ್ಣಗೌಡ ನಗರ,ರಾಜೇಶ್ವರಿ ನಗರ,ಕೆ.ಎಂ. ಎಫ್,ಭುವನಗಿರಿ ಕಾಲೋನಿ, ಎಸ್.ಎಲ್.ವಿ ಕಾಲೋನಿ, ಶಿವಗಿರಿ ಕಾಲೋನಿ,ರಾಮನಗರ, ಶ್ರೀನಿವಾಸ ನಗರ, ಸೂರ್ಯ ಕಾಲೋನಿ.

ಎಫ್-14 ವ್ಯಾಪ್ತಿಯ ಗಣೇಶ ಕಾಲೋನಿ, ಸಿದ್ಧಿಕಾಲೋನಿ, ಗೊಲ್ಲನರಸಪ್ಪ ಕಾಲೋನಿ, ಎಂಎಂಟಿಸಿ ಕಾಲೋನಿ, ಮಾರುತಿ ನಗರ, ಹುಸೇನ ನಗರ, ರಾಮಯ್ಯ ಕಾಲೋನಿ, ರಾಘವೇಂದ್ರ ಕಾಲೋನಿ 1ನೇ ಹಂತ, ಅನಂತಪುರ ರಸ್ತೆ, ಪಟೇಲ್ ನಗರ, ಹದ್ದಿನಗುಂಡು ರಸ್ತೆ, ಎಸ್.ಎನ್.ಪೇಟೆ 1ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ, ವಿಶಾಲ ನಗರ, ದತ್ತಸಾಯಿ ನಗರ, ಹನುಮಾನ್ ನಗರ, ಎಚ್.ಎಲ್.ಸಿ.ಕಾಲೋನಿ.

ಎಫ್-15 ವ್ಯಾಪ್ತಿಯ ವಾಜಪೇಯಿ ಲೇಔಟ್, ಕನಕ ದುರ್ಗಮ್ಮ ಬಡಾವಣೆ,ಬೃಂದಾವನ ಕಾಲೋನಿ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ ಪರೀಕ್ಷೆ : 364 ವಿದ್ಯಾರ್ಥಿಗಳು ಗೈರು ಪರೀಕ್ಷಾ ಕೇಂದ್ರಕ್ಕೆ ಡಿಸಿ, ಸಿಇಓ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.21-ಜಿಲ್ಲೆಯಲ್ಲಿ ಶುಕ್ರವಾರ ಆರಂಭವಾದ ಎಸ್.ಎಸ್.ಎಲ್.ಸಿ ಕನ್ನಡ ವಿಷಯದ ಪರೀಕ್ಷೆ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹಾಗೂ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಜಿಲ್ಲಾಧಿಕಾರಿ ಜಾನಕಿ ಅವರು ನವನಗರದ ಅಂಜುಮನ್ ಪ್ರೌಢಶಾಲೆಯಲ್ಲಿನ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿ ಪರೀಕ್ಷೆ ಸುಸೂತ್ರವಾಗಿ ನಡೆದ ಬಗ್ಗೆ ಪರಿಶೀಲಿಸಿದರೆ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ನವನಗರದ ಅಂಜುಮನ್ ಹಾಗೂ ಆದರ್ಶ ವಿದ್ಯಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದಕ್ಕೂ ಪೂರ್ವದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಕಚೇರಿಯಲ್ಲಿ ಸ್ಥಾಪಿಸಲಾದ ಪರೀಕ್ಷಾ ವೆಬ್ ಕಾಸ್ಟಿಂಗ್ ಕೇಂದ್ರಕ್ಕೆ ಭೇಟಿ ನೀಡಿದ ಡಿಸಿ ಜಾನಕಿ ಅವರು ಕೇಂದ್ರಕ್ಕೆ ನೇಮಿಸಲಾದ ಅಧಿಕಾರಿ ಹಾಗೂ ಸಿಬ್ಬಂದಿಗಳು ಪರೀಕ್ಷಾ ಕೇಂದ್ರಗಳ ಮೇಲೆ ನಿಗಾವಹಿಸಲು ಸೂಚಿಸಿದರೆ, ಜಿ.ಪಂ ಸಿಇಓ ಅವರು ವೆಬ್‌ಕಾಸ್ಟಿಂಗ್ ಕೇಂದ್ರದಲ್ಲಿ ಕಡಿಮೆ ಸಿಬ್ಬಂದಿಗಳು ಇರುವದನ್ನು ಕಂಡು ಹೆಚ್ಚಿನ ಸಿಬ್ಬಂದಿ ನಿಯೋಜಿಸಿ ಪರೀಕ್ಷಾ ಕೇಂದ್ರದಲ್ಲಿ ನಕಲು ನಡೆಯದಂತೆ ಕ್ರಮವಹಿಸಲು ಸೂಚಿಸಿದರು.

ಶುಕ್ರವಾರ ನಡೆದ ಕನ್ನಡ ವಿಷಯದ ಪರೀಕ್ಷೆಗೆ 31366 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ 31002 ವಿದ್ಯಾರ್ಥಿಗಳು ಹಾಜರಾಗಿ 364 ಜನ ಗೈರು ಹಾಜರಾಗಿರುತ್ತಾರೆ. ಒಟ್ಟು 94 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು, ಈ ಪರೀಕ್ಷೆಯಲ್ಲಿ ಯಾವುದೇ ವಿದ್ಯಾರ್ಥಿ ಡಿಬಾರ್ ಆಗಿರುವದಿಲ್ಲವೆಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ವಿವೇಕಾನಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಜಾಪ ಲೋಕಾಪೂರ ವಲಯ ಘಟಕಕ್ಕೆ ರೇಖಾ ನರಹಟ್ಟಿ ಅಧ್ಯಕ್ಷರಾಗಿ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.21-ಕನ್ನಡ ಜಾನಪದ ಪರಿಷತ್ತಿನ ಮುಧೋಳ ತಾಲೂಕಿನ ಲೋಕಾಪೂರ ವಲಯ ಘಟಕಕ್ಕೆ ರೇಖಾ ಎಸ್.ನರಹಟ್ಟಿ ಅವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.

ಕಜಾಪ ಜಿಲ್ಲಾ ಅಧ್ಯಕ್ಷ ಡಿ.ಎಂ.ಸಾವಕಾರ ಈ ನೇಮಕಾತಿ ಮಾಡಿದ್ದು, ಜಾನಪದ ಕಲಾವಿದರು, ಆಸಕ್ತರನ್ನು ಘಟಕಕ್ಕೆ ಪದಾಧಿಕಾರಿಗಳನ್ನಾಗಿ ನೇಮಕ ಮಾಡಿಕೊಂಡು ಜಾನಪದ ಕಲೆಯ ಬೆಳವಣಿಗೆಗೆ ಹಾಗೂ ಕಲಾವಿದರ ನೋವು, ನಲಿವಿಗೆ ಸ್ಪಂದಿಸಿ ಸಹಾಯ ಸಹಕಾರ ನೀಡುವ ಕೆಲಸವನ್ನು ಮಾಡುವಂತೆ ನೂತನ ಅಧ್ಯಕ್ಷರಿಗೆ ಸೂಚಿಸಿದ್ದಾರೆ.

ವಲಯ ಘಟಕಕ್ಕೆ ಅಧ್ಯಕ್ಷರಾಗಿ ನೇಮಕಗೊಂಡ ರೇಖಾ ನರಹಟ್ಟಿ ಅವರನ್ನು ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಸನ್ಮಾನಿಸಿದರು.

# ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಬೇಕು-ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.21-ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಬೇಕು' ಎಂದು ಶಿಕ್ಷಕಿ ಎಸ್.ಎಸ್.ಬಿರಾದಾರ ಹೇಳಿದರು.

ತಾಲೂಕಿನ ಕಲಾದಗಿ ಗ್ರಾಮದ ಸರ್ಕಾರಿ ಕನ್ನಡ ಗಂಡು ಮಕ್ಕಳ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಾಂಸ್ಕೃತಿಕ,ಕ್ರೀಡಾ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪುಸ್ತಕದ ವಿದ್ಯೆಯನ್ನು ಮಸ್ತಕಕ್ಕೆ ತುಂಬಿಕೊಂಡು ತಮ್ಮ ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಮುಖ್ಯಶಿಕ್ಷಕ ಸಿ.ಎಲ್.ಹೂಗಾರ, ಇಂದಿನ ಕಲಿಕೆ ಅತ್ಯಂತ ಸರಳ ಹಾಗೂ ಸುಲಭವಾಗಿದೆ. ವಿದ್ಯಾರ್ಥಿಗಳು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ,ಪ್ರಮಾಣ ಪತ್ರ ವಿತರಿಸಲಾಯಿತು. ಶಿಕ್ಷಕಿಂ-ಯರಾದ ಎಂ.ಬಿ.ಪ್ಯಾಟಿಶೆಟ್ಟರ, ಎಸ್.ವಿ.ಕೋಣಪ್ಪನವರ, ಎ.ಬಿ.ಗುರುವಿನ,ನಜ್ಮಾವುನ್ನಿಸಾ ಮೈಸೂರ, ಅತಿಥಿ ಶಿಕ್ಷಕ ಎನ್.ಆರ್.ಬಾವಾಖಾನ ಇದ್ದರು.

# ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.21-ಬಾಗಲಕೋಟೆ ವಿಭಾಗ ವ್ಯಾಪ್ತಿಯ ವಿವಿಧ 110 ಕೆವಿ ಮತ್ತು 33 ಕೆವಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 4ನೇ ತ್ರೈಮಾಸಿಕ ನಿರ್ವಹಣೆ ಕೈಗೊಳ್ಳುವ ಪ್ರಯುಕ್ತ ಮಾರ್ಚ 23 ರಂದು ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ಸರಬರಾಜುವಿನಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಬಾಗಲಕೋಟೆ ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

110 ಕೆವಿ ಕೇಂದ್ರಗಳಾದ ಬಾಗಲಕೋಟೆ, ನವನಗರ, ನವನಗರ-1, ಯುನಿಟ್-2, ಶಿಗಿಕೇರಿ, ಕೈನಕಟ್ಟಿ, ಹೆಬ್ಬಳ್ಳಿ, ಬಾದಾಮಿ, ಗುಳೇದಗುಡ್ಡ, ಬೆನಕಟ್ಟಿ, ಕಲಾದಗಿ ಹಾಗೂ ನಾಗರಾಳ, 33 ಕೆವಿ ವಿದ್ಯುತ್ ಕೇಂದ್ರಗಳಾದ ಶಿರೂರ,ಕಮತಗಿ, ಬಂಟನೂರ,110 ಕೆವಿ ಇ.ಎಚ್.ಟಿ, ಐಪಿಪಿ ಗ್ರಾಹಕರಾದ ಹೆರಕಲ್ ಎಲ್.ಐ.ಎಸ್, ಮಲ್ ಬ್ರೋ ಶುಗರ್ಸ್,ದೊಡ್ಡಣ್ಣವರ ಇ.ಎಚ್.ಟಿ, ಬಾದಾಮಿ ಶುಗರ್ಸ್, 33 ಕೆವಿ ಇಎಚ್.ಟಿ,ಐಪಿಪಿ ಗ್ರಾಹಕರಾದ ಕಾಟವಾ, ಅಕೆಮಿ ಸೋಲಾರ ಐಪಿಪಿ,11ಕೆವಿ ಇಎಚ್.ಟಿ,ಐಪಿಪಿ ಗ್ರಾಹಕರಾದ ಎ.ವಿ.ಆಂಜನೇಯ ಪ್ರಸಾದ ಸೋಲಾರ ಪ್ರದೇಶಗಳಿಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

# ತಡವಾದ ಬೆಳವಣಿಗೆಯ ಮಕ್ಕಳಿಗೆ ಸಲಕರಣೆಗಳ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.21-ಬಿಜಾಪೂರ ಇಂಟಿಗ್ರೇಟೆಡ್ ರೂರಲ್ ಡೆವಲಪಮೆಂಟ್ ಸೊಸೈಟಿ (ಬರ್ಡ್ಸ್) ಹುನಗುಂದ ಮತ್ತು ಅಜೀಂ ಪ್ರೇಂಜಿ ಫೌಂಡೇಶನ್ ಬೆಂಗಳೂರು ಇವರ ಸಹಭಾಗಿತ್ವದಲ್ಲಿ ತಡವಾದ ಬೆಳವಣಿಗೆಯ ಮಕ್ಕಳಿಗೆ ಸಾಧನ ಸಲಕರಣೆಗಳ ವಿತರಣಾ ಕಾರ್ಯಕ್ರಮ ಬಾಗಲಕೋಟ ಅರ್ಲಿ ಇಂಟರ್ವೆನ್ಷನ್ ಸೆಂಟರ್‌ದಲ್ಲಿ ಶುಕ್ರವಾರ ಜರುಗಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಭುವನೇಶ್ವರಿ. ಯಳಮಲಿ, ಮಕ್ಕಳಿಗೆ ನಿಗದಿತ ಸಮಯಕ್ಕೆ ಲಸಿಕೆ ಹಾಕಿಸುವದು ಅತಿಮುಖ್ಯ. ಮುಂದಿನ ದಿನಗಳಲ್ಲಿ ಬರ್ಡ್ಸ್ ಸಂಸ್ಥೆ ಜೊತೆ ಕೈ ಜೋಡಿಸಿ ಮಕ್ಕಳ ಪುನಃಶ್ಚೇತನಕ್ಕೆ ಫಿಸಿಯೋಥೆರಪಿ ಮತ್ತು ಸ್ಪೀಚ್ ಥೆರಪಿ ಮುಂತಾದ ಸೇವೆಗಳನ್ನು ಒದಗಿಸುವುದಾಗಿ ತಿಳಿಸಿದರು.

ಚಿಕ್ಕಮಕ್ಕಳ ತಜ್ಞ ಡಾ.ಶೇಖರ್ ಮಾನೆ ಮಾತನಾಡಿ, ಡಾ.ಭುವನೇಶ್ವರಿ ಯಳಮಲಿ ಅವರು ನೀಡಿದ ಭರವಸೆಯಿಂದಾಗಿ ಈ ಮಕ್ಕಳ ಸಬಲೀಕರಣಕ್ಕೆ ಹೆಚ್ಚಿನ ಶಕ್ತಿ ಸಿಕ್ಕಂತಾಗಿದೆ ಎಂದರು.

ಸಾಮಾಜಿಕ ಕಾರ್ಯಕರ್ತರಾದ ಕಮತಗಿಯ ಜ್ಯೋತಿ ಸರಡಗಿ ಮಾತನಾಡಿ, ಮಕ್ಕಳನ್ನು ದೂಷಿಸದೇ ಆರೈಕೆದಾರರು ಧ್ಯಾನ, ಯೋಗ ಮಾಡುತ್ತ ಧೈರ್ಯದಿಂದ ಕಷ್ಟಗಳನ್ನು ಎದುರಿಸಿ ಆರೈಕೆ ಮಾಡಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ರಂಗನಗೌಡ ದಂಡನವರ, ಕಾರ್ಯದರ್ಶಿ ಮಹಾಂತೇಶ ಅಗಸಿಮುಂದಿನ ಮಾತನಾಡಿದರು. ಥೇರಪಿಸ್ಟ ದೀಪಾ ಹುಣಶಿಗಿಡದ ನಿರೂಪಿಸಿದರು. ಸಂಯೋಜಕ ಪ್ರವೀಣ ಪಾಟೀಲ ವಂದಿಸಿದರು. ಸಿಇಓ ಪ್ರವೀಣ ಅಗಸಿಮುಂದಿನ, ಇತರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ನಾಳೆ ಲಿಂಗದೀಕ್ಷೆ, ಲಿಂಗಪೂಜೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.21-ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ಬಾಗಲಕೋಟೆ ತಾಲೂಕಾ ಯುವ ಘಟಕ, ಮಹಿಳಾ ಘಟಕಗಳ ನೇತೃತ್ವದಲ್ಲಿ ಮಾ.23 ರಂದು ನಗರದ ಚರಂತಿಮಠದ ಶಿವಾನುಭವ ಕಲ್ಯಾಣ ಮಂಟಪದಲ್ಲಿ ಲಿಂಗದೀಕ್ಷೆ, ಲಿಂಗ ಪೂಜೆ ಹಾಗೂ ಮಹಿಳಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಬಣಜಿಗ ಸಮಾಜದ ಜಿಲ್ಲಾಧ್ಯಕ್ಷ ಶರಣಪ್ಪ ಗುಳೇದ ಹೇಳಿದರು.

ನವನಗರದ ಪತ್ರಿಕಾಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 7 ಗಂಟೆಯಿಂದ ಕಾರ್ಯಕ್ರಮ ಆರಂಭವಾಗಲಿದ್ದು, ಚಿತ್ತರಗಿ ಸಂಸ್ಥಾನಮಠದ ಮ.ನಿ.ಪ್ರ ಗುರುಮಹಾಂತ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಶರಣಪ್ಪ ಗುಳೇದ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶೈಲಜಾ ಕೌಜಗೇರಿ ಆಗಮಿಸಲಿದ್ದಾರೆ. ಸಂಘದ ಬಾಗಲಕೋಟೆ ತಾಲೂಕಾ ಅಧ್ಯಕ್ಷ ಬಸವರಾಜ ಶೀಲವಂತರ, ಯುವ ಘಟಕದ ತಾಲೂಕಾ ಅಧ್ಯಕ್ಷ ವಿನಯ ಕುಮಾರ ನಾವಲಗಿ, ಮಹಿಳಾ ಘಟಕದ ಗೌರವ ಉಪಾಧ್ಯಕ್ಷೆ ಶಂಕ್ರಮ್ಮ ಮುಚಖಂಡಿ, ಮಹಿಳಾ ಘಟಕದ ತಾಲೂಕಾ ಉಪಾಧ್ಯಕ್ಷೆ ಮೇಘಾ ಆನಂದ ಜಿಗಜಿನ್ನಿ ಉಪಸ್ಥಿತರಿರುವರು.

ಅಂದು ಬೆಳಗ್ಗೆ 7 ಗಂ-ಟೆಗೆ ಸಾಮೂಹಿಕ ಲಿಂಗಪೂಜೆ, ಲಿಂಗದೀಕ್ಷೆ ನಡೆಯಲಿದೆ. ಬೆಳಗ್ಗೆ 9.30 ಗಂಟೆಗೆ ಅಲ್ಪೋಪಹಾರ ಬಳಿಕ ವಿಶೇಷ ಸಾಧಕರಿಗೆ ಸನ್ಮಾನ, ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ,10.30 ಗಂಟೆಗೆ ಮಹಿಳಾ ದಿನಾಚರಣೆ ಅಂಗವಾಗಿ ಜಾನಪದ ಗೀತೆ, ಆಟಗಳು, ಇನ್ನಿತರ ಕಾರ್ಯಕ್ರಮ ಗಳು ಜರುಗಲಿವೆ ಎಂದು ಗುಳೇದ ತಿಳಿಸಿದರು.

ಉಪಾಧ್ಯಕ್ಷ ಸಂಗಮೇಶ ಅಂಗಡಿ ಮಾತನಾಡಿ, ಉದ್ಯಮ, ಉದ್ಯೋಗ ಮೇಳ, ಆರೋಗ್ಯ ಶಿಬಿರ, ಸೆಮಿನಾರ್‌ಗಳು ಸೇರಿದಂತೆ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ಯುವ ಘಟಕದಿಂದ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಮುಖಂಡರಾದ ವಿನಯ ನಾವಲಗಿ,ಮಹಾಂತೇಶ ಜೋಳದ, ಮೇಘಾ ಜಿಗಜಿನ್ನಿ, ಶಿವಲೀಲಾ ಪಟ್ಟಣಶೆಟ್ಟಿ, ಚೈತ್ರ ಕುಮಟಗಿ ಇತರರು ಇದ್ದರು.

# ವಾಹನ ಚಾಲಕ ಹುದ್ದೆಗೆ ಟೆಂಡರ್ ಆಹ್ವಾನ

ಕಲಬುರಗಿ,ಮಾ.21. ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಚೇರಿಯಲ್ಲಿ 2025-26ನೇ ಸಾಲಿಗೆ ಹೊರಗುತ್ತಿಗೆ ಆಧಾರದ ಮೇಲೆ ಓರ್ವ ಕಂಪ್ಯೂಟರ್ ಪ್ರೋಗ್ರಾಮರ್ ಹಾಗೂ ಓರ್ವ ವಾಹನ ಚಾಲಕ ಹುದ್ದೆಗೆ ನೇಮಕ ಮಾಡಿಕೊಳ್ಳಲು ಟೆಂಡರ್ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಚೇರಿಯ ಸಹ ನಿರ್ದೇಶಕರು (ಆಡಳಿತ) ಅವರು ತಿಳಿಸಿದ್ದಾರೆ.

ಟೆಂಡರ್ ಒಪ್ಪಂದದ ಅವಧಿಯು ದಿನಾಂಕ: 01-04-2025 ರಿಂದ 31-03-2026 ರವರೆಗೆ ಇದ್ದು, ಈಗಾಗಲೇ ಮಾರ್ಚ್ 20 ರಿಂದ ಇ-ಟೆಂಡರ್ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದೆ. ಟೆಂಡರ್ ದಾಖಲೆ ಸಲ್ಲಿಸಲು ಕೊನೆಯ ದಿನ ಮಾರ್ಚ್ 28 ರ ಸಂಜೆ 4 ಗಂಟೆಯವರೆಗೆ ಇರುತ್ತದೆ. ಮಾರ್ಚ್ 29 ರಂದು ಸಂಜೆ 4 ಗಂಟೆಗೆ ತಾಂತ್ರಿಕ ಟೆಂಡರ್ ಬಿಡ್ ಹಾಗೂ ಏಪ್ರಿಲ್ 1 ರಂದು ಸಂಜೆ 4 ಗಂಟೆಗೆ ಆರ್ಥಿಕ ಬಿಡ್‌ನ್ನು ತೆರೆಯಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಹ ನಿರ್ದೇಶಕರು (ಆಡಳಿತ), ಅಪರ ಆಯುಕ್ತರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಐವಾನ್ ಶಾಹಿ ಬಡಾವಣೆ ಕಲಬುರಗಿ ವಿಳಾಸಕ್ಕೆ ಸಂಪರ್ಕಿಸಲು ಕೋರಲಾಗಿದೆ.

LOST & FOUND

VYAVAHARENITINDIGAMBAR Diploma 1st Year (Marks Card No.A44423) Reg No. Y832060 LostFromPandarpurtoHumnabad Whil reaching College journey if any one Found Please Contact No.7517229782, 9740413741.

# ನಾಳೆ ಪ್ರೊ.ನಾಯನೇಗಲಿ ಅವರ ಕೃತಿ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.21-ಪ್ರೊ.ಆರ್.ಎಂ.ನಾಯನೇಗಲಿ ಅವರ 'ಬದುಕಿನ ಪಯಣದಲಿ ವೃತ್ತಿಯ ಸೊಗಡು' ಗ್ರಂಥ ಲೋಕಾರ್ಪಣೆ ಸಮಾರಂಭ ಮಾ.23 ರಂದು ಬೆಳಗ್ಗೆ 10.30 ಗಂಟೆಗೆ ಸಾಯಿ ಮಂದಿರದ ಸಭಾಭವನದಲ್ಲಿ ನಡೆಯಲಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಬಾಗಲಕೋಟೆ ಜಿಲ್ಲಾಧ್ಯಕ್ಷ ಎ.ಎಸ್.ಪಾವಟೆ ಹೇಳಿದರು.

ನವನಗರದ ಪತ್ರಿಕಾಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೊಳೆ ಹುಚ್ಚೇಶ್ವರ ಸಂಸ್ಥಾನಮಠದ ಮ.ನಿ.ಪ್ರ ಹುಚ್ಚೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಅಧ್ಯಕ್ಷತೆ ವಹಿಸಲಿದ್ದಾರೆ.

ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಜಿ.ಎನ್.ಪಾಟೀಲ, ಸಾಹಿತಿ ಪಿ.ಜಿ.ಸಿದ್ದಾಪೂರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಬಸವೇಶ್ವರ ಗ್ರಾಮೀಣಾಭಿವೃದ್ಧಿ ಸಂಘದ ಆಡಳಿತಾಧಿಕಾರಿ ಪ್ರೊ.ಎ.ಎಸ್. ಪಾಟೀಲ ಕೃತಿ ಕುರಿತು ಮಾತನಾಡಲಿದ್ದಾರೆ ಎಂದು ಪಾವಟೆ ತಿಳಿಸಿದರು. ಪ್ರೊ.ಸಿದ್ದರಾಮಯ್ಯ ಮಠಪತಿ, ಪ್ರೊ.ಆರ್.ಎಂ.ನಾಯನೇಗಲಿ ಇದ್ದರು.

# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ

## ಸಚಿವ ಸತೀಶ್ ಜಾರಕಿಹೊಳಿ ಸೇರಿ ಮೂವರಿಗೆ ಗೌರವ ಡಾಕ್ಟರೇಟ್

ಮಲ್ಲಮ್ಮ ನುಡಿ ವಾರ್ತೆ

ದಾವಣಗೆರೆ : ಮಾ.21 ಸರಳ ಸಜ್ಜನಿಕೆಯ ರಾಜ್ಯದ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಎಲ್. ಜಾರಕಿಹೊಳಿ ಸೇರಿದಂತೆ ಶ್ರೇಷ್ಠ ವ್ಯಕ್ತಿತ್ವ ಹೊಂದಿರುವ ಮೂವರಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ಪದವಿ ನೀಡಲಿದೆ.

ಐಡಿಯಲ್ ಎಜ್ಯುಕೇಷನ್ ಸೊಸೈಟಿ ಛೇರ್ಮನ್ ಸಿ.ಎಂ. ಇರ್ಫಾನುಲ್ಲಾ ಷರೀಫ್ ಮತ್ತು ಕಲಬುರಗಿಯ ಶರಣಬಸವೇಶ್ವರ ವಿದ್ಯಾ ವರ್ಧಕ ಸಂಘದ ಛೇರ್ಮನ್ ಡಾ.ದಾಕ್ಷಾಯಿಣಿ ಎಸ್.ಅಪ್ಪ ಇವರಿಗೆ ಕೂಡ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್ ಪದವಿ ನೀಡಲಿದೆ.

ಈ ಮೂವರು ಗಣ್ಯರಿಗೆ ಗೌರವ ಡಾಕ್ಟರೇಟ್ ಪದವಿಯನ್ನು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ತನ್ನ 20ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪ್ರದಾನ ಮಾಡಲಿದೆ.



ಈ ಮೂವರು ಗಣ್ಯರಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ 20ನೇ ವಾರ್ಷಿಕ ಘಟಿಕೋತ್ಸವದಲ್ಲಿ ಗೌರವ ಡಾಕ್ಟರೇಟ್ ಪದವಿ ನೀಡಲು ಕರ್ನಾಟಕ ರಾಜ್ಯದ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಪತಿಗಳಾದ ಥಾವರ್ ಚಂದ್ ಗೆಹಲೋಥ್ ಅವರು ಒಪ್ಪಿಗೆ ನೀಡಿದ್ದು, ರಾಜ್ಯಪಾಲರ ಅಧೀನ ಕಾರ್ಯದರ್ಶಿ ಬಿ.ಬಿ.ಪ್ರಶಾಂತ್ ಕುಮಾರ್ ಅವರು ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಉಪಕುಲಪತಿಗೆ ದಿನಾಂಕ:13–03–2025ರಂದು ಪತ್ರ ಬರೆದು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪದವಿಗೆ ಭಾಜನರಾದ ಲೋಕೋಪಯೋಗಿ ಸಚಿವರು, ವಾಲ್ಮೀಕಿ ನಾಯಕ ಸಮುದಾಯದ ಮತ್ತು ಅಹಿಂದ ಮುಖಂಡರು, ಮಾನವ ಬಂಧುತ್ವ ವೇದಿಕೆ ಸಂಸ್ಥಾಪಕರಾದ ಸತೀಶ್ ಜಾರಕಿಹೊಳಿ ಅವರಿಗೆ ಕರ್ನಾಟಕ ರಾಜ್ಯ ಪರಿಶಿಷ್ಟ ಪಂಗಡಗಳ ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷರು, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯಾಧ್ಯಕ್ಷರು ಹಾಗೂ ದಾವಣಗೆರೆ ಪಬ್ಲಿಕ್ ವಾಯ್ಸ್ ಪತ್ರಿಕೆಯ ಪ್ರಧಾನ ಸಂಪಾದಕರಾದ ಎ.ಸಿ.ತಿಪ್ಪೇಸ್ವಾಮಿ ಅವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಬೇಸಿಗೆ ರಜೆ ಹಿನ್ನೆಲೆ: ಕಲಬುರಗಿ-ದೌಂಡ್ ನಡುವೆ

## 180 ಬೇಸಿಗೆ ವಿಶೇಷ ರೈಲುಗಳು ಸಂಚಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.21:ರೈಲ್ವೆಯ ಸೋಲಾಪುರ ಕೇಂದ್ರ ವಿಭಾಗದ ಕಲಬುರಗಿ–ದೌಂಡ್ ನಡುವೆ 180 ಬೇಸಿಗೆ ವಿಶೇಷ ರೈಲುಗಳು ಸಂಚರಿಸಲಿವೆ ಎಂದು ರೈಲ್ವೆ ಇಲಾಖೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಬೇಸಿಗೆ ರಜೆಯ ಆರಂಭ ಮತ್ತು ಹೆಚ್ಚುತ್ತಿರುವ ಪ್ರಯಾಣಿಕರ ಸಂಖ್ಯೆಯನ್ನು ಪರಿಗಣಿಸಿ, ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿವಾರಿಸಲು ಕಲಬುರಗಿ–ದೌಂಡ್ ನಡುವೆ ಕೇಂದ್ರ ರೈಲ್ವೆಯ ಸೋಲಾಪುರ ವಿಭಾಗದ ಮೂಲಕ 180 ಬೇಸಿಗೆ ವಿಶೇಷ ರೈಲುಗಳನ್ನು ಓಡಿಸಲು ರೈಲ್ವೆ ಇಲಾಖೆ ನಿರ್ಧರಿಸಿದೆ. ವಿವರಗಳು ಈ ಕೆಳಗಿನಂತಿವೆ: ಕಲಬುರಗಿ–ದೌಂಡ್ ವಾರಕ್ಕೆ 5 ದಿನಗಳು ಕಾಯ್ದಿರಿಸದ ವಿಶೇಷ ರೈಲುಗಳು (128 ಟ್ರಿಪ್‌ಗಳು.) 01421 ವಿಶೇಷ ರೈಲು ಏಪ್ರಿಲ್ 5 ರಿಂದ ಜುಲೈ 2 ರವರೆಗೆ ವಾರದಲ್ಲಿ 5 ದಿನಗಳು (ಗುರುವಾರ ಮತ್ತು ಭಾನುವಾರ ಹೊರತುಪಡಿಸಿ) ಬೆಳಿಗ್ಗೆ 5 ಗಂಟೆಗೆ ದೌಂಡ್‌ದಿಂದ ಹೊರಟು ಅದೇ ದಿನ ಬೆಳಿಗ್ಗೆ 11:20 ಗಂಟೆಗೆ ಕಲಬುರಗಿಗೆ ಆಗಮಿಸಲಿದೆ. 01422 ವಿಶೇಷ ರೈಲು ಕಲಬುರಗಿಯಿಂದ ವಾರದ 5 ದಿನಗಳು (ಗುರುವಾರ ಮತ್ತು ಭಾನುವಾರ ಹೊರತುಪಡಿಸಿ) ಏಪ್ರಿಲ್ 5 ರಿಂದ ಜುಲೈ 2 ರವರೆಗೆ ಸಂಜೆ 4:10 ಕ್ಕೆ ಹೊರಟು ಅದೇ ದಿನ ರಾತ್ರಿ 22:20ಕ್ಕೆ ದೌಂಡೆಗೆ ತಲುಪಲಿದೆ. ಕಲಬುರಗಿ–ದೌಂಡ್ ದ್ವಿ-ವಾರದ ಕಾಯ್ದಿರಿಸದ ವಿಶೇಷ ರೈಲುಗಳು (52 ಟ್ರಿಪ್‌ಗಳು): 01425 ವಿಶೇಷ ರೈಲು ಏಪ್ರಿಲ್ 3 ರಿಂದ ಜೂನ್ 29 ರವರೆಗೆ ಪ್ರತಿ ಗುರುವಾರ ಮತ್ತು ಭಾನುವಾರ ಬೆಳಿಗ್ಗೆ 5 ಕ್ಕೆ ದೌಂಡ್ಗೆ ಹೊರಟು ಅದೇ ದಿನ ಬೆಳಿಗ್ಗೆ 11:20 ಕ್ಕೆ ಕಲಬುರಗಿಗೆ ಆಗಮಿಸಲಿದೆ. ವಿಶೇಷ ರೈಲು ಸಂಖ್ಯೆ 01426 ಪ್ರತಿ ಗುರುವಾರ ಮತ್ತು ಭಾನುವಾರ ಏಪ್ರಿಲ್ 3 ರಿಂದ ಜೂನ್ 29 ರವರೆಗೆ ರಾತ್ರಿ 20:30 ಕ್ಕೆ ಕಲಬುರಗಿಯಿಂದ ಹೊರಟು ಮರುದಿನ 02:30 ಕ್ಕೆ ದೌಂಡೆಗೆ ಆಗಮಿಸಲಿದೆ. ರೈಲು ಸಂಖ್ಯೆ 01421/01422 ಮತ್ತು 01425/01426 ರೈಲುಗಳ ನಿಲುಗಡೆ ವಿವರ: ಗಾಣಗಾಪುರ ರಸ್ತೆ, ದುಧನಿ, ಬೊರೋಟಿ, ಅಕ್ಕಲಕೋಟ್ ರಸ್ತೆ, ಹೋಟಗಿ, ಟಿಕೇರವಾಡಿ, ಸೋಲಾಪುರ, ಮೊಹೋಲ್, ಮಾಧಾ, ಕುರ್ದುವಾಡಿ, ಕೆಮ್, ಜೆಯೂರ್, ಪರೇವಾಡಿ ಮತ್ತು ಭಿಗ್ವಾನ್. 01421/01422 ಮತ್ತು 01425/01426 ರೈಲ್ವೆಗಳಲ್ಲಿ 10 ಸಾಮಾನ್ಯ ಎರಡನೇ ದರ್ಜೆ ಮತ್ತು 2 ಲಗೇಜ್ ಕಮ್ ಬ್ರೇಕ್ ವ್ಯಾನ್ಗಳು (12 ಕೋಚ್‌ಗಳು) ಹೊಂದಿರುತ್ತವೆ. ಪ್ರಯಾಣಿಕರು ತಪ್ಪದೇ ಟಿಕೇಟ್‌ಗಳೊಂದಿಗೆ ಪ್ರಯಾಣಿಸಬೇಕು. ಬೋಗಿಗಳ ಬುಕಿಂಗ್ ಅನ್ನು ನಿಲ್ದಾಣಗಳಲ್ಲಿನ ಬುಕಿಂಗ್ ಕೌಂಟರ್‌ಗಳ ಮತ್ತು ಯುಟಿಎಸ್ ಅಪ್ಲಿಕೇಶನ್ ಮೂಲಕವೂ ಮಾಡಬಹುದು. ಈ ವಿಶೇಷ ರೈಲುಗಳ ವಿವರವಾದ ಸಮಯ ಮತ್ತು ನಿಲುಗಡೆ ಕುರಿತು ಹೆಚ್ಚಿನ ಮಾಹಿತಿಗಾಗಿ www.enquiry.indianrail.gov.in ಗೆ ಭೇಟಿ ನೀಡಿ ಅಥವಾ NTES ಅಪ್ಲಿಕೇಶನ್ ಡೌನ್ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಪಿಐ ಹುದ್ದೆ ಸೃಜಿಸಲು ಗೃಹ ಸಚಿವರ ಅಂಕಿತ

## ನಗರ ಪೊಲೀಸ್ ಠಾಣೆ ಮೇಲ್ದರ್ಜೆಗೆ: ಶಾಸಕ ತುನ್ನೂರು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ.21: ನಗರ ಪೊಲೀಸ್ ಠಾಣೆಯನ್ನು ಮೇಲ್ದರ್ಜೆಗೇರಿಸಿ ಇನ್ನೊಂದು ಪೊಲೀಸ್ ಇನ್ಸಪೆಕ್ಟರ್ ಹುದ್ದೆ ಸೃಜಿಸುವುದಕ್ಕೆ ಗೃಹ ಸಚಿವರು ಕಡತಕ್ಕೆ ಸಹಿ ಹಾಕಿದ್ದು, ಶೀಘ್ರದಲ್ಲೇ ನಗರ ಠಾಣೆ ಮೇಲ್ದರ್ಜೆಗೇರಲಿದೆ ಎಂದು ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ತಿಳಿಸಿದ್ದಾರೆ.



ಈ ಕುರಿತು ಪತ್ರಿಕೆ ಹೇಳಿಕೆ ನೀಡಿದ್ದು, ಕಳೆದ ಫೆ. 4 ರಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರನ್ನು ಭೇಟಿಯಾಗಿ ನಗರ ಪೊಲೀಸ್ ಠಾಣೆ ಮೇಲ್ದರ್ಜೆಗೇರಿಸಿ ಇನ್ನೊಂದು ಪಿಐ ಹುದ್ದೆ ಸೃಜಿಸುವುದಕ್ಕೆ ಮನವಿ ಮಾಡಿದ್ದೆ. ಸಚಿವರು ಆಶ್ವಾಸನೆ ಕೊಟ್ಟಿದ್ದರು. ನುಡಿದಂತೆ ಸಚಿವರು ಕಡತಕ್ಕೆ ಸಹಿ ಹಾಕಿದ್ದು ಶೀಘ್ರದಲ್ಲೇ ಹುದ್ದೆ ಸೃಜಿಸಿ, ಸಿಬ್ಬಂದಿಯನ್ನು ನೇಮಕ ಮಾಡುವುದಕ್ಕೆ ಆದೇಶಿಸಿದ್ದಾರೆ ಎಂದು ತಿಳಿಸಿದರು.

ಯಾದಗಿರಿ ನಗರವು ಸುಮಾರು ಎರಡು ಲಕ್ಷಕ್ಕೂ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿರುತ್ತದೆ ನಗರ ಪೊಲೀಸ್ ಠಾಣೆಯಲ್ಲಿ ವರ್ಷ ವರ್ಷಕ್ಕೂ ಹೆಚ್ಚಿನ ಅಪರಾಧ ಪ್ರಕರಣಗಳು, ಕಳ್ಳತನ ಪ್ರಕರಣಗಳು ವರದಿಯಾಗುತ್ತಿದೆ. ನಗರ ಪೊಲೀಸ್ ಠಾಣೆಯಲ್ಲಿ ಕಳೆದ 3 ವರ್ಷಗಳಲ್ಲಿ ಅಂದರೆ 2022ನೇ ಸಾಲಿನಲ್ಲಿ 142 ಪ್ರಕರಣಗಳು, 2023ನೇ ಸಾಲಿನಲ್ಲಿ 182 ಪ್ರಕರಣಗಳು, 2024ನೇ ಸಾಲಿನಲ್ಲಿ 200 ಪ್ರಕರಣಗಳು ವರದಿಯಾಗಿದ್ದು ಕಾನೂನು ಸುವ್ಯವಸ್ಥೆ ಕಾಪಾಡಿಕೊಳ್ಳಲು ಸೂಕ್ತ ಮೇಲುಸ್ತುವಾರಿಗಾಗಿ ಪ್ರತ್ಯೇಕ ಕಚೇರಿ ಜೊತೆಗೆ ಒಬ್ಬರು ಪೊಲೀಸ್ ಇನ್ಸ್ಪೆಕ್ಟರ್ ಅವಶ್ಯವಾಗಿರುತ್ತದೆ ಎಂದು ಮನವಿ ಮಾಡಿದ್ದೆ. ಈ ಹಿನ್ನೆಲೆಯಲ್ಲಿ ಗೃಹ ಸಚಿವರು ಒಪ್ಪಿಗೆ ನೀಡಿದ್ದರು. ಅದರಂತೆ ಶೀಘ್ರದಲ್ಲೇ ಪಿಐ ಹುದ್ದೆ ಜೊತೆಗೆ ಕಚೇರಿಯೂ ಆರಂಭವಾಗುವುದರಲ್ಲಿ ಯಾವುದೇ ಅನುಮಾನವಿಲ್ಲ ಹಾಗೆ ಇದು ಬಹು ವರ್ಷಗಳ ಬೇಡಿಕೆಯೂ ಆಗಿತ್ತು ಎಂದರು. ನಗರದಲ್ಲಿ ಪ್ರತಿ ದಿನವೂ ಮುಷ್ಕರಗಳು ಮತ್ತು ಪ್ರತಿಭಟನೆಗಳು ನಡೆಯುತ್ತಿದ್ದು ಪ್ರತಿ ದಿವಸದ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಈ ಹುದ್ದೆ ಅವಶ್ಯಕವಾಗಿದೆ. ಜಿಲ್ಲಾ ಕೇಂದ್ರ ದಿನಗಳೆದಂತೆ ನಾಲ್ಕೂ ದಿಕ್ಕಿನಲ್ಲಿ ಶರವೇಗದಲ್ಲಿ ಬೆಳೆಯುತ್ತಿದೆ ಎಂದು ಮನವರಿಕೆ ಮಾಡಿಕೊಟ್ಟಿದ್ದೆ. ಯಾದಗಿರಿ ಜನರ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿದ ಗೃಹ ಸಚಿವರು. ನಗರ ಪೊಲೀಸ್ ಠಾಣೆಯನ್ನು ಮೇಲ್ದರ್ಜೆಗೇರಿಸಿ ಒಬ್ಬರು ಪೊಲೀಸ್ ಇನ್ಸ್ ಪೆಕ್ಟರ್ ಹುದ್ದೆ ಸೃಜನೆಗೆ ಅಂಕಿತ ಹಾಕಿದ್ದಾರೆಂದು ತಿಳಿಸಿದ್ದಾರೆ.

# ಬೀದರ ಜಿಲ್ಲೆಯಲ್ಲಿ ಸೋಯಾ ಉತ್ಪನ್ನಗಳ

## ಸಂಸ್ಕರಣ ಘಟಕ ಸ್ಥಾಪನೆಗೆ ಸುಂಕನಾಳ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.21 ಜಿಲ್ಲೆಯಲ್ಲಿ ಹೆಚ್ಚಿನ ರೈತರು ಸೋಯಾ ಬೆಳೆಯನ್ನು ಬೆಳೆಯಲಾಗುತ್ತಿದೆ ಆದರೆ ಅದರ ಸೂಕ್ತ ಮಾರುಕಟ್ಟೆ ಹಾಗೂ ಖರಿದಿ ಇರದೆ ಇರುವುದರಿಂದ ಉತ್ತಮ ಬೆಲೆ ರೈತರಿಗೆ ಸಿಗುತ್ತಿಲ್ಲ ಆದರಿಂದ ಬೀದರ ಜಿಲ್ಲೆಯಲ್ಲಿ ಸೋಯಾ ಉತ್ಪನಗಳ ಸಂಸ್ಕರಣ ಘಟಕ ಸ್ಥಾಪನೆ ಮಾಡಿ ರೈತರಿಗೆ ಅನುಕುಲ ಮಾಡಿಕೊಡಬೇಕು ಎಂದು ಕೇಂದ್ರ ಆಹಾರ ಮತ್ತು ಸಂಸ್ಕರಣ ಕೈಗಾರಿಕಾ ಸಚಿವರಾದ ಚಿರಾಗ ಪಾಸವಾನ್ ಇವರಿಗೆ ಲೋಕ ಜನ ಶಕ್ತಿ ಪಕ್ಷದ ರಾಜ್ಯ ಉಪಾಧ್ಯಕ್ಷರಾದ ನಾಗಶೆಟ್ಟಿ ಪಾಟೀಲ್ ಸುಂಕನಾಳ ಮನವಿ ಸಲ್ಲಿಸಿದರು. ದಿನಾಂಕ 19–03–2025ರಂದು ನವ ದೆಹಲಿಯ ಪಂಚಶೀಲ ಭವನದಲ್ಲಿ ರಾಜ್ಯ ನಿಯೋಗದೊಂದಿಗೆ ಭೇಟಿಯಾಗಿ ಮನವಿ ಸಲ್ಲಿಸಲಾಯಿತ್ತು. ಮನವಿ ಆಲಿಸಿದ ಸಚಿವರು ಸೋಯಾ ಉತ್ಪನಗಳ ಸಂಸ್ಕರಣಾ ಘಟಕ ಸ್ಥಾಪನೆಗೆ ಸಕರಾತ್ಮಕವಾಗಿ ಸ್ಪಂದಿಸಿದ್ದು ಮುಂಬರುವ ದಿನಗಳಲ್ಲಿ ಕ್ರಮವಿಡಲಾಗುವುದು ಎಂದು ತಿಳಿಸಿದರು. ಇದೆ ಸಂದರ್ಭದಲ್ಲಿ ಲೋಕ ಜನಶಕ್ತಿ ಪಕ್ಷದ ರಾಜ್ಯ ಅಧ್ಯಕ್ಷರಾದ ಎಚ್.ಎಸ್.ಜಗನಾಥ, ಕಿಶಾನ್ ಮೋರ್ಚಾ ರಾಜ್ಯ ಅಧ್ಯಕ್ಷರಾದ ವೆಂಕಟ ರೆಡ್ಡಿ, ಬೀದರ ಜಿಲ್ಲೆಯ ಅಧ್ಯಕ್ಷರಾದ ರಾಕೇಶ ಕುಲ್ಕರ್ಣಿ, ಕೃತಿಕಾ ಹೆಗಡೆ, ಇತರರು ಉಪಸ್ಥಿತರಿದ್ದರು.

# ಪರೀಕ್ಷಾ ಕೇಂದ್ರಕ್ಕೆ ಜಿಲ್ಲಾಧಿಕಾರಿ ಭೇಟಿ

## ಎಸ್.ಎಸ್.ಎಲ್.ಸಿ.ಪರೀಕ್ಷೆಗೆ 25,468 ವಿದ್ಯಾರ್ಥಿಗಳು ಹಾಜರು



ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.21: ಜಿಲ್ಲೆಯ 91 ಪರೀಕ್ಷಾ ಕೇಂದ್ರಗಳಲ್ಲಿ ಎಸ್.ಎಸ್.ಎಲ್.ಸಿ.ವಾರ್ಷಿಕ ಪರೀಕ್ಷೆಯ ಮೊದಲ ದಿನವಾದ ಇಂದು ಶಾಂತಿಯುತವಾಗಿ, ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ನಡೆಯಿತು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಬೀದರ ಹಳೇ ನಗರದ (ಓಲ್ಡ್ ಸಿಟಿ) ಅಲ್ ಅಮೀನ್ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಇಂದಿನ ಎಸ್ಎಸ್ಎಲ್ಸಿ ವಾರ್ಷಿಕ ಪರೀಕ್ಷೆಯು ಜಿಲ್ಲೆಯ ಔರಾದ್, ಬಸವಕಲ್ಯಾಣ, ಭಾಲ್ಕಿ, ಬೀದರ ಹಾಗೂ ಹುಮನಾಬಾದ ತಾಲ್ಲೂಕುಗಳಲ್ಲಿ ಪರೀಕ್ಷೆ ನಡೆದವು. ಪರೀಕ್ಷೆಗೆ ಒಟ್ಟು. 26,507 ವಿದ್ಯಾರ್ಥಿಗಳು ನೋಂದಣಿಗೊಂಡಿದ್ದು, ಈ ಪೈಕಿ 25,468 ವಿದ್ಯಾರ್ಥಿಗಳು ಹಾಜರಾಗಿದ್ದರು. 1039 ವಿದ್ಯಾರ್ಥಿಗಳು ಪರೀಕ್ಷೆಗೆ ಗೈರುಹಾಜರಾಗಿದ್ದರು.

# ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ - ಎ ಮತ್ತು

## ಗ್ರೂಪ್ - ಬಿ ವೃಂದದ ಮುಖ್ಯ ಪರೀಕ್ಷೆ ಮುಂದೂಡಿಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು : ಮಾ.21 ಕರ್ನಾಟಕ ಲೋಕಸೇವಾ ಆಯೋಗವು 2023–24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ – ಎ ಮತ್ತು ಗ್ರೂಪ್ – ಬಿ ವೃಂದದ 384 ಹುದ್ದೆಗಳಿಗೆ ಮುಖ್ಯ ಪರೀಕ್ಷೆಯ ಅಧಿಸೂಚನೆಯನ್ನು ದಿನಾಂಕ:13–02–2025ರಂದು ಪ್ರಕಟಿಸಿ, ಮುಖ್ಯ ಪರೀಕ್ಷೆಯನ್ನು ದಿನಾಂಕ:28–03–2025, 29–03–2025, 01–04–2025 ಮತ್ತು 02–04–2025ರಂದು ನಡೆಸಲು ದಿನಾಂಕವನ್ನು ನಿಗದಿಪಡಿಸಲಾಗಿತ್ತು. ಕಾರಣಾಂತರಗಳಿಂದ ಸದರಿ ಪರೀಕ್ಷೆಯ ದಿನಾಂಕವನ್ನು ಮುಂದೂಡಲಾಗಿದ್ದು, ಆಯೋಗದ ಅಂತರ್ಜಾಲದಲ್ಲಿ ಶೀಘ್ರವಾಗಿ ದಿನಾಂಕವನ್ನು ಪ್ರಕಟಿಸಲಾಗುವುದು ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಅವರು ಮಾರ್ಚ್ 21 ರ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಮಕ್ಕಳಲ್ಲಿ ಅದ್ಭುತ ಪ್ರತಿಭೆ ಅಡಗಿದೆ:ಗುರುಬಸವ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.21:ಪುಟಾಣಿ ಮಕ್ಕಳಲ್ಲಿ ಅದ್ಭುತ ಪ್ರತಿಭೆ ಅಡಗಿದೆ. ಅದನ್ನು ಗುರುತಿಸಿ ಸನ್ಮಾರ್ಗದ ಕಡೆಗೆ ಕೊಂಡೊಯ್ಯುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲ ಮಾಂಟೆಸ್ಸರಿ ಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ವಸ್ತು ಪ್ರದರ್ಶನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.



ವಸ್ತು ಪ್ರದರ್ಶನದಲ್ಲಿ ಬಾಲ್ಯದಲ್ಲೇ ಮಕ್ಕಳು ಒಂದಕ್ಕಿಂತ ಒಂದು ವಿಭಿನ್ನವಾಗಿ ಮಾದರಿಗಳನ್ನು ಸಿದ್ಧ ಪಡಿಸಿದ್ದಾರೆ. ದೇಶ, ವಿದೇಶದ ನಕಾಶೆ, ಭೂಮಂಡಲ, ಅಬ್ಯಾಕಸ್, ಸಾಮಾನ್ಯ ಜ್ಞಾನ ಸೇರಿ ವಿವಿಧ ಮಾದರಿಯ ಪರಿಚಯ ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ಪರಿಚಯಿಸಿ ತಮ್ಮ ಜ್ಞಾನವನ್ನು ಮತ್ತಷ್ಟು ವಿಸ್ತರಿಸಿ ಕೊಂಡಿದ್ದಾರೆ. ಇಡೀ ವಿಶ್ವವನ್ನು ಒಂದು ಕ್ಷಣದಲ್ಲಿ ಕಣ್ಣು ಮುಂದೆ ತರುವ ಪ್ರಯತ್ನವನ್ನು ಮಕ್ಕಳು ಮಾಡಿದ್ದಾರೆ. ಪ್ರೌಢ ಹಂತದಲ್ಲಿ ಇರುವ ಜ್ಞಾನವನ್ನು ಮಾಂಟೆಸ್ಸರಿ ಹಂತದಲ್ಲೇ ಮಕ್ಕಳು ಬೆಳೆಸಿ ಕೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಈ ಮಕ್ಕಳು ವಿಷಯ ಜ್ಞಾನದ ಜತೆಗೆ ಸಾಮಾನ್ಯ ಜ್ಞಾನವನ್ನು ವೃದ್ಧಿಸಿಕೊಂಡು ರಾಜ್ಯ, ರಾಷ್ಟ್ರಕ್ಕೆ ತಮ್ಮದೆ ಆದ ಕೊಡುಗೆ ನೀಡುವ ವಿಶ್ವಾಸ ಇದೆ ಎಂದು ತಿಳಿಸಿದರು. ಹಿರೇಮಠ ಸಂಸ್ಥಾನದ ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ ಸಮ್ಮುಖ ವಹಿಸಿದ್ದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಜಯಲಕ್ಷ್ಮಿ ಸೇರಿದಂತೆ ಸಿಬ್ಬಂದಿ ವರ್ಗದವರು, ಪಾಲಕರು ಇದ್ದರು.

ಬಾಲ್ಯದಿಂದಲೇ ಮಕ್ಕಳಲ್ಲಿನ ಪ್ರತಿಭೆ ಅರಳಿಸಲು ನಾಡೋಜ ಡಾ.ಬಸವಲಿಂಗಪಟ್ಟದ್ದೇವರು ಮಾಂಟೆಸ್ಸರಿ ಶಾಲೆ ತೆ–ರೆದು ಉತ್ತಮ ವೇದಿಕೆ ಕಲ್ಪಿಸಿದ್ದಾರೆ. ಎಲ್ಲರೂ ಸದುಪಯೋಗ ಪಡೆದು ಕೊಳ್ಳಬೇಕು.

– ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ವಸ್ತು ಪ್ರದರ್ಶನ

ವಸ್ತು ಪ್ರದರ್ಶನದಲ್ಲಿ ಪುಟಾಣಿ ಮಕ್ಕಳು ವಿವಿಧ ಮಾದರಿಗಳನ್ನು ಸಿದ್ಧಪಡಿಸಿ ಪ್ರದರ್ಶಿಸಿರುವುದು ಗಮನ ಸೆಳೆಯಿತು. ದೇಶ ವಿದೇಶದ ನಕಾಶೆ, ಭೂಮಂಡಲ, ಪ್ರಾಸ, ಅಬ್ಯಾಕಸ್, ಸಾಮಾನ್ಯ ಜ್ಞಾನ, ಒಗಟು, ಸಾರ್ವಜನಿಕ ಸ್ಥಳ ಮಾದರಿಗಳನ್ನು ಮಕ್ಕಳು ಪ್ರದರ್ಶಿಸಿ ವಿವರಣೆ ನೀಡಿ ಗಮನ ಸೆಳೆದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.